# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **461** |
| ಸದಸ್ಯರ ಹೆಸರು | : | ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | **06.03.2020** |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಮಹಿಳೆಯರಿಗೆ ಮತ್ತು ಮಕ್ಕಳಿಗೆ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ; (ವಿವರ ನೀಡುವುದು) | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಸಂಬಂಧಿಸಿದ ಮಾಹಿತಿಯನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ. |
| ಆ | ಗರ್ಭಿಣಿಯರಿಗೆ ಮತ್ತು ಬಾಣಂತಿಯರಿಗೆ ರೂಪಿಸಿರುವ ಯೋಜನೆಗಳ ಬಗ್ಗೆ ಸಮಗ್ರ ಮಾಹಿತಿ ನೀಡುವುದು; | ಮಾಹಿತಿಯನ್ನು ಅನುಬಂಧ-2 ರಲ್ಲಿ ಲಗತ್ತಿಸಿದೆ. |
| ಇ | ಹಿರಿಯ ನಾಗರೀಕರಕಲ್ಯಾಣಕ್ಕಾಗಿ ಇರುವ ಯೋಜನೆಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು? | ಮಾಹಿತಿಯನ್ನು ಅನುಬಂಧ-3 ರಲ್ಲಿ ಲಗತ್ತಿಸಿದೆ. |

**ಸಂ:ಮಮಇ 26 ಸ್ತ್ರೀಮರ 2020**

(ಶಶಿಕಲಾ ಅಣ್ಣಾಸಾಹೇಬ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

# ಅನುಬಂಧ-1

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ಕಾರ್ಯಕ್ರಮ/ಯೋಜನೆಗಳ ವಿವರ

**ಸ್ತ್ರೀಶಕ್ತಿ ಯೋಜನೆ: ಲೆಕ್ಕ ಶೀರ್ಷಿಕೆ:- 2235-02-103-0-41**

ಸ್ತ್ರೀಶಕ್ತಿ ಯೋಜನೆಯನ್ನು ರಾಜ್ಯದಲ್ಲಿ ಅಕ್ಟೋಬರ್ 2000 ರಿಂದ ಅನುಷ್ಠಾನಗೊಳಿಸಲಾಗುತ್ತಿದೆ. ರಾಜ್ಯದಲ್ಲಿ ಒಟ್ಟು 1,65,960/- ಸ್ತ್ರೀಶಕ್ತಿ ಸ್ವಸಹಾಯ ಗುಂಪುಗಳು ರಚನೆಯಾಗಿವೆ. ಮಹಿಳೆಯರನ್ನು ಸ್ತ್ರೀಶಕ್ತಿ ಗುಂಪುಗಳಲ್ಲಿ ಸಂಘಟಿಸುವುದರ ಮೂಲಕ ಆರ್ಥಿಕ ಹಾಗೂ ಸಾಮಾಜಿಕ ಸಶಕ್ತತೆಯನ್ನು ತರುವುದು ಯೋಜನೆಯ ಮುಖ್ಯ ಉದ್ದೇಶವಾಗಿದೆ.

ಜನವರಿ-2020ರ ಅಂತ್ಯದವರೆಗೆ, ಸ್ತ್ರೀಶಕ್ತಿ ಗುಂಪುಗಳಲ್ಲಿ ಒಟ್ಟು 25.81 ಲಕ್ಷ ಮಹಿಳಾ ಸದಸ್ಯರಿದ್ದು, ಪ್ರಾರಂಭದಿಂದ ಇಲ್ಲಿಯವರೆಗೆ ಒಟ್ಟು ರೂ.6037.25 ಕೋಟಿ ಉಳಿತಾಯ ಮಾಡಿರುತ್ತಾರೆ 1,45,531 ಗುಂಪುಗಳಿಗೆ ಬ್ಯಾಂಕುಗಳಿಂದ ರೂ.8163.86 ಕೋಟಿ ಸಾಲ ಸೌಲಭ್ಯವನ್ನು ಒದಗಿಸಲಾಗಿದೆ.

2019-20ನೇ ಸಾಲಿನಲ್ಲಿ ಸ್ತ್ರೀಶಕ್ತಿ ಯೋಜನೆಯ ಅನುಷ್ಠಾನಕ್ಕೆ ರೂ.1079.00 ಲಕ್ಷಗಳನ್ನು ನಿಗದಿಪಡಿಸಿದ್ದು, ಜನವರಿ-20202ರ ಅಂತ್ಯಕ್ಕೆ ರೂ.475.77 ಲಕ್ಷಗಳ ವೆಚ್ಚ ಭರಿಸಲಾಗಿದೆ.

**ಸುತ್ತು ನಿಧಿ :-**

2019-20ನೇ ಸಾಲಿನಲ್ಲಿ 1065 ಪರಿಶಿಷ್ಟ ಜಾತಿಯ ಗುಂಪುಗಳಿಗೆ ತಲಾ ರೂ.5,000/-ರಂತೆ ಒಟ್ಟು ರೂ.53.25 ಲಕ್ಷಗಳ ಸುತ್ತುನಿಧಿಯನ್ನು ಹಾಗೂ 2600 ಪರಿಶಿಷ್ಟ ಪಂಗಡಗಳ ಗುಂಪುಗಳಿಗೆ ತಲಾ ರೂ.5,000/-ರಂತೆ ಒಟ್ಟು ರೂ.130.00 ಲಕ್ಷಗಳ ಸುತ್ತುನಿಧಿಯನ್ನು ನೀಡಲಾಗಿದೆ. 2446 ಪರಿಶಿಷ್ಟ ಪಂಗಡಗಳ ಗುಂಪುಗಳಿಗೆ ಕಿಟ್ ಸಾಮಗ್ರಿ ಹಾಗೂ ದಾಖಲಾತಿ ನಿರ್ವಹಣೆ ತರಬೇತಿ ನೀಡಲು ರೂ.44.03 ಲಕ್ಷಗಳನ್ನು ನೀಡಲಾಗಿದೆ.

**ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ :-**

ಸ್ತ್ರೀಶಕ್ತಿ ಗುಂಪುಗಳು ಉತ್ಪಾದಿಸುವ ವಸ್ತುಗಳಿಗೆ ಮಾರುಕಟ್ಟೆ ಸೌಲಭ್ಯ ಒದಗಿಸಲು 2019-20ನೇ ಸಾಲಿನಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳಗಳನ್ನು ಏರ್ಪಡಿಸಲು ಪ್ರತಿ ಜಿಲ್ಲೆಗೆ ರೂ.75,000ಗಳಂತೆ ಒಟ್ಟು ರೂ.22.50 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ. ರಾಜ್ಯ ಮಟ್ಟದ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳವನ್ನು ಏರ್ಪಡಿಸಲು ಬೆಳಗಾವಿ ಜಿಲ್ಲೆಗೆ ರೂ.50.00 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ.

**ಸ್ತ್ರೀಶಕ್ತಿ ಸಮಾವೇಶ :-**

2019-20ನೇ ಸಾಲಿನಲ್ಲಿ ಜಿಲ್ಲಾ ಮಟ್ಟದಲ್ಲಿ ಸ್ತ್ರೀಶಕ್ತಿ ಸಮಾವೇಶವನ್ನು ಹಮ್ಮಿಕೊಳ್ಳಲು ಪ್ರತಿ ಜಿಲ್ಲೆಗೆ ರೂ.1.50 ಲಕ್ಷಗಳಂತೆ ಒಟ್ಟು ರೂ.45.00 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ.

**ಮೈಸೂರು ದಸರಾ ಮಹೋತ್ಸವ-2019:-**

ಮೈಸೂರು ದಸರಾ ಮಹೋತ್ಸವ-2019 ಪ್ರಯುಕ್ತ ಕರ್ನಾಟಕ ರಾಜ್ಯ ವಸ್ತು ಪ್ರದರ್ಶನ ಪ್ರಾಧಿಕಾರ ಆವರಣದಲ್ಲಿ ಮಾಹಿತಿ ಮಳಿಗೆಯನ್ನು ನಿರ್ಮಿಸಲು ರೂ.6.00 ಲಕ್ಷಗಳನ್ನು ಮೈಸೂರು ಜಿಲ್ಲೆಗೆ ಬಿಡುಗಡೆಗೊಳಿಸಲಾಗಿದೆ.

**ಅತ್ಯುತ್ತಮ ಗುಂಪು/ಒಕ್ಕೂಟಗಳಿಗೆ ಪ್ರಶಸ್ತಿ:-**

ಅತ್ಯುತ್ತಮ ಗುಂಪು/ಒಕ್ಕೂಟಗಳನ್ನು ಗುರುತಿಸಿ, ಗೌರವಿಸುವ ಸಲುವಾಗಿ ಜಿಲ್ಲಾ, ತಾಲ್ಲೂಕು ಹಾಗೂ ರಾಜ್ಯ ಮಟ್ಟದ ಪ್ರಶಸ್ತಿಗಾಗಿ ರೂ.9.68 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ.

**ಮಹಿಳಾ ಸಮಾಖ್ಯ ಕರ್ನಾಟಕ :-**

ಮಹಿಳಾ ಸಮಾಖ್ಯ ಕರ್ನಾಟಕ ಸಂಸ್ಥೆಯು ಕೋಲಾರ, ಚಿಕ್ಕಬಳ್ಳಾಪುರ, ಧಾರವಾಡ, ಯಾದಗಿರಿ, ಚಿತ್ರದುರ್ಗ, ಹಾವೇರಿ, ಗದಗ, ರಾಮನಗರ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಇಲಾಖೆಯ ಇತರೆ ಕಾರ್ಯಕ್ರಮಗಳ ಜೊತೆಗೆ ಮಹಿಳೆಯರ ಸರ್ವತೋಮುಖ ಅಭಿವೃದ್ಧಿಗಾಗಿ ಮಹಿಳೆಯರನ್ನು ಒಗ್ಗೂಡಿಸಿ ಮಹಿಳಾ ಹಕ್ಕು, ಸಾಕ್ಷರತೆ, ಮಹಿಳಾ ಸಬಲೀಕರಣ, ಲಿಂಗ ತಾರತಮ್ಯ, ಸಾಮಾಜಿಕ ಸಮಸ್ಯೆಗಳ ಕುರಿತು ಮಹಿಳೆಯರಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ. 2019-20ನೇ ಸಾಲಿನಲ್ಲಿ ಜನವರಿ-2020ರ ಅಂತ್ಯಕ್ಕೆ ಸದರಿ ಸಂಸ್ಥೆಗೆ ರೂ. 262.50 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ.

**ವಿಭಾಗೀಯ ಮಟ್ಟದಲ್ಲಿ ಸ್ತ್ರೀಶಕ್ತಿ ತರಬೇತಿ ಕೇಂದ್ರಗಳ ನಿರ್ಮಾಣ:ಲೆಕ್ಕ ಶೀರ್ಷಿಕೆ: 4235-02-103-1-04-059**

ಸ್ತ್ರೀಶಕ್ತಿ ಗುಂಪುಗಳ ಸದಸ್ಯರು ಉತ್ಪಾದಿಸುವ ವಸ್ತುಗಳನ್ನು ಮಾರಾಟ ಮಾಡಲು ಹಾಗೂ ಸದಸ್ಯರಿಗೆ ತರಬೇತಿಯನ್ನು ನೀಡುವ ಸಲುವಾಗಿ, 4 ಕಂದಾಯ ವಿಭಾಗಗಳಲ್ಲಿ ವಿಭಾಗ ಮಟ್ಟದ ತರಬೇತಿ ಕೇಂದ್ರಗಳನ್ನು ನಿರ್ಮಿಸಲಾಗಿದ್ದು, ಮುಂದುವರಿದ ಕಾಮಗಾರಿಗೆ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ. 2019-20ನೇ ಸಾಲಿನ ಆಯವ್ಯಯದಲ್ಲಿ, ಈ ಯೋಜನೆಯಡಿಯಲ್ಲಿ ರೂ. 20.00 ಲಕ್ಷ ಅನುದಾನವನ್ನು ನಿಗದಿಪಡಿಸಲಾಗಿದ್ದು, ಮೈಸೂರು ವಿಭಾಗೀಯ ತರಬೇತಿ ಕೇಂದ್ರಕ್ಕೆ ಮುಂದುವರೆದ ಕಾಮಗಾರಿಗೆ ಜನವರಿ-2020 ಅಂತ್ಯಕ್ಕೆ ರೂ.15.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

**ಸಾಂತ್ವನ: (2000-2001): ಲೆಕ್ಕ ಶೀರ್ಷಿಕೆ: 2235-02-103-0-99-100:**

ಸಮಾಜದಲ್ಲಿ ವರದಕ್ಷಿಣೆ ಕಿರುಕುಳ, ಲೈಂಗಿಕ ಕಿರುಕುಳ, ಕೌಟುಂಬಿಕ ದೌರ್ಜನ್ಯ, ಅತ್ಯಾಚಾರಕ್ಕೊಳಗಾದ ಮಹಿಳೆಯರಿಗೆ ಕಾನೂನು ನೆರವು, ತಾತ್ಕಾಲಿಕ ಆಶ್ರಯ, ಆರ್ಥಿಕ ಪರಿಹಾರ ಹಾಗೂ ತರಬೇತಿ ಮುಖಾಂತರ ಸ್ವಾವಲಂಬಿಗಳಾಗುವಂತೆ, ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಸಶಕ್ತರನ್ನಾಗಿಸುವ ಗುರಿ ಹೊಂದಿದೆ. ಪ್ರಸ್ತುತ 196 ಸಾಂತ್ವನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

**ಕೌಟುಂಬಿಕ ದೌರ್ಜನ್ಯದಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ನಿಯಮ 2006 :ಲೆಕ್ಕ ಶೀರ್ಷಿಕೆ: 2235-02-103-0-52-059:**

ಕುಟುಂಬದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯ ಉಂಟಾದಾಗ, ನ್ಯಾಯಾಲಯದ ಮುಖಾಂತರ ಮಹಿಳೆಯರಿಗೆ ಆರ್ಥಿಕ ಪರಿಹಾರ, ರಕ್ಷಣಾ ಆದೇಶ, ವಾಸದ ಆದೇಶ, ಮಕ್ಕಳ ವಶ, ತಾತ್ಕಾಲಿಕ ಆಶ್ರಯ, ವೈದ್ಯಕೀಯ ಹಾಗೂ ಕಾನೂನು ನೆರವನ್ನು ಒದಗಿಸಲು ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ಹಾಗೂ ನಿಯಮ 2006ನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಸ್ತುತ 47 ತಾಲ್ಲೂಕುಗಳಲ್ಲಿ ಮಾತ್ರ ಪ್ರತ್ಯೇಕ ಸಂರಕ್ಷಣಾಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದು, ಉಳಿದ ತಾಲ್ಲೂಕುಗಳಲ್ಲಿ ಶಿಶುಅಭಿವೃದ್ಧಿ ಯೋಜನಾಧಿಕಾರಿಗಳೇ ಸಂರಕ್ಷಣಾಧಿಕಾರಿಗಳಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಜಿಲ್ಲಾ ಮಟ್ಟದಲ್ಲಿ 30 ಜಿಲ್ಲೆಗಳ ಉಪನಿರ್ದೇಶಕರು ಸಂರಕ್ಷಣಾಧಿಕಾರಿಗಳಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

**"ಗೆಳತಿ"-ಜಿಲ್ಲಾ ವಿಶೇಷ ಚಿಕಿತ್ಸಾ ಘಟಕ: (2014-15) ಲೆಕ್ಕಶೀರ್ಷಿಕೆ: 2235-02-103-0-52 ಕೇಂದ್ರ ಪಾಲು : ರಾಜ್ಯದ ಪಾಲು - 0:100:**

2014-15ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಈ ಯೋಜನೆಯನ್ನು ಘೋಷಿಸಲಾಗಿರುತ್ತದೆ. ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಸೌಲಭ್ಯ ಅಂದರೆ, ವೈದ್ಯಕೀಯ ಚಿಕಿತ್ಸೆ ಮತ್ತು

ನೆರವು, ಪೊಲೀಸ್ ನೆರವು, ಕಾನೂನು ನೆರವು ಹಾಗೂ ಸಮಾಲೋಚನೆ ವ್ಯವಸ್ಥೆಗಳನ್ನು ಒದಗಿಸಲು "ಗೆಳತಿ"- ವಿಶೇಷ ಚಿಕಿತ್ಸಾ ಘಟಕಗಳನ್ನು ರಾಜ್ಯದ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಹಾಗೂ ಬೆಂಗಳೂರು ಮಹಾನಗರದಲ್ಲಿ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆ ಹಾಗೂ ಕೆ.ಸಿ.ಜನರಲ್ ಆಸ್ಪತ್ರೆಗಳಲ್ಲಿ ಪ್ರಾರಂಭಿಸಲಾಗಿರುತ್ತದೆ. ಈ ಘಟಕಗಳು ದಿನದ 24 ಗಂಟೆಗಳು ಕಾರ್ಯ ನಿರ್ವಹಿಸುತ್ತಿದೆ. ಘಟಕದಲ್ಲಿ ವೈದ್ಯಾಧಿಕಾರಿಗಳು, ಕಾನೂನು ಸಲಹೆಗಾರರು, ಪೊಲೀಸ್ ಅಧಿಕಾರಿಗಳು, ಆಪ್ತ ಸಮಾಲೋಚಕರು ಹಾಗೂ ಸಮಾಜ ಸೇವಾ ಕಾರ್ಯಕರ್ತರು ಕಾರ್ಯನಿರ್ವಹಿಸುತ್ತಿದ್ದು, ನೊಂದ ಮಹಿಳೆಯರಿಗೆ ಅಗತ್ಯ ಸೇವೆಗಳನ್ನು
ಒದಗಿಸಲಾಗುತ್ತಿದೆ. ಪ್ರಸ್ತುತ ಜಿಲ್ಲೆಯಲ್ಲಿ 33 "ಗೆಳತಿ"-ಜಿಲ್ಲಾ ವಿಶೇಷ ಚಿಕಿತ್ಸಾ ಘಟಕಗಳು ಕಾರ್ಯನಿರ್ವಹಿಸುತ್ತಿದೆ.

2017-18ನೇ ಸಾಲಿನ ಆಯವ್ಯಯ ಘೋಷಣೆಯಂತೆ ಎಲ್ಲಾ 145 ತಾಲ್ಲೂಕುಗಳಲ್ಲಿ ದಿ:19-03-2018 ರಂದು "ಗೆಳತಿ"-ತಾಲ್ಲೂಕು ವಿಶೇಷ ಚಿಕಿತ್ಸಾ ಘಟಕವನ್ನು ಉದ್ಘಾಟಿಸಲಾಗಿದೆ.

**ಸ್ಥೈರ್ಯನಿಧಿ ಯೋಜನೆ:**

2015-16ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಆಸಿಡ್ ದಾಳಿಗೊಳಗಾದ ಮಹಿಳೆಯರಿಗೆ ಆರ್ಥಿಕ ಪರಿಹಾರ ನೀಡಲು ರಾಜ್ಯ ಮಟ್ಟದಲ್ಲಿ ರೂ.500.00 ಲಕ್ಷದಲ್ಲಿ ಮಹಿಳೆಯರ ನಿಧಿಯನ್ನು ಸ್ಥಾಪಿಸಲಾಗುವುದು. ಈ ನಿಧಿಯಿಂದ ದೌರ್ಜನ್ಯಕ್ಕೊಳಗಾದ ಮಹಿಳೆಯರ ತುರ್ತು ಪರಿಹಾರಕ್ಕಾಗಿ ರೂ. 25000/- ಗಳನ್ನು ನೀಡಲಾಗುವುದು. ಹಾಗೂ ಪ್ರತಿ ಪ್ರಕರಣಕ್ಕೆ ಗರಿಷ್ಠ ರೂ.2.00ಲಕ್ಷ ಪರಿಹಾರ ನೀಡಲು ಅವಕಾಶವನ್ನು ಕಲ್ಪಿಸಲಾಗಿದೆ. ದೌರ್ಜನ್ಯದಿಂದ ಅಥವಾ ಆಸಿಡ್ ದಾಳಿಗೊಳಗಾಗಿ ಮೃತಪಟ್ಟಲ್ಲಿ ಸದರಿ ಕುಟುಂಬಕ್ಕೆ ರೂ.1.00 ಲಕ್ಷ ಮರಣ ಪರಿಹಾರವನ್ನು ನೀಡಲಾಗುವುದು. ಮಾನ್ಯ ಉಚ್ಚನ್ಯಾಯಾಲಯದ ಆದೇಶದನ್ವಯ ಈ ಯೋಜನೆಯನ್ನು ಪ್ರತೀ ಜಿಲ್ಲೆಯಲ್ಲಿ ಡಿ.ಎಲ್.ಎಸ್.ಎ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ.

**ರಾಜ್ಯ ಸರ್ಕಾರದ ಉದ್ಯೋಗಸ್ಥ ಮಹಿಳೆಯರ ವಸತಿಗೃಹ ನಿರ್ಮಾಣ ಯೋಜನೆ(2010-11 ರಿಂದ) ಲೆಕ್ಕ ಶೀರ್ಷಿಕೆ:- 2235-02-103-0-62 (ಯೋಜನೆ) 059 ಇತರೆ ವೆಚ್ಚ, ಕೇಂದ್ರ ಪಾಲು : ರಾಜ್ಯದ ಪಾಲು - 0:100:**

ಉದ್ಯೋಗಸ್ಥ ಮಹಿಳೆಯರಿಗೆ ಸುರಕ್ಷಿತ ಹಾಗೂ ಯೋಗ್ಯ ವಸತಿ ಸೌಕರ್ಯ ಕಲ್ಪಿಸುವುದು ಯೋಜನೆಯ ಉದ್ದೇಶವಾಗಿದೆ. ಈ ಯೋಜನೆಯಡಿ ರೂ.25.00 ಲಕ್ಷಗಳನ್ನು ಕಟ್ಟಡ ಕಾಮಗಾರಿಗಾಗಿ ಅರ್ಹ ಸ್ವಯಂಸೇವಾ ಸಂಸ್ಥೆಗಳಿಗೆ ಬಿಡುಗಡೆ ಮಾಡಲಾಗುವುದು. ಪ್ರಸ್ತುತ ಈ ಯೋಜನೆಯಡಿ 5 ವಸತಿನಿಲಯಗಳಿಗೆ ಮಂಜೂರಾತಿ ನೀಡಲಾಗಿದೆ.

**ಮಹಿಳಾ ಉದ್ದೇಶಿತ ಆಯವ್ಯಯ:**

ರಾಜ್ಯದಲ್ಲಿ 2007-08ನೇ ಸಾಲಿನಿಂದ ಮಹಿಳಾ ಉದ್ದೇಶಿತ ಆಯವ್ಯಯವನ್ನು ಅನುಷ್ಠಾನಗೊಳಿಸಲಾಗುತ್ತಿದೆ. 2015-16ನೇ ಸಾಲಿನಿಂದ ಮಹಿಳಾ ಉದ್ದೇಶಿತ ಆಯವ್ಯಯದ ಪರಾಮರ್ಶೆ ಹಾಗೂ ಪ್ರಗತಿ ಪರಿಶೀಲನೆಯ ಜವಾಬ್ದಾರಿಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಹಸ್ತಾಂತರಿಸಲಾಗಿರುತ್ತದೆ. ಮಹಿಳಾ ಉದ್ದೇಶಿತ ಆಯವ್ಯಯವನ್ನು 29 ಬೇಡಿಕೆಗಳಡಿಯಲ್ಲಿ ಎರಡು ವರ್ಗಗಳಲ್ಲಿ ಪ್ರಚುರಪಡಿಸಲಾಗಿದೆ. ಶೇ.100ರಷ್ಟು ಮಹಿಳೆಯರ ಸೌಕರ್ಯಕ್ಕಾಗಿ ಇರುವ 'ಎ' ವರ್ಗದ ಯೋಜನೆಗಳು ಹಾಗೂ ಶೇ.30ರಿಂದ ಶೇ.99ರವರೆಗಿನ ಅನುದಾನವನ್ನು ಮಹಿಳೆಯರಿಗಾಗಿಯೇ ಮೀಸಲಿಟ್ಟಿರುವ ಯೋಜನೆಗಳು.

2018-19ನೇ ಸಾಲಿನ ಮಹಿಳಾ ಉದ್ದೇಶಿತ ಆಯವ್ಯಯ ದಾಖಲೆಯಲ್ಲಿ ಎಲ್ಲಾ ಇಲಾಖೆಗಳ ಒಟ್ಟು 760 ಯೋಜನೆಗಳಿದ್ದು, ಇವುಗಳಲ್ಲಿ 'ಎ' ವರ್ಗದಲ್ಲಿ 62 ಯೋಜನೆಗಳನ್ನು 'ಬಿ' ವರ್ಗದಲ್ಲಿ 698 ಯೋಜನೆಗಳನ್ನು ಮಹಿಳಾ ಉದ್ದೇಶಿತ ಯೋಜನೆಗಳೆಂದು ಗುರುತಿಸಲಾಗಿದೆ. 'ಎ' ವರ್ಗದಡಿ 56 ಯೋಜನೆಗಳನ್ನು 'ಬಿ' ವರ್ಗದಡಿ 333 ಯೋಜನೆಗಳನ್ನು ನೇರ ಫಲಾನುಭವಿ ಉದ್ದೇಶಿತ ಕಾರ್ಯಕ್ರಮಗಳೆಂದು ಗುರುತಿಸಲಾಗಿದೆ ಹಾಗೂ 'ಎ' ವರ್ಗದಡಿ 6 ಕಾರ್ಯಕ್ರಮಗಳನ್ನು ಮತ್ತು 'ಬಿ' ವರ್ಗದಡಿ 365 ಕಾರ್ಯಕ್ರಮಗಳನ್ನು ಫಲಾನುಭವಿ ಉದ್ದೇಶಿತವಲ್ಲದ ಕಾರ್ಯಕ್ರಮಗಳೆಂದು ಪ್ರತ್ಯೇಕವಾಗಿ ಗುರುತಿಸಲಾಗಿದೆ.

**ಕರ್ನಾಟಕ ವಿವಾಹ ಕಾಯ್ದೆ, 1976: (ರಾಜ್ಯ ಕಾಯ್ದೆ)**

ಈ ಕಾಯ್ದೆಯನ್ನು ದಿನಾಂಕ 1-4-2004 ರಂದು ಕರ್ನಾಟಕ ರಾಜ್ಯದಲ್ಲಿ ಜಾರಿಗೆ ತರಲಾಗಿದೆ ಹಾಗೂ ಈ ಕಾಯ್ದೆಗೆ ರಾಜ್ಯದ ನಿಯಮಗಳನ್ನು 18-4-2006ರ ಅಧಿಸೂಚನೆಯನ್ವಯ ಹೊರಡಿಸಲಾಗಿದೆ. ಇನ್ಸ್‌ಪೆಕ್ಟರ್ ಜನರಲ್ ಆಫ್ ರಿಜಿಸ್ಟ್ರೇಷನ್ ಮತ್ತು ಕಮಿಷನರ್ ಆಫ್ ಸ್ಟ್ಯಾಂಪ್ಸ್‌ರವರನ್ನು ಮುಖ್ಯ ವಿವಾಹ ನೋಂದಣಾಧಿಕಾರಿಗಳಾಗಿ ನೇಮಿಸಲಾಗಿದೆ. ಮುದ್ರಾಂಕ ಮತ್ತು ನೋಂದಣಿ ಇಲಾಖೆಯ ಉಪ ನೋಂದಣಾಧಿಕಾರಿಗಳನ್ನು ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಹಾಗೂ ಕಂದಾಯ ಇಲಾಖೆಯ ಗ್ರಾಮ ಲೆಕ್ಕಿಗರನ್ನು ಗ್ರಾಮಾಂತರ ಮಟ್ಟದಲ್ಲಿ ವಿವಾಹ ನೋಂದಣಿ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ. ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ ಎಲ್ಲಾ ಧರ್ಮೀಯ ವಿವಾಹವನ್ನು ಕಡ್ಡಾಯವಾಗಿ ನೋಂದಣಿ ಮಾಡಿಸಲು ಆದೇಶಿಸಿರುವುದರಿಂದ, ಪರಿಷ್ಕೃತ ಕರಡು ನಿಯಮಗಳನ್ನು ರಚಿಸಲಾಗಿದೆ.

**ವರದಕ್ಷಿಣೆ ನಿಷೇಧ ಕಾಯ್ದೆ 1961 (2007-08)**

ವರದಕ್ಷಿಣೆಯ ವ್ಯವಸ್ಥೆಯು ಒಂದು ಸಾಮಾಜಿಕ ಪಿಡುಗಾಗಿದ್ದು, ವರದಕ್ಷಿಣೆ ಕೊಡುವುದು ಹಾಗೂ ತೆಗೆದುಕೊಳ್ಳುವುದು ವರದಕ್ಷಿಣೆ ನಿಷೇದ ಕಾಯ್ದೆ 1961ರ ಕಾಯ್ದೆಯ ಪ್ರಕಾರ ಶಿಕ್ಷಾರ್ಹ ಅಪರಾಧವಾಗಿರುತ್ತದೆ. ಈ ಕಾಯ್ದೆಗೆ 1984 ಹಾಗೂ 1986ರಲ್ಲಿ ತಿದ್ದುಪಡಿಯನ್ನು ಮಾಡಲಾಗಿದೆ. ರಾಜ್ಯದಲ್ಲಿ ಇದಕ್ಕೆ ನಿಯಮಾವಳಿಗಳನ್ನು ದಿನಾಂಕ:31-3-2004ರಲ್ಲಿ ಅಧಿಸೂಚನೆ ಹೊರಡಿಸಲಾಗಿದೆ. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರನ್ನು ಮುಖ್ಯ ವರದಕ್ಷಿಣೆ ನಿಷೇಧ ಅಧಿಕಾರಿಗಳನ್ನಾಗಿ ದಿನಾಂಕ:17-6-2004ರ ಅಧಿಸೂಚನೆಯ ಪ್ರಕಾರ ನೇಮಿಸಲಾಗಿರುತ್ತದೆ. ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವ ಜಿಲ್ಲಾ ಸಮನ್ವಯ ಸಮಿತಿಯ ಮೂಲಕ ಈ ಕಾಯ್ದೆಯ ಅನುಷ್ಠಾನದ ಪರಿಶೀಲನೆಯನ್ನು ಕೈಗೊಳ್ಳಲಾಗುತ್ತಿದೆ. ವರದಕ್ಷಿಣೆ ಪಿಡುಗನ್ನು ನಿವಾರಿಸುವಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ.

**ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ: ಲೆಕ್ಕಶೀರ್ಷಿಕೆ:2235-02-102-0-99, ಕೇಂದ್ರ ಪಾಲು : ರಾಜ್ಯದ ಪಾಲು – 0:100:**

ಪತಿ ವರ್ಷ ಮಾರ್ಚ್ 8 ರಂದು ಅಂತರ ರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಆಚರಿಸಲಾಗುತ್ತಿದೆ. ಇಲಾಖೆಯು ಹಾಗೂ ಸ್ವಯಂ ಸೇವಾ ಸಂಸ್ಥೆಗಳು ಏರ್ಪಡಿಸುವ ಕಾರ್ಯಕಮಗಳಲ್ಲಿ ಮಹಿಳೆಯರ ಅಭಿವೃದ್ಧಿಗೆ ಸಂಬಂಧಿಸಿದ ಹಾಗೂ ಸಬಲೀಕರಣಗೊಳಿಸುವ ವಿಷಯಗಳ ಬಗ್ಗೆ ಹೆಚ್ಚು ಒತ್ತು ನೀಡಲಾಗುತ್ತಿದೆ.

ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಸಂದರ್ಭದಲ್ಲಿ ಮಹಿಳೆಯರ ಅಭಿವೃದ್ಧಿಗಾಗಿ ಐದು ವರ್ಷಗಳ ಕಾಲ ಸತತವಾಗಿ ಕಾರ್ಯೋನ್ಮುಖವಾಗಿರುವ ಸ್ವಯಂ ಸೇವಾ ಸಂಸ್ಥೆಗಳಿಗೆ ಮತ್ತು ವ್ಯಕ್ತಿಗಳಿಗೆ ಕಿತ್ತೂರು ರಾಣಿ ಚೆನ್ನಮ್ಮ ಪಶಸ್ತಿ ನೀಡುವ ಬಗ್ಗೆ ಪತ್ರಿಕೆಯಲ್ಲಿ ಪಕಟಿಸಲಾಗುವುದು. ಸ್ವಯಂ ಸೇವಾ ಸಂಸ್ಥೆಗೆ ನೀಡುವ ಪ್ರಶಸ್ತಿಯು ರೂ.50000/- ನಗದು ಮತ್ತು ಪಶಸ್ತಿ ಪತ್ರ ಒಳಗೊಂಡಿರುತ್ತದೆ. ವೈಯಕ್ತಿಕ ಪಶಸ್ತಿಯನ್ನು ಮಹಿಳಾ ಅಭಿವೃದ್ಧಿ, ಕೀಡೆ, ಸಾಹಿತ್ಯ, ಕಲೆ, ಶಿಕ್ಷಣ ಕ್ಷೇತ್ರಗಳಲ್ಲಿ ಉತ್ತಮ ಸೇವೆ ಸಲ್ಲಿಸಿದ ಮಹಿಳೆಯರಿಗೆ ಪ್ರಕಟಿಸಲಾಗುವುದು. ಅದು ತಲಾ ರೂ.25,000/- ನಗದು ಮತ್ತು ಪಶಸ್ತಿ ಪತವನ್ನು ಒಳಗೊಂಡಿರುತ್ತದೆ.

ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಪ್ರಶಸ್ತಿ ನೀಡಲು ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರ ಅಧ್ಯಕ್ಷತೆಯಲ್ಲಿ ರಚಿಸಿರುವ ಆಯ್ಕೆ ಸಮಿತಿಯ ಮುಖಾಂತರ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಸೂಕ್ತ ಪ್ರಸ್ತಾವನೆಗಳನ್ನು ಪ್ರಶಸ್ತಿಗೆ ಆಯ್ಕೆ ಮಾಡುವ ಅಧಿಕಾರ ಹೊಂದಿರುತ್ತದೆ.

**ಮಹಿಳೆಯರ ಬಗ್ಗೆ ಸಕಾರಾತ್ಮಕ ಮನೋಭಾವವನ್ನು ಮೂಡಿಸಲು ಲಿಂಗತ್ವದ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ :(2018-19)**

ಮಹಿಳೆಯರ ಬಗ್ಗೆ ಸಕಾರಾತ್ಮಕ ಮನೋಭಾವವನ್ನು ಮೂಡಿಸಲು ಮತ್ತು ಸುರಕ್ಷಿತ ವಾತಾವರಣವನ್ನು ಕಲ್ಪಿಸಲು ಸರ್ಕಾರಿ ಸಿಬ್ಬಂದಿಗಳಿಗೆ/ಸಮುದಾಯ ಪೋಲೀಸ್ ಸ್ವಯಂ ಸೇವಕರು/ ಪ್ರೆಸಿಡೆಂಟ್ ವೆಲ್‌ಫೇರ್ ಅಸೋಸಿಯೇಷನ್/ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ, ವಿಶೇಷವಾಗಿ ಬಾಲಕರಿಗೆ ಲಿಂಗತ್ವದ ಬಗ್ಗೆ ಅರಿವು

ಮೂಡಿಸಲು ರೂ.2.00 ಕೋಟಿಗಳನ್ನು ನಿಗದಿಪಡಿಸಲಾಗಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ:ಮಮಇ101ಮಮಅ2018, ಬೆಂಗಳೂರು, ದಿನಾಂಕ:14.09.2018 ರಲ್ಲಿ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದ್ದು, ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗಿದೆ.

**ಹೆಚ್.ಐ.ವಿ. /ಏಡ್ಸ್‌ನಿಂದ ಬಾಧಿತರಾದ ಮಹಿಳೆಯರಿಗೆ ಆಶ್ರಯ ಒದಗಿಸುವುದು : (2018–19)**

ರಾಜ್ಯದಲ್ಲಿ ಹೆಚ್.ಐ.ವಿ. /ಏಡ್ಸ್‌ನಿಂದ ಬಾಧಿತರಾದ ಕುಟುಂಬ ಹಾಗೂ ಮಹಿಳೆಯರ ಪೋಷಣೆ ಮತ್ತು ರಕ್ಷಣೆಗಾಗಿ ವಿಭಾಗೀಯ ಮಟ್ಟದಲ್ಲಿ ಆಶ್ರಯ ಕೇಂದ್ರ ಸ್ಥಾಪಿಸಲು ಸ್ವಯಂಸೇವಾ ಸಂಸ್ಥೆಗಳಿಗೆ ಒಟ್ಟು ರೂ.1.00 ಕೋಟಿ ಅನುದಾನ ನೀಡಲಾಗುವುದು. ಸರ್ಕಾರದ ಆದೇಶ ಸಂಖ್ಯೆ:ಮಮಇ99ಮಮಅ2018 ಬೆಂಗಳೂರು, ದಿನಾಂಕ:20.09.2018ರಲ್ಲಿ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದ್ದು, ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗಿದೆ.

**ಟ್ರಾನ್ಸಿಟ್ ಹಾಸ್ಟೆಲ್ ಯೋಜನೆ (2018–19)**

ಉದ್ಯೋಗ, ಸಂದರ್ಶನ, ಪ್ರವೇಶ ಪರೀಕ್ಷೆ ಹಾಗೂ ಇನ್ನಿತರೆ ಕೋರ್ಸ್‌ಗಳ ಪ್ರವೇಶ ಪರೀಕ್ಷೆಗಳಿಗೆ ಹಾಜರಾಗಲು ಬೆಂಗಳೂರಿಗೆ ಬರುವ ಮಹಿಳೆಯರಿಗೆ ಸುರಕ್ಷಿತ ಆಶ್ರಯ, ರಕ್ಷಣೆ ಹಾಗೂ ಇನ್ನಿತರ ಅಂಶಗಳನ್ನು ಪರಿಗಣಿಸಿ ರಾಜ್ಯ ಸರ್ಕಾರವು ಅವರಿಗೆ ಟ್ರಾನ್ಸಿಟ್ 13 ಹಾಸ್ಟೆಲ್‌ಗಳನ್ನು ಪ್ರಾರಂಭಿಸಲಾಗುವುದು. ಸರ್ಕಾರದ ಆದೇಶ ಸಂಖ್ಯೆ:ಮಮಇ100ಮಮಅ2018, ಬೆಂಗಳೂರು, ದಿನಾಂಕ:05.10.2018 ರಲ್ಲಿ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದ್ದು, ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗಿದೆ.

**ಬಾಲಕಿಯರ ವಸತಿ ನಿಲಯ: ಲೆಕ್ಕ ಶೀರ್ಷಿಕೆ: 2235–02–103–0–99–100:**

ಹಿಂದುಳಿದ ತಾಲ್ಲೂಕುಗಳ ಗ್ರಾಮಾಂತರ ಪ್ರದೇಶದ ಹೆಣ್ಣುಮಕ್ಕಳ ವಿದ್ಯಾಭ್ಯಾಸವನ್ನು ಪ್ರೋತ್ಸಾಹಿಸಲು ಹಾಗೂ ಶಾಲೆ ಬಿಡುವುದನ್ನು ತಪ್ಪಿಸಲು ಅನುಕೂಲವಾಗುವಂತೆ, ಇಲಾಖಾ ಅನುದಾನಿತ ಸ್ವಯಂಸೇವಾ ಸಂಸ್ಥೆಗಳ ಮೂಲಕ 21 ಜಿಲ್ಲೆಗಳಲ್ಲಿ 41 ವಸತಿ ನಿಲಯಗಳನ್ನು ನಡೆಸಲಾಗುತ್ತದೆ.

**ಉದ್ಯೋಗಸ್ಥ ಮಹಿಳೆಯರ ಮಕ್ಕಳಿಗೆ ಶಿಶುಪಾಲನಾ ಕೇಂದ್ರ (ಜಿಲ್ಲಾ ಪಂಚಾಯತ್ ಯೋಜನೆ):–ಲೆಕ್ಕ ಶೀರ್ಷಿಕೆ: 2211–00–102–0–63–100**

ಈ ಯೋಜನೆಯಡಿ ಇಲಾಖೆಯು ಗ್ರಾಮಾಂತರ ಪ್ರದೇಶಗಳಲ್ಲಿ ವ್ಯವಸಾಯ ಹಾಗೂ ಇನ್ನಿತರ ವೃತ್ತಿ ನಿರತ ಮಹಿಳೆಯರ ಮಕ್ಕಳಿಗೆ ಶಿಶುಪಾಲನಾ ಕೇಂದ್ರಗಳನ್ನು ಪ್ರಾರಂಭಿಸಲು ಮಹಿಳಾ ಮಂಡಳಗಳಿಗೆ ಮತ್ತು ಸ್ವಯಂಸೇವಾ ಸಂಸ್ಥೆಗಳಿಗೆ ಜಿಲ್ಲಾ ಪಂಚಾಯತ್ ಮೂಲಕ ಅನುದಾನವನ್ನು ನೀಡಲಾಗುತ್ತಿದೆ. ಈ ಯೋಜನೆಯು 3 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಿಗೆ ದಿನದ ಸೇವೆಗಳನ್ನು ಒದಗಿಸುತ್ತದೆ. ಈ ಸೇವೆಗಳಲ್ಲಿ ಆರೈಕೆ, ಮಲಗಲು ವ್ಯವಸ್ಥೆ, ಪೂರಕ ಪೌಷ್ಟಿಕ ಆಹಾರ, ಚುಚ್ಚುಮದ್ದು, ಆಟಿಕೆಗಳು, ಮನೋರಂಜನೆ ಮುಂತಾದವುಗಳನ್ನು ಒಳಗೊಂಡಿರುತ್ತದೆ. 2018–19ನೇ ಸಾಲಿನಲ್ಲಿ ಯೋಜನೆಯಡಿ ರೂ.98.00 ಲಕ್ಷಗಳ ಅನುದಾನ ನಿಗದಿಪಡಿಸಲಾಗಿದ್ದು, ರೂ.67.23 ಲಕ್ಷಗಳ ಅನುದಾನ ಬಿಡುಗಡೆಗೊಳಿಸಿ ರೂ.15.68 ಲಕ್ಷಗಳ ಅನುದಾನ ವೆಚ್ಚ ಭರಿಸಲಾಗಿರುತ್ತದೆ. ಪ್ರಸ್ತುತ ರಾಜ್ಯದಲ್ಲಿ 12 ಜಿಲ್ಲೆಗಳಲ್ಲಿ 45 ಶಿಶುಪಾಲನಾ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

**ಭಾರತ ಸರ್ಕಾರದ ಯೋಜನೆಗಳು:**

**ಉದ್ಯೋಗಸ್ಥ ಮಹಿಳೆಯರ ವಸತಿ ನಿಲಯಗಳ ನಿರ್ಮಾಣ ಹಾಗೂ ವಿಸ್ತರಣೆಗಾಗಿ ಅನುದಾನ ಯೋಜನೆ (1975–76)**

**ಲೆಕ್ಕಶೀರ್ಷಿಕೆ: 2235–02–103–0–62–059(ಇತರೆ ವೆಚ್ಚ): ಕೇಂದ್ರ ಪಾಲು: ರಾಜ್ಯದ ಪಾಲು – 65 : 10**

ಉದ್ಯೋಗಸ್ಥ ಮಹಿಳೆಯರಿಗೆ, ಹಾಗೂ ಉದ್ಯೋಗಕ್ಕಾಗಿ ತರಬೇತಿ ಪಡೆಯುತ್ತಿರುವ ಮಹಿಳೆಯರಿಗೆ (ಒಂದು ವರ್ಷಕ್ಕೆ ಮೀರದಂತೆ) ಕಡಿಮೆ ಬೆಲೆಯಲ್ಲಿ ಹಾಗೂ ಸುರಕ್ಷಿತವಾದಂತಹ ವಸತಿ ನಿಲಯಗಳನ್ನು ಒದಗಿಸುವುದಕ್ಕೋಸ್ಕರ ವಸತಿ ಗೃಹಗಳನ್ನು ನಿರ್ಮಿಸಲು ಕೇಂದ್ರ ಸರ್ಕಾರದಿಂದ ಅನುದಾನವನ್ನು ಸ್ವಯಂಸೇವಾ ಸಂಸ್ಥೆಗಳಿಗೆ ಬಿಡುಗಡೆ ಮಾಡಲಾಗುವುದು. ಯೋಜನೆಯ ಹೊಸ ಮಾರ್ಗಸೂಚಿಯನ್ವಯ ವಸತಿಗೃಹ ನಿರ್ಮಾಣಕ್ಕಾಗಿ ರಾಜ್ಯ ಸರ್ಕಾರದಿಂದ ವಸತಿಗೃಹದ ನಿರ್ಮಾಣದ ವೆಚ್ಚದಲ್ಲಿ ಶೇ.10ರಷ್ಟು ಅನುದಾನವನ್ನು

ನೀಡಲಾಗುವುದು. ಉಳಿದ ಶೇ.25ರಷ್ಟು ಅನುದಾನವನ್ನು ಸ್ವಯಂಸೇವಾ ಸಂಸ್ಥೆ ಭರಿಸಬೇಕಾಗಿರುತ್ತದೆ. ಪ್ರಸ್ತುತ ರಾಜ್ಯದಲ್ಲಿ 66 ವಸತಿ ನಿಲಯಗಳು ಕಾರ್ಯನಿರ್ವಹಿಸುತ್ತಿದೆ.

**ಕೇಂದ್ರ ಸರ್ಕಾರದ ಒನ್ ಸ್ಟಾಪ್ ಸೆಂಟರ್(ಸಖಿ) 2016-17:**

ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಸೌಲಭ್ಯ ಅಂದರೆ, ವೈದ್ಯಕೀಯ ಚಿಕಿತ್ಸೆ ಮತ್ತು ನೆರವು, ಪೊಲೀಸ್ ನೆರವು, ಕಾನೂನು ನೆರವು ಹಾಗೂ ಸಮಾಲೋಚನೆ ವ್ಯವಸ್ಥೆಗಳನ್ನು ಒದಗಿಸಲು ಭಾರತ ಸರ್ಕಾರವು ಮೊದಲನೇ ಹಂತದಲ್ಲಿ ದೇಶಾದ್ಯಂತ ಎಲ್ಲಾ ರಾಜ್ಯಗಳಲ್ಲಿ ತಲಾ ಒಂದರಂತೆ ಒನ್ ಸ್ಟಾಪ್ ಸೆಂಟರ್‌ನ್ನು ಸ್ಥಾಪಿಸಲು ಉದ್ದೇಶಿಸಿರುತ್ತದೆ. ಅದರಂತೆ ಕರ್ನಾಟಕ ರಾಜ್ಯದ ಉಡುಪಿ ಜಿಲ್ಲೆಯಲ್ಲಿ ಒನ್ ಸ್ಟಾಪ್ ಸೆಂಟರ್ ಸ್ಥಾಪಿಸಲು ಕೇಂದ್ರ ಸರ್ಕಾರವು ಅನುದಾನ ಬಿಡುಗಡೆ ಮಾಡಿದ್ದು, ಕಟ್ಟಡ ಕಾಮಗಾರಿ ಪೂರ್ಣಗೊಂಡಿದ್ದು, ಸ್ವಂತಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ. 2016-17ನೇ ಸಾಲಿನಲ್ಲಿ 3 ಹೊಸ ಓ.ಎಸ್.ಸಿ. ಕೇಂದ್ರಗಳನ್ನು ಚಾಮರಾಜನಗರ, ಚಿತ್ರದುರ್ಗ ಮತ್ತು ಧಾರವಾಡ ಜಿಲ್ಲೆಯಲ್ಲಿ ಪ್ರಾರಂಭಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿರುತ್ತದೆ. 2017-18ನೇ ಸಾಲಿನಲ್ಲಿ 3 ಹೊಸ ಓ.ಎಸ್.ಸಿ. ಕೇಂದ್ರಗಳನ್ನು ಮೈಸೂರು, ತುಮಕೂರು ಮತ್ತು ಬಾಗಲಕೋಟೆ ಜಿಲ್ಲೆಯಲ್ಲಿ ಪ್ರಾರಂಭಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿರುತ್ತದೆ. 2018-19ನೇ ಸಾಲಿನಲ್ಲಿ ಉಳಿದ 23 ಜಿಲ್ಲೆಗಳಿಗೆ ಓ.ಎಸ್.ಸಿ. ಕೇಂದ್ರಗಳನ್ನು ಪ್ರಾರಂಭಿಸಲು ಕೇಂದ್ರ ಸರ್ಕಾರ ಆಡಳಿತಾತ್ಮಕ ಮಂಜೂರಾತಿ ನೀಡಿರುತ್ತದೆ.

**ಸ್ವಾಧಾರಗೃಹ: ಸಂಕಷ್ಟಪರಿಸ್ಥಿತಿಯಲ್ಲಿರುವ ಮಹಿಳೆಯರಿಗಾಗಿ ಯೋಜನೆ: (2016-2017) ಲೆಕ್ಕ ಶೀರ್ಷಿಕೆ:2235-02-103-0-64. ಕೇಂದ್ರದ ಪಾಲು:ರಾಜ್ಯದ ಪಾಲು--60:40:**

2016-17ನೇ ಸಾಲಿನಿಂದ ಕೇಂದ್ರ ಸರ್ಕಾರವು ಸ್ವಾಧಾರ ಮತ್ತು ಅಲ್ಪಾವಧಿ ವಸತಿ ಗೃಹ ವಿಲೀನಗೊಳಿಸಿ ಸ್ವಾಧಾರಗೃಹ ಯೋಜನೆ ಅನುಷ್ಠಾನಕ್ಕೆ ತಂದಿರುತ್ತಾರೆ. ಕಷ್ಟಕರ ಪರಿಸ್ಥಿತಿಯಲ್ಲಿರುವ ಮಹಿಳೆಯರಿಗಾಗಿ ಆಶ್ರಯ, ಆಹಾರ, ಬಟ್ಟೆ, ತರಬೇತಿ ಹಾಗೂ ಶಿಕ್ಷಣ ನೀಡುವುದರ ಮೂಲಕ ಆರ್ಥಿಕವಾಗಿ, ಸಾಮಾಜಿಕವಾಗಿ ಸಶಕ್ತರಾಗುವಂತೆ ಮಾಡುವುದು ಯೋಜನೆಯ ಉದ್ದೇಶ. ನೊಂದಣಿಯಾಗಿ ಮೂರು ವರ್ಷವಾಗಿರುವ ಆರ್ಥಿಕವಾಗಿ ಸದೃಢವಾದ ಎಲ್ಲಾ ಮೂಲಭೂತ ಅನುಕೂಲತೆಗಳನ್ನು ಹೊಂದಿದ, ಮಹಿಳಾ ಕಲ್ಯಾಣ ಕ್ಷೇತ್ರದಲ್ಲಿ ಅನುಭವವಿರುವ ಸರ್ಕಾರೇತರ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಕೇಂದ್ರಗಳಲ್ಲಿ, ಸಲಹಾ ಕೇಂದ್ರ, ತರಬೇತಿ ಕೇಂದ್ರ ಹಾಗೂ ವೈದ್ಯಕೀಯ ಕೇಂದ್ರಗಳನ್ನು ನಡೆಸಲು ಅವಕಾಶವಿದೆ. ರಾಜ್ಯದಲ್ಲಿ ಪ್ರಸ್ತುತ 47 ಸ್ವಾಧಾರಗೃಹ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ.

**ಯೂನಿವರ್ಸಲೈಸೇಷನ್ ಆಫ್ ವುಮೆನ್ ಹೆಲ್ಪ್‌ಲೈನ್ - 181 :**

ಮಹಿಳೆಯರಿಗೆ ಮಾಹಿತಿಯನ್ನು ನೀಡಲು ಹಾಗೂ ದೌರ್ಜನ್ಯ ಮತ್ತು ಸಂಕಷ್ಟದಲ್ಲಿರುವ ಮಹಿಳೆಯರಿಗೆ ತುರ್ತು ನೆರವನ್ನು ಒಂದೇ ಸೂರಿನಡೆ ಒದಗಿಸುವ ನಿಟ್ಟಿನಲ್ಲಿ ಯೂನಿವರ್ಸಲೈಸೇಷನ್ ಆಫ್ ವುಮೆನ್ ಹೆಲ್ಪ್‌ಲೈನ್-181 ಎಂಬ ಉಚಿತ ದೂರವಾಣಿ ಸೇವೆಯನ್ನು 24*7 ರಾಜ್ಯಾದ್ಯಂತ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಭಾಗಿತ್ವದೊಂದಿಗೆ ಜಾರಿಗೊಳಿಸಲಾಗುತ್ತಿದೆ.

**ಮಕ್ಕಳ ಅಭಿವೃದ್ಧಿ ಕಾರ್ಯಕ್ರಮಗಳು**

2011ರ ಜನಗಣತಿಯ ಪ್ರಕಾರ ರಾಜ್ಯದಲ್ಲಿ 0 ಯಿಂದ 6 ವರ್ಷ ವಯೋಮಿತಿಯಲ್ಲಿನ ಮಕ್ಕಳ ಸಂಖ್ಯೆ ಶೇ.11.2 ರಷ್ಟು ಇರುತ್ತದೆ. ಮಕ್ಕಳ ಸರ್ವತೋಮುಖ ಬೆಳವಣಿಗೆ, ಲಿಂಗ ಪ್ರಮಾಣವನ್ನು ಏರಿಸುವುದು, ಶಿಶು ಮರಣ ಪ್ರಮಾಣ ಹಾಗೂ ತಾಯಂದಿರ ಮರಣ ಪ್ರಮಾಣವನ್ನು ಇಳಿಸುವುದು. ಆರೋಗ್ಯ, ಪೌಷ್ಠಿಕ, ಹಾಗೂ ಶಾಲಾಪೂರ್ವ ಶಿಕ್ಷಣ ನೀಡುವುದು, ಮಕ್ಕಳ ಹಕ್ಕುಗಳನ್ನು ರಕ್ಷಿಸುವ, ಮಕ್ಕಳ ವಿರುದ್ಧ ದೌರ್ಜನ್ಯವನ್ನು

ಹೋಗಲಾಡಿಸಿ ಮಕ್ಕಳಿಗೆ ಪಾಲನೆ ಮತ್ತು ಪೋಷಣೆ ಕಲ್ಪಿಸುವ ಉದ್ದೇಶ ಇಟ್ಟುಕೊಂಡು ಯೋಜನೆಗಳನ್ನು, ನೀತಿಗಳನ್ನು ಹಾಗೂ ವಿವಿಧ ಕಾರ್ಯಕ್ರಮಗಳನ್ನು ರೂಪಿಸಲಾಗುತ್ತಿದೆ.

**ಸಮಗ್ರ ಶಿಶು ಅಭಿವೃದ್ಧಿ ಯೋಜನೆಃ**

ಮಕ್ಕಳ ಉತ್ತಮ ಭವಿಷ್ಯವೇ ಭಾರತದ ಭವಿಷ್ಯ ಎಂಬ ದೂರದೃಷ್ಠಿಯ ಹಿನ್ನೆಲೆಯಲ್ಲಿ, ಇಲಾಖೆಯು ಮಕ್ಕಳ ಕಲ್ಯಾಣ ಮತ್ತು ಅಭಿವೃದ್ಧಿಗಾಗಿ ಜಾರಿಯಲ್ಲಿರುವ ನೀತಿ ಮತ್ತು ಕಾರ್ಯಕಮಗಳ ಅನುಷ್ಠಾನಕ್ಕೆ ಹೆಚ್ಚು ಒತ್ತು ನೀಡಿ ಶ್ರಮಿಸುತ್ತಿದೆ. ಈ ಶ್ರಮವು ದೇಶದ ಮುಂದಿನ ಸಾಮಾಜಿಕ, ಆರ್ಥಿಕ ಬೆಳವಣಿಗೆಗೆ ಹೂಡುತ್ತಿರುವ ಬಂಡವಾಳವಾಗಿರುತ್ತದೆ.

ಕರ್ನಾಟಕ ರಾಜ್ಯದಲ್ಲಿ, 2ನೇ ಅಕ್ಟೋಬರ್ 1975 ರಂದು ಪ್ರಾಯೋಗಿಕವಾಗಿ ಮೈಸೂರು ಜಿಲ್ಲೆಯ, ಟಿ. ನರಸೀಪುರ ತಾಲ್ಲೂಕಿನಲ್ಲಿ 100 ಅಂಗನವಾಡಿ ಕೇಂದ್ರಗಳೊಂದಿಗೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು ಪ್ರಾರಂಭಿಸಲಾಯಿತು. ಈಗ ರಾಜ್ಯದ ಎಲ್ಲಾ ತಾಲ್ಲೂಕುಗಳಿಗೂ ವಿಸ್ತರಿಸಲಾಗಿದೆ. 6 ವರ್ಷ ಒಳಗಿನ ಮಕ್ಕಳ, ಗರ್ಭಿಣಿ, ಬಾಣಂತಿ, ಮತ್ತು ಕಿಶೋರಿಯರು ಕಲ್ಯಾಣವು ಈ ಯೋಜನೆಯ ಮುಖ್ಯ ಗುರಿಯಾಗಿರುತ್ತದೆ.

**ಯೋಜನೆಯ ಉದ್ದೇಶ**

- 0–6 ವರ್ಷದ ಮಕ್ಕಳ ಆರೋಗ್ಯ, ಪೌಷ್ಠಿಕ ಮಟ್ಟವನ್ನು ವೃದ್ಧಿಸುವುದು.
- ಮಗುವಿನ ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಬೆಳವಣಿಗೆಗೆ ಭದ್ರ ಅಡಿಪಾಯ ಹಾಕುವುದು.
- ಮಕ್ಕಳಲ್ಲಿ ಸಾವು, ಅನಾರೋಗ್ಯ, ಅಪೌಷ್ಠಿಕತೆ ಮತ್ತು ಶಾಲಾ ಬಿಡುವಿಕೆಯನ್ನು ಕಡಿಮೆಗೊಳಿಸುವುದು.
- ಶಿಶು ಅಭಿವೃದ್ಧಿ ಕಾರ್ಯಕ್ರಮವನ್ನು ಉತ್ತಮಗೊಳಿಸುವ ಕಾರ್ಯನೀತಿ ಮತ್ತು ಅನುಷ್ಠಾನಗೊಳಿಸುವ ದಿಸೆಯಲ್ಲಿ ಪರಿಣಾಮಕಾರಿಯಾದ ಸಮನ್ವಯತೆಯನ್ನು ಸಾಧಿಸುವುದು.
- ಆರೋಗ್ಯ ಮತ್ತು ಪೌಷ್ಠಿಕತೆಯ ಶಿಕ್ಷಣವನ್ನು ನೀಡುವುದರ ಮೂಲಕ ತಾಯಂದಿರಲ್ಲಿ ತಮ್ಮ ಮಕ್ಕಳ ಆರೋಗ್ಯ ಮತ್ತು ಪೌಷ್ಠಿಕತೆಯ ಅಗತ್ಯಗಳನ್ನು ಸರಿಯಾಗಿ ನೋಡಿಕೊಳ್ಳುವ ಸಾಮರ್ಥ್ಯವನ್ನು ಹೆಚ್ಚಿಸುವುದು

**ಐ.ಸಿ.ಡಿ.ಎಸ್ ಸೇವಾ ಸೌಲಭ್ಯಗಳು**

| ಸೇವೆಗಳು | ಫಲಾನುಭವಿಗಳು | ಯಾರ ಮುಖಾಂತರ ಅಂಗನವಾಡಿಗಳಲ್ಲಿ ಸೇವೆ ಲಭ್ಯವಾಗಿದೆ |
|---|---|---|
| ಪೂರಕ ಪೌಷ್ಠಿಕ ಆಹಾರ | 6 ವರ್ಷ ಒಳಗಿನ ಮಕ್ಕಳು, ಗರ್ಭಿಣಿ, ಬಾಣಂತಿ, ಕಿಶೋರಿಯರು | ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರು |
| ಚುಚ್ಚುಮದ್ದು | 6 ವರ್ಷದ ಒಳಗಿನ ಮಕ್ಕಳು, ಗರ್ಭಿಣಿಯರು | ಕಿರಿಯ ಆರೋಗ್ಯ ಸಹಾಯಕಿ |
| ಆರೋಗ್ಯ ತಪಾಸಣೆ | 6 ವರ್ಷದ ಒಳಗಿನ ಮಕ್ಕಳು, ಗರ್ಭಿಣಿ, ಬಾಣಂತಿಯರು | ವೈದ್ಯಾಧಿಕಾರಿಗಳು/ಕಿರಿಯ ಆರೋಗ್ಯ ಸಹಾಯಕಿ/ಅಂಗನವಾಡಿ ಕಾರ್ಯಕರ್ತೆ |
| ಮಾಹಿತಿ ಸೇವೆ | 6 ವರ್ಷದ ಒಳಗಿನ ಮಕ್ಕಳು, ಗರ್ಭಿಣಿ, ಬಾಣಂತಿ, ಕಿಶೋರಿಯರು | ವೈದ್ಯಾಧಿಕಾರಿಗಳು/ಕಿರಿಯ ಆರೋಗ್ಯ ಸಹಾಯಕಿ/ಅಂಗನವಾಡಿ ಕಾರ್ಯಕರ್ತೆ |
| ಶಾಲಾಪೂರ್ವ ಶಿಕ್ಷಣ | 3–6 ವರ್ಷದ ಮಕ್ಕಳು | ಅಂಗನವಾಡಿ ಕಾರ್ಯಕರ್ತೆ |
| ಪೌಷ್ಠಿಕತೆ ಮತ್ತು ಆರೋಗ್ಯ ಶಿಕ್ಷಣ | 15–45 ವಯಸ್ಸಿನ ಮಹಿಳೆಯರು , ಕಿಶೋರಿಯರು, | ಅಂಗನವಾಡಿ ಕಾರ್ಯಕರ್ತೆ/ ಕಿರಿಯ ಆರೋಗ್ಯ ಸಹಾಯಕಿ/ ಎ.ಎನ್.ಎಂ / ಆಹಾರ ಮತ್ತು ಪೌಷ್ಠಿಕತೆ ಮಂಡಳಿಯ ಸಿಬ್ಬಂದಿ |

**ಐಸಿಡಿಎಸ್ mission, ಅಡಿ ಸೇವೆಗಳನ್ನು ಪುನರ್ ರಚಿಸಲಾಗಿದೆ**

| | | |
|---|---|---|
| ಪ್ರಾರಂಭಿಕ ಬಾಲ್ಯಾವಸ್ಥೆ ಆರೈಕೆ ಶಿಕ್ಷಣ ಹಾಗೂ ಅಭಿವೃದ್ಧಿ (ECCED) | ಪ್ರಾರಂಭಿಕ ಬಾಲ್ಯಾವಸ್ಥೆ ಆರೈಕೆ ಶಿಕ್ಷಣ ಹಾಗೂ ಅಭಿವೃದ್ಧಿ (ECCE)/ ಶಾಲಾಪೂರ್ವ ಶಿಕ್ಷಣ ಅನೌಪಚಾರಿಕ ಶಿಕ್ಷಣ | 0-3 ವರ್ಷ ಮಕ್ಕಳ ಪೋಷಕರು/ಪಾಲಕರು |
| | ಪೂರಕ ಪೌಷ್ಠಿಕ ಆಹಾರ | 6 ವರ್ಷ ಒಳಗಿನ ಮಕ್ಕಳು, ಗರ್ಭಿಣಿ, ಬಾಣಂತಿ, ಕಿಶೋರಿಯರು |
| ಆರೈಕೆ ಹಾಗೂ ಪೌಷ್ಠಿಕತೆ ಬಗ್ಗೆ ಸಮಾಲೋಚನೆ | ಶಿಶು ಹಾಗೂ ಮಗುವಿನ ಉಣಿಸುವ ಬಗ್ಗೆ ಉತ್ತೇಜನೆ/ಸಮಾಲೋಚನೆ | ಗರ್ಭಿಣಿ, ಬಾಣಂತಿ, 3 ವರ್ಷದೊಳಗಿನ ಮಕ್ಕಳ ತಾಯಂದಿರು |
| | ತಾಯಂದಿರ ಆರೈಕೆ ಹಾಗೂ ಸಮಾಲೋಚನೆ | ಗರ್ಭಿಣಿ , ಬಾಣಂತಿ ಮಹಿಳೆ |
| | ಆರೈಕೆ,ಪೌಷ್ಠಿಕತೆ, ಆರೋಗ್ಯ ಹಾಗೂ ನೈರ್ಮಲ್ಯ ಶಿಕ್ಷಣ | ಗರ್ಭಿಣಿ , ಬಾಣಂತಿ, 3 ವರ್ಷದೊಳಗಿನ ಮಕ್ಕಳ ತಾಯಂದಿರು |
| | ಸಮುದಾಯ ಆಧಾರಿತ ಅಪೌಷ್ಠಿಕ ಮಕ್ಕಳ ನಿರ್ವಹಣೆ ಹಾಗೂ ಆರೈಕೆ | ಸಾಧಾರಣ ಹಾಗೂ ಅಪೌಷ್ಠಿಕ ಮಕ್ಕಳು, ಪೋಷಕರು/ಪಾಲಕರು |
| ಆರೋಗ್ಯ ಸೇವೆ | ಚುಚ್ಚುಮದ್ದು ಹಾಗೂ ಪೂರಕ ಸೂಕ್ಷ್ಮ ಪೋಷಕಾಂಶ | 6 ವರ್ಷ ಒಳಗಿನ ಮಕ್ಕಳು, ಗರ್ಭಿಣಿ, ಬಾಣಂತಿಯರು |
| | ಆರೋಗ್ಯ ತಪಾಸಣೆ | 6 ವರ್ಷ ಒಳಗಿನ ಮಕ್ಕಳು, ಗರ್ಭಿಣಿ, ಬಾಣಂತಿಯರು |
| | ಮಾಹಿತಿ ಸೇವೆ | 6 ವರ್ಷ ಒಳಗಿನ ಮಕ್ಕಳು, ಗರ್ಭಿಣಿ, ಬಾಣಂತಿಯರು |
| ಸಮುದಾಯ ಒಗ್ಗೂಡುವಿಕೆ, ಮಾಹಿತಿ ಶಿಕ್ಷಣ ಸಂವಹನೆ | ಮಾಹಿತಿ ಶಿಕ್ಷಣ ಸಂವಹನೆ, ಜಾಗೃತಿ/ಆಂದೋಲನಾ/ಜಾಥಾ | ಕುಟುಂಬ ಹಾಗೂ ಸಮುದಾಯ |

ರಾಜ್ಯದ ಎಲ್ಲಾ 225 ತಾಲ್ಲೂಕುಗಳಲ್ಲೂ 204 ಶಿಶು ಅಭಿವೃದ್ಧಿ ಯೋಜನೆಗಳ ಮುಖಾಂತರ (181 ಗ್ರಾಮಾಂತರ, 12 ಗುಡ್ಡಗಾಡು ಯೋಜನೆ ಹಾಗು 11 ನಗರ ಪ್ರದೇಶದಲ್ಲಿ) ಒಟ್ಟು 62580 ಅಂಗನವಾಡಿ ಕೇಂದ್ರಗಳು ಹಾಗೂ 3331 ಮಿನಿ ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. 2019-20 ನೇ ಸಾಲಿನ ಜನವರಿ-2020ರ ಅಂತ್ಯಕ್ಕೆ 42,55,308 ಲಕ್ಷ ಫಲಾನುಭವಿಗಳಿಗೆ ಸೇವೆಗಳನ್ನು ಒದಗಿಸಲಾಗಿರುತ್ತದೆ.

2. **ಆಡಳಿತ ವೆಚ್ಚ:**

**ಲೆಕ್ಕ ಶೀರ್ಷಿಕೆ: 2211-00-102-0-22 (ಯೋಜನೆ)**
**2211-00-102-0-02(ಯೋಜನೆ)**
**2235-02-102-0-04 (ಯೋಜನೆ)**

**ಕೇಂದ್ರದ ಪಾಲು: ರಾಜ್ಯದ ಪಾಲು 25:75/60:40**

ಆಡಳಿತ ವೆಚ್ಚದ ಅಡಿಯಲ್ಲಿ ಗೌರವಧನ, ಉಸ್ತುವಾರಿ ಮತ್ತು ಮೌಲ್ಯಮಾಪನ, ಅಂಗನವಾಡಿ ಕೇಂದ್ರದ ಕಟ್ಟಡದ ಬಾಡಿಗೆ, ಶಾಲಾ ಪೂರ್ವ ಶಿಕ್ಷಣಕಿಟ್, ಮೆಡಿಸಿನ್ ಕಿಟ್, ಸಮವಸ್ತ್ರ ಖರೀದಿ ಮುಂತಾದ ಖರ್ಚುಗಳನ್ನು ಭರಿಸಲಾಗುತ್ತಿದೆ. ಸದರಿ ವೆಚ್ಚಗಳನ್ನು 60:40 ಅನುಪಾತದಲ್ಲಿ ಅನುಕ್ರಮವಾಗಿ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದಿಂದ ಭರಿಸಲಾಗುತ್ತಿದೆ. ಕೇಂದ್ರ ಸರ್ಕಾರದ ಪತ್ರ ಸಂ:11-36/2016 ಸಿಡಿ-1 ದಿನಾಂಕ: 23-11-2017ರಂತೆ 2018-19ನೇ ಸಾಲಿನ ಡಿಸೆಂಬರ್ ಮಾಹೆಯಿಂದ ಜಿಲ್ಲಾ ಘಟಕದ ನಿರೂಪಣಾಧಿಕಾರಿಗಳು, ಅಂಕಿ ಅಂಶಗಳ ಸಹಾಯಕರು, ಯೋಜನಾ ಕಛೇರಿಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಹಾಗೂ ಮೇಲ್ವಿಚಾರಕಿಯರ ವೇತನದ ಬಾಬ್ತು ಕೇಂದ್ರ ಸರ್ಕಾರದ ಪಾಲು 25% ಹಾಗೂ ರಾಜ್ಯ ಸರ್ಕಾರದ ಪಾಲು 75% ಆಗಿರುತ್ತದೆ. ಉಳಿದ ಸಿಬ್ಬಂದಿಗಳ ವೇತನದ ಬಾಬ್ತು ಹಾಗೂ ರಾಜ್ಯ ಐಸಿಡಿಎಸ್ ಘಟಕದ ಸಂಪೂರ್ಣ ವೆಚ್ಚ ರಾಜ್ಯ ಸರ್ಕಾರದ ಭರಿಸುತ್ತಿದೆ. 2019-20ನೇ ಸಾಲಿಗೆ ರೂ.150499.00ಲಕ್ಷಗಳ ಆಯವ್ಯಯ ನಿಗದಿಪಡಿಸಲಾಗಿದ್ದು, ಜನವರಿ-2020ರ ಅಂತ್ಯಕ್ಕೆ ರೂ.87057.84 ಲಕ್ಷಗಳ ವೆಚ್ಚ ಭರಿಸಲಾಗಿದೆ.

3. **ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರಿಗೆ ಸಮವಸ್ತ್ರ:**

ಕೇಂದ್ರ ಸರ್ಕಾರದ ಪತ್ರದ ಸಂ:11-36/2016 ಸಿಡಿ-1 ದಿನಾಂಕ: 23-11-2017ರಂತೆ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರಿಗೆ ಪ್ರತೀ ಸೀರೆಗೆ ರೂ. 400/- ಗಳಂತೆ ಒಂದು ವರ್ಷಕ್ಕೆ 2 ಸೀರೆಗಳ್ನು ಒದಗಿಸಬೇಕಾಗಿರುತ್ತದೆ.

**4. ಶಾಲಾ ಪೂರ್ವ ಶಿಕ್ಷಣ ಕಿಟ್:**

ಸಮಗ್ರ ಶಿಶು ಅಭಿವೃದ್ಧಿ ಯೋಜನೆ ಆಡಳಿತ ವೆಚ್ಚದಡಿ ಪ್ರತಿ ಅಂಗನವಾಡಿ ಕೇಂದ್ರ ಹಾಗು ಮಿನಿ ಅಂಗನವಾಡಿ ಕೇಂದ್ರಕ್ಕೆ ವಾರ್ಷಿಕ ರೂ 5000 ಗಳ ಅನುದಾನವನ್ನು ತರಬೇತಿ ಸೇರಿದಂತೆ ಶಾಲಾ ಪೂರ್ವ ಶಿಕ್ಷಣ ಕಿಟ್‌ಗಾಗಿ ನಿಗದಿಪಡಿಸಲಾಗಿದೆ. ರಾಜ್ಯಾದ್ಯಂತ ಅಂಗನವಾಡಿ ಕೇಂದ್ರಗಳಲ್ಲಿ ಗುಣಮಟ್ಟ ಹಾಗೂ ಏಕ ರೂಪತೆ ತರುವ ನಿಟ್ಟಿನಲ್ಲಿ ರಾಜ್ಯ ಮಟ್ಟದಲ್ಲಿ ಒಂದು ಸಮಿತಿಯನ್ನು ರಚಿಸಿ, ನುರಿತ ಶಿಕ್ಷಣ ತಜ್ಞರ ಹಾಗೂ ವಿವಿಧ ಆಯ್ದ ಐಸಿಡಿಎಸ್ ಕರ್ಮಚಾರಿಗಳ ಕಾರ್ಯಗಾರ ನಡೆಸಿ, ಮಾದರಿ ಕಿಟ್ ಅಭಿವೃದ್ಧಿ ಪಡಿಸಲಾಗಿದೆ.

**5. ಮೆಡಿಸಿನ್ ಕಿಟ್:**

ಸಮಗ್ರ ಶಿಶು ಅಭಿವೃದ್ಧಿ ಯೋಜನೆ ಆಡಳಿತ ವೆಚ್ಚದಡಿ 62580 ಅಂಗನವಾಡಿ ಕೇಂದ್ರಗಳಿಗೆ ಹಾಗೂ 3331 ಮಿನಿ ಅಂಗನವಾಡಿ ಕೇಂದ್ರಗಳಿಗೆ ಪ್ರತಿ ಅಂಗನವಾಡಿ ಕೇಂದ್ರಕ್ಕೆ ರೂ 1500/-ರಂತೆ ಹಾಗೂ ಪ್ರತಿ ಮಿನಿ ಅಂಗನವಾಡಿ ಕೇಂದ್ರಕ್ಕೆ ರೂ.750/- ರಂತೆ ಮೆಡಿಸಿನ್ ಕಿಟ್‌ಗಳನ್ನು ಒದಗಿಸಲಾಗುತ್ತಿದೆ.

6. **ಅಂಗನವಾಡಿ ಕಾರ್ಯಕರ್ತೆಯರಿಗೆ ಹಾಗು ಸಹಾಯಕಿಯರಿಗೆ ಹೆಚ್ಚುವರಿ ಗೌರವಧನ:**

**ಲೆಕ್ಕ ಶೀರ್ಷಿಕೆ: 2211-00-102-0-22 ( ಯೋಜನೆ )**

**ಕೇಂದ್ರದ ಪಾಲು: ರಾಜ್ಯದ ಪಾಲು 60:40**

ಅಂಗನವಾಡಿ ಕಾರ್ಯಕರ್ತೆಯರು ಕ್ಷೇತ್ರಮಟ್ಟದಲ್ಲಿ ತಳಮಟ್ಟದ ಕಾರ್ಯಕರ್ತೆಯರಾಗಿದ್ದರೂ ಗ್ರಾಮ ಮಟ್ಟದಲ್ಲಿ ಹೆಚ್ಚು ಮಹತ್ವ ಹೊಂದಿರುತ್ತಾರೆ. ಸಮಾಜಕ್ಕೆ ಅವರು ನೀಡುತ್ತಿರುವ ಸೇವೆಯನ್ನು ಗುರುತಿಸಿ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದ ಗೌರವಧನದೊಡನೆ ಹೆಚ್ಚುವರಿಯಾಗಿ ಅಂಗನವಾಡಿ ಕಾರ್ಯಕರ್ತೆಯರಿಗೆ ಮಾಹೆಯಾನ ರೂ.5000/- ಹಾಗೂ ಸಹಾಯಕಿಯರಿಗೆ ರೂ.2500/-ಗಳನ್ನು ರಾಜ್ಯದ ಕೊಡುಗೆಯಾಗಿ ನೀಡುತ್ತಿದೆ. 2019-20ನೇ ಸಾಲಿನ ನವೆಂಬರ್-19 ರಿಂದ ಅನ್ವಯವಾಗುವಂತೆ ಕಾರ್ಯಕರ್ತೆಯರಿಗೆ ಮಾಹೆಯಾನ ರೂ.500/- ಹಾಗೂ ಸಹಾಯಕಿಯರಿಗೆ ಮಾಹೆಯಾನ ರೂ.250/-ಗಳನ್ನು ಹೆಚ್ಚಿಸಲಾಗಿರುತ್ತದೆ. ಒಟ್ಟಾರೆಯಾಗಿ ಮಾಹೆಯಾನ ಕಾರ್ಯಕರ್ತೆಯರಿಗೆ ರೂ. 5000/- ಸಹಾಯಕಿಯರಿಗೆ ರೂ.2750/- ಗೌರವಧನ ಪಾವತಿಸಲಾಗುತ್ತಿದೆ. ಅಂಗನವಾಡಿ ಕಾರ್ಯಕರ್ತೆಯರು/ಸಹಾಯಕಿಯರು ಏಕಕಾಲಕ್ಕೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಪಾಲಿನ ಗೌರವಧನ ಪಡೆಯಬಹುದು.

7. <u>ಪೂರಕ ಪೌಷ್ಟಿಕ ಆಹಾರ:</u>

**ಲೆಕ್ಕ ಶೀರ್ಷಿಕೆ: 2235-00-101-0-61 (ಯೋಜನೆ ಮತ್ತು ಯೋಜನೇತರ)**
**ಕೇಂದ್ರದ ಪಾಲು: ರಾಜ್ಯದ ಪಾಲು 50:50**

ಪೂರಕ ಪೌಷ್ಟಿಕ ಆಹಾರಕ್ಕಾಗಿ ರಾಜ್ಯ ಸರ್ಕಾರ ವೆಚ್ಚ ಮಾಡುವ ಮೊತ್ತದ ಶೇ 50% ಕೇಂದ್ರ ಸರ್ಕಾರವು ಮರುಪಾವತಿಸುತ್ತದೆ. ಫಲಾನುಭವಿಗಳು ಪ್ರತಿ ದಿನ ಮನೆಯಲ್ಲಿ ಸೇವಿಸುವ ಆಹಾರಕ್ಕೆ ಪೂರಕವಾಗಿ ಪರಿಷ್ಕೃತ ಮಾರ್ಗಸೂಚಿಯಂತೆ 6 ತಿಂಗಳಿಂದ – 6 ವರ್ಷದ ಮಕ್ಕಳಿಗೆ 500 ಕ್ಯಾಲೊರಿಗಳನ್ನು, 12-15 ಗ್ರಾಂ. ಪ್ರೋಟಿನ್, ಗರ್ಭಿಣಿ/ ಬಾಣಂತಿ/ಪ್ರಾಯಪೂರ್ವ ಬಾಲಕಿಯರಿಗೆ 600 ಕ್ಯಾಲೊರಿಗಳನ್ನು ಮತ್ತು 18-20 ಗ್ರಾಂ ಪ್ರೋಟಿನ್ ಅಲ್ಲದೆ ತೀವ್ರ ಅಪೌಷ್ಟಿಕತೆಯುಳ್ಳ ಮಕ್ಕಳಿಗೆ 800 ಕ್ಯಾಲೊರಿಗಳನ್ನು ಮತ್ತು 20-25 ಗ್ರಾಂ. ಪ್ರೋಟಿನ್ ನೀಡುವ ಉದ್ದೇಶದಿಂದ ಯೋಜನೆಯಡಿ ಪೂರಕ ಪೌಷ್ಟಿಕ ಅಹಾರ ನೀಡಲಾಗುತ್ತಿದೆ. ಯೋಜನೆಯ ಮಾರ್ಗಸೂಚಿಯಂತೆ ವರ್ಷದಲ್ಲಿ 300 ದಿನಗಳಿಗೆ ಪೂರಕ ಪೌಷ್ಟಿಕ ಆಹಾರ ನೀಡಲಾಗುತ್ತಿದೆ. ಕೇಂದ್ರ ಸರ್ಕಾರದ ದಿನಾಂಕ: 23-11-2017 ರ ಮಾರ್ಗಸೂಚಿಯಲ್ಲಿ ಸಾಮಾನ್ಯ ಮಕ್ಕಳಿಗೆ ಪ್ರತಿ ದಿನ ರೂ. 8.00 /-ರಂತೆ , ಗರ್ಭಿಣಿ/ಬಾಣಂತಿ/ಪ್ರಾಯಪೂರ್ವ ಬಾಲಕಿಯರಿಗೆ ಘಟಕ ವೆಚ್ಚ ರೂ. 9.50/-ರಂತೆ ಮತ್ತು ತೀವ್ರ ಅಪೌಷ್ಟಿಕತೆಯುಳ್ಳ ಮಕ್ಕಳಿಗೆ ರೂ.12.00 /-ರ ಘಟಕ ವೆಚ್ಚವನ್ನು ಪರಿಷ್ಕರಿಸಲಾಗಿದ್ದು, ಪರಿಷ್ಕೃತ ಘಟಕ ವೆಚ್ಚದಂತೆ ಆಹಾರವನ್ನು ನೀಡಲಾಗುತ್ತಿದೆ.

ರಾಜ್ಯದಲ್ಲಿ 137 ಮಹಿಳಾ ಪೂರಕ ಪೌಷ್ಟಿಕ ಆಹಾರ ಉತ್ಪಾದನ ಹಾಗೂ ತರಬೇತಿ ಕೇಂದ್ರಗಳು ಇಲಾಖೆಯ ಸಹಾಯದೊಂದಿಗೆ ಕಾರ್ಯನಿರತವಾಗಿದ್ದು, ಇದರಲ್ಲಿ 22-32 ಮಹಿಳೆಯರು ಕೆಲಸ ನಿರ್ವಹಿಸುತ್ತಿದ್ದಾರೆ. ಇವರುಗಳು ಬಡತನದ ಹಿನ್ನೆಲೆಯಿಂದ ಬಂದವರಾಗಿದ್ದು ವಿಧವೆಯರು, ವಿಕಲಚೇತನರು, ಪರಿತ್ಯಕ್ತ ಮಹಿಳೆಯರು, ಫಲಾನುಭವಿಗಳ ತಾಯಂದಿರು, ಹಾಗೂ ಸ್ತ್ರೀಶಕ್ತಿ ಗುಂಪಿನ ಸದಸ್ಯರು ಆಗಿರುತ್ತಾರೆ. ಈ ಮಹಿಳಾ ಪೂರಕ ಪೌಷ್ಟಿಕ ಆಹಾರ ಉತ್ಪಾದನ ಹಾಗೂ ತರಬೇತಿ ಕೇಂದ್ರಗಳು ತಿನ್ನಲು ಸಿದ್ಧಪಡಿಸಿದ ಆಹಾರ/ಬೇಯಿಸಲು ಸಿದ್ಧವಿರುವ ಆಹಾರ ಪದಾರ್ಥಗಳನ್ನು ವಾರದ 6 ದಿನಗಳು ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರತ MSPTC ಮಹಿಳಾ ಪೂರಕ ಪೌಷ್ಟಿಕ ಕೇಂದ್ರಗಳ ಮೂಲಕ ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡಲಾಗುತ್ತಿದೆ.

ಪ್ರತಿ ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ಸಮಿತಿಯಲ್ಲಿ ಮೆನು ನಿಗದಿಪಡಿಸಲಾಗುವುದು, ಉದಾ:

- 6ತಿ – 3 ವರ್ಷ– ಗೋಧಿ ರವೆ, ಅಕ್ಕಿ, ಹೆಸರುಕಾಳು,ನ್ಯೂಟ್ರಿಮಿಕ್ಸ್ ಪುಡಿ
- 3-6 ವರ್ಷ– ಚಿತ್ರಾನ್ನ, ರವೆ ಲಾಡು, ಅಕ್ಕಿ ಕಿಚಡಿ, ಮೊಳಕೆ ಬರಿಸಿದ ಹೆಸರುಕಾಳು, ಅನ್ನ ಸಾಂಬರ್
- ಪ್ರಾಯಪೂರ್ವ ಬಾಲಕಿಯರಿಗೆ – ಅಕ್ಕಿ, ಹೆಸರುಕಾಳು, ಗೋಧಿ
- **ಕ್ಷೀರ ಭಾಗ್ಯ** ಯೋಜನೆಯಡಿ 6 ತಿ – 6 ವರ್ಷದ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲಿ ಹಾಲು ನೀಡಲಾಗುತ್ತಿದೆ (15ಗ್ರಾಂ ಹಾಲಿನಪುಡಿ , 10 ಗ್ರಾಂ ಸಕ್ಕರೆ)
- 06 ತಿಂಗಳಿಂದ 3 ವರ್ಷದ ತೀವ್ರ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ, 3-6 ವರ್ಷದ ತೀವ್ರ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ನೀಡಲಾಗುತ್ತಿದೆ. ಮೊಟ್ಟೆ ತಿನ್ನದ ಮಕ್ಕಳಿಗೆ ವಾರದ 6 ದಿನ ಹಾಲು ನೀಡಲಾಗುತ್ತಿದೆ.
- 5 ಹಿಂದುಳಿದ ಜಿಲ್ಲೆಗಳಾದ ಬೀದರ, ಗುಲಬರ್ಗಾ, ರಾಯಚೂರು, ಕೊಪ್ಪಳ ಹಾಗೂ ಯಾದಗಿರಿ ಜಿಲ್ಲೆಗಳ 6 ತಿಂಗಳಿಂದ – 3 ವರ್ಷದ ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3-6 ವರ್ಷದ ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ನೀಡಲಾಗುತ್ತಿದೆ, ಮೊಟ್ಟೆ ತಿನ್ನದ ಮಕ್ಕಳಿಗೆ ವಾರದ 6 ದಿನ ಹಾಲು ನೀಡಲಾಗುತ್ತಿದೆ.
- 3-6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆ ನೀಡಲಾಗುತ್ತಿದೆ.

2019–20ನೇ ಸಾಲಿಗೆ ರೂ.215042.00 ಲಕ್ಷಗಳ ಆಯವ್ಯಯ ನಿಗದಿಪಡಿಸಲಾಗಿದ್ದು, ಜನವರಿ–2020ರ ಅಂತ್ಯಕ್ಕೆ ಒಟ್ಟು 42,55,308 ಫಲಾನುಭವಿಗಳಿಗೆ ಸೌಲಭ್ಯ ಒದಗಿಸಲಾಗಿದ್ದು, ಇದಕ್ಕಾಗಿ ರೂ.105580.61 ಲಕ್ಷಗಳ ವೆಚ್ಚ ಭರಿಸಲಾಗಿದೆ.

**8. ಮಾತೃಪೂರ್ಣ ಯೋಜನೆ:**

ಗರ್ಭಿಣಿ ಮತ್ತು ಬಾಣಂತಿಯರಿಗೆ ಪೌಷ್ಠಿಕಾಂಶಯುಕ್ತ ಮಧ್ಯಾಹ್ನದ ಬಿಸಿಯೂಟವನ್ನು ಅಂಗನವಾಡಿ ಕೇಂದ್ರದಲ್ಲಿಯೇ ನೀಡುವ "ಮಾತೃಪೂರ್ಣ" ಯೋಜನೆಯನ್ನು 2017 ಅಕ್ಟೋಬರ್ 2ನೇ ತಾರೀಖಿನಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗುತ್ತಿದೆ. ಮಹಿಳೆಯರಿಗೆ ಆಹಾರ ಭದ್ರತೆಯನ್ನು ಒದಗಿಸುವ ಜೊತೆಗೆ ಹೆರಿಗೆ ಸಮಯದಲ್ಲಿನ ಗರ್ಭಿಣಿ ಹಾಗೂ ಶಿಶುಗಳ ಮರಣ ಪ್ರಮಾಣ ಮತ್ತು ಕಡಿಮೆ ತೂಕದ ಮಕ್ಕಳ ಜನನ ನಿಯಂತ್ರಣ ಯೋಜನೆಯ ಉದ್ದೇಶವಾಗಿರುತ್ತದೆ.

ಈ ಪೂರ್ಣ ಊಟದಲ್ಲಿ ಅನ್ನ, ಸಾಂಬಾರ್, ಪಲ್ಯದ ಜೊತೆಗೆ ಬೇಯಿಸಿದ ಮೊಟ್ಟೆ, 200 ಮಿ.ಲೀ ಹಾಲು ಮತ್ತು ಚಿಕ್ಕಿಯನ್ನು ತಿಂಗಳಿಗೆ ಕನಿಷ್ಠ 25 ದಿನಗಳು ನೀಡಲಾಗುತ್ತಿದೆ. ಈ ಒಂದು ಪೂರ್ಣ ಊಟದಿಂದ ಗರ್ಭಿಣಿ ಮತ್ತು ಬಾಣಂತಿಯರಿಗೆ ಪ್ರತಿದಿನಕ್ಕೆ ಬೇಕಾಗುವ ಪ್ರೋಟೀನ್ ಮತ್ತು ಕ್ಯಾಲ್ಷಿಯಂ ಕ್ಯಾಲೋರಿ ಅಂಶಗಳಲ್ಲಿ ಶೇ.40–45 (RDA -1342 ಕ್ಯಾಲೋರಿ, 41 ಗ್ರಾಂಪ್ರೋಟೀನ್, 578 ಗ್ರಾಂ ಕ್ಯಾಲ್ಷಿಯಂ) ಗಳಷ್ಟು ಒದಗಿಸಿದಂತಾಗುತ್ತದೆ. ಪ್ರತಿ ಫಲಾನುಭವಿಗೆ ಪ್ರತಿ ದಿನಕ್ಕೆ ರೂ.21/–ರ (ರೂ.9.50/– ಸೇರಿದಂತೆ) ಘಟಕ ವೆಚ್ಚವನ್ನು ನಿಗದಿಪಡಿಸಲಾಗಿದೆ. ಕಬ್ಬಿಣಾಂಶ ಹಾಗೂ ಕ್ಯಾಲ್ಷಿಯಂ ಮಾತ್ರೆ ಸೇವನೆಗೆ ಬೆಂಬಲ ಹಾಗೂ ಪ್ರತಿ ತಿಂಗಳು ಗರ್ಭಿಣಿಯರು ತೂಕವನ್ನು ಪರಿಶೀಲಿಸಲಾಗುತ್ತಿದೆ.

**9. ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ತರಬೇತಿ ಕಾರ್ಯಕ್ರಮ**

**ಲೆಕ್ಕ ಶೀರ್ಷಿಕೆ: 2235–02–102–0–05( ಯೋಜನೆ)**

**ಕೇಂದ್ರದ ಪಾಲು: ರಾಜ್ಯದ ಪಾಲು 60:40**

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ತರಬೇತಿ ಕಾರ್ಯಕ್ರಮವು ಐಸಿಡಿಎಸ್ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಬಹು ಪ್ರಾಮುಖ್ಯತೆ ಹೊಂದಿದ್ದು ಐಸಿಡಿಎಸ್‌ನ ಎಲ್ಲಾ ಹಂತದ ಕರ್ಮಚಾರಿಗಳ ಕಾರ್ಯನಿರ್ವಹಣೆಗೆ ಅವಿಭಾಜ್ಯ ಅಂಗವಾಗಿರುತ್ತದೆ. ಶಿಶು ಅಭಿವೃದ್ಧಿ ಯೋಜನಾಧಿಕಾರಿ ಹಾಗೂ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ನಿಪ್ಸಿಡ್, ದಕ್ಷಿಣ ಪ್ರಾದೇಶಿಕ ಸಂಸ್ಥೆ, ಬೆಂಗಳೂರು ಇಲ್ಲಿ ಹಾಗೂ ಮೇಲ್ವಿಚಾರಕಿಯರಿಗೆ, ದಕ್ಷಿಣ ಕನ್ನಡ ಜಿಲ್ಲೆಯ ಉಜಿರೆಯ ಮಧ್ಯಮಸ್ತರ ತರಬೇತಿ ಕೇಂದ್ರದಲ್ಲಿ ವೃತ್ತಿ/ಪುನ:ಶ್ಚೇತನ ತರಬೇತಿ ನೀಡಲಾಗುತ್ತಿದೆ. ಪ್ರಥಮವಾಗಿ ನೇಮಕಗೊಂಡ ಅಂಗನವಾಡಿ ಕಾರ್ಯಕರ್ತೆಯರಿಗೆ 32 ದಿನಗಳ ವೃತ್ತಿ ತರಬೇತಿಯನ್ನು ರಾಜ್ಯದಲ್ಲಿರುವ 21 ಅಂಗನವಾಡಿ ತರಬೇತಿ ಕೇಂದ್ರಗಳ ಮೂಲಕ ನೀಡಿ ನಂತರ ಪುನಶ್ಚೇತನ ತರಬೇತಿಯನ್ನು 2 ವರ್ಷಕೊಮ್ಮೆ ನೀಡಲಾಗುತ್ತಿದೆ. ಅಂಗನವಾಡಿ ಸಹಾಯಕಿಯರಿಗೆ ಓರಿಯಂಟೇಷನ್ ಹಾಗೂ ಪುನ:ಶ್ಚೇತನ ತರಬೇತಿಯನ್ನು ಸಹ ಈ ತರಬೇತಿ ಕೇಂದ್ರಗಳಲ್ಲಿ ನೀಡಲಾಗುತ್ತಿದೆ. 2013–14 ನೇ ಸಾಲಿನಿಂದ ತರಬೇತಿ ಕಾರ್ಯಕ್ರಮಗಳನ್ನು ಕೇಂದ್ರ ಸರ್ಕಾರದ ಪರಿಷ್ಕೃತ ಮಾರ್ಗಸೂಚಿಯಂತೆ ಆಯೋಜಿಸಲಾಗುತ್ತಿದೆ.

2019–20ನೇ ಸಾಲಿಗೆ ಸದರಿ ಯೋಜನೆಯಡಿ ರೂ.100.00 ಲಕ್ಷಗಳ ಅನುದಾನವನ್ನು ನಿಗದಿಪಡಿಸಲಾಗಿದೆ. ತರಬೇತಿ ಕಾರ್ಯಕ್ರಮಗಳನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಕಾಲಾನುಕಾಲಕ್ಕೆ ನಡೆಸಲಾಗುತ್ತಿದೆ. ತರಬೇತಿ ಕಾರ್ಯಕ್ರಮಕ್ಕೆ ನಿಗದಿತ ಅನುದಾನಕ್ಕಿಂತೆ ಹೆಚ್ಚಿನ ಅನುದಾನದ ಅವಶ್ಯಕತೆಯಿರುವುದರಿಂದ, ಹೆಚ್ಚುವರಿ ಅನುದಾನವನ್ನು ಕೋರಿ ಸರ್ಕಾರಕ್ಕೆ ಏಕ ಕಡತವನ್ನು ಸಲ್ಲಿಸಲಾಗಿದೆ.

**10. ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರಿಗೆ ಮರಣ ಪರಿಹಾರ ನಿಧಿ:**

**ಲೆಕ್ಕ ಶೀರ್ಷಿಕೆ: 2235–02–103–0–99–(100) (ಯೋಜನೆ)**

**ಕೇಂದ್ರದ ಪಾಲು: ರಾಜ್ಯದ ಪಾಲು 0:100**

ಅಂಗನವಾಡಿ ಕಾರ್ಯಕರ್ತೆ ಹಾಗು ಸಹಾಯಕಿಯರು ಸಮಗ್ರ ಶಿಶು ಅಭಿವೃದ್ಧಿ ಯೋಜನೆಗಳಲ್ಲಿ ಗೌರವ ಸೇವೆಯ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿದ್ದಾರೆ. ಅಂಗನವಾಡಿ ಕಾರ್ಯಕರ್ತೆಯರು / ಸಹಾಯಕಿಯರು ಸೇವೆಯಲ್ಲಿರುವಾಗ ಮರಣ ಹೊಂದಿದಲ್ಲಿ ಅವರ ಕುಟುಂಬದವರಿಗೆ ಪರಿಹಾರವನ್ನು ಮತ್ತು

ತೀವ್ರತರವಾದ ಖಾಯಿಲೆಗಳಿಂದ ನರಳುತ್ತಿದ್ದಲ್ಲಿ ಆರ್ಥಿಕ ಪರಿಹಾರವನ್ನು ಈ ಯೋಜನೆಯಡಿ ನೀಡಲಾಗುತ್ತದೆ. ರೂ.20,000/– ಗಳನ್ನು ಮರಣ ಹೊಂದಿದ ಕಾರ್ಯಕರ್ತೆಯರ ಕುಟುಂಬದ ಕಾನೂನುಬದ್ಧ ವಾರಸುದಾರರಿಗೆ ಮತ್ತು ರೂ.10,000/–ಗಳನ್ನು ಮರಣ ಹೊಂದಿದ ಅಂಗನವಾಡಿ ಸಹಾಯಕಿಯರ ಕುಟುಂಬದ ಕಾನೂನುಬದ್ಧ ವಾರಸುದಾರರಿಗೆ ನೀಡಲಾಗುತ್ತಿದೆ. ಸೆಪ್ಟೆಂಬರ್ 2014 ರ ನಂತರ ಮರಣ ಹೊಂದಿದ ಅಂಗನವಾಡಿ ಕಾರ್ಯಕರ್ತೆಯರು / ಸಹಾಯಕಿಯರಿಗೆ ಮರಣ ಪರಿಹಾರದ ಮೊತ್ತವನ್ನು ರೂ.50,000/– ಕ್ಕೆ ಹೆಚ್ಚಿಸಲಾಗಿದೆ. ಕನಿಷ್ಠ ಒಂದು ವರ್ಷ ಸೇವೆ ಪೂರೈಸಿರುವ ಕಾರ್ಯಕರ್ತೆಯರು/ಸಹಾಯಕಿಯರು ಈ ಆರ್ಥಿಕ ಸಹಾಯಕ್ಕೆ ಅರ್ಹರಿರುತ್ತಾರೆ.

2019–20ನೇ ಸಾಲಿನಲ್ಲಿ ಸದರಿ ಯೋಜನೆಯಡಿ ರೂ.100.00 ಲಕ್ಷಗಳ ಅನುದಾನವನ್ನು ಹಂಚಿಕೆ ಮಾಡಲಾಗಿದ್ದು, 3 ಕಂತುಗಳ ಅನುದಾನ ರೂ.75.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಜನವರಿ–2020ರ ಅಂತ್ಯಕ್ಕೆ ರೂ.53.84 ಲಕ್ಷಗಳ ವೆಚ್ಚ ಭರಿಸಲಾಗಿದೆ.

**11. ಅಂಗನವಾಡಿ ಕಟ್ಟಡಗಳ ನಿರ್ಮಾಣ**

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿಯಲ್ಲಿ ಬರುವ ಫಲಾನುಭವಿಗಳಿಗೆ ಯೋಜನೆಯ ಒಳಾಂಗಣ ಹಾಗೂ ಹೊರಾಂಗಣ ಚಟುವಟಿಕೆಗಳನ್ನು ಸಮರ್ಪಕವಾಗಿ ನಡೆಸಲು ಅಂಗನವಾಡಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯಗಳನ್ನೊಳಗೊಂಡ ಸ್ವಂತ ಕಟ್ಟಡವಿರುವುದು ಅವಶ್ಯವಾಗಿರುತ್ತದೆ.

ಪ್ರಸ್ತುತ 62580 ಅಂಗನವಾಡಿ ಹಾಗೂ 3331 ಮಿನಿ ಅಂಗನವಾಡಿ ಕೇಂದ್ರಗಳ ಪೈಕಿ 44312 ಅಂಗನವಾಡಿ ಕೇಂದಗಳು ಮಾತ್ರ ಸ್ವಂತ ಕಟ್ಟಡಗಳನ್ನು ಹೊಂದಿದ್ದು, 1205 ಅಂಗನವಾಡಿ ಕೇಂದ್ರಗಳು ಪಂಚಾಯತ್ ಕಟ್ಟಡಗಳಲ್ಲಿ, 2816 ಅಂಗನವಾಡಿ ಕೇಂದ್ರಗಳು ಸಮುದಾಯದ ಕಟ್ಟಡಗಳಲ್ಲಿ, 121 ಅಂಗನವಾಡಿ ಕೇಂದಗಳು ಯುವಕ ಮಂಡಳಿ ಮತ್ತು 66 ಮಹಿಳಾ ಮಂಡಳಿ ಕಟ್ಟಡಗಳಲ್ಲಿ, 4198 ಶಾಲಾ ಕಟ್ಟಡಗಳು, ಅಂಗನವಾಡಿ ಕೇಂದಗಳು ಶಾಲಾ ಕಟ್ಟಡಗಳಲ್ಲಿ 12003 ಅಂಗನವಾಡಿ ಕೇಂದ್ರಗಳು ಬಾಡಿಗೆ ಕಟ್ಟಡಗಳಲ್ಲಿ ಹಾಗೂ 1190 ತಾತ್ಕಾಲಿಕ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿವೆ.

ಅಂಗನವಾಡಿ ಕಟ್ಟಡಗಳನ್ನು ಅನುದಾನ ಹಾಗೂ ನಿವೇಶನ ಲಭ್ಯತೆಗನುಗುಣವಾಗಿ, ಆರ್.ಐ.ಡಿ.ಎಫ್ ಯೋಜನೆಯಡಿಯಲ್ಲಿ ನಬಾರ್ಡ್‌ದಿಂದ, ವಿಶೇಷ ಅಭಿವೃದ್ಧಿ ಯೋಜನೆಯಡಿ, ಇಲಾಖಾ ವಂತಿಗೆಯಡಿ, ಹಾಗೂ ಇನ್ನಿತರ ಯೋಜನೆಗಳಡಿಯಲ್ಲಿ ನಿರ್ಮಾಣ ಮಾಡಲಾಗುತ್ತಿದೆ.

**ಅ) ಅಂಗನವಾಡಿ ಕಟ್ಟಡಗಳ ನಿರ್ಮಾಣ (ನಬಾರ್ಡ್ ನೆರವು)**
**ಲೆಕ್ಕ ಶೀರ್ಷಿಕೆ: 4235–02–102–1–01–436(ಯೋಜನೆ)**
**ಕೇಂದ್ರದ ಪಾಲು: ರಾಜ್ಯದ ಪಾಲು 0:100**

ಅಂಗನವಾಡಿ ಕೇಂದ್ರ ನಡೆಸಲು ಕಟ್ಟಡದ ತೀವ್ರ ಅವಶ್ಯಕತೆಯನ್ನು ಮನಗಂಡು ನಬಾರ್ಡ್ ಸಂಸ್ಥೆಯು ಕಟ್ಟಡ ಕಟ್ಟಲು ಸಾಲದ ರೂಪದಲ್ಲಿ ಆರ್ಥಿಕ ನೆರವನ್ನು ನೀಡುತ್ತಿದೆ. ನಬಾರ್ಡ್ ಸಂಸ್ಥೆಯು ಶೇಕಡ 85ರಷ್ಟು ಪಾಲನ್ನು ಕಟ್ಟಡ ನಿರ್ಮಾಣಕ್ಕಾಗಿ ನೀಡುತ್ತದೆ ಹಾಗೂ ಉಳಿದ ಶೇಕಡ 15 ರಷ್ಟನ್ನು ರಾಜ್ಯ ಸರ್ಕಾರವು ನೀಡುತ್ತದೆ. ನಬಾರ್ಡ್ ಸಂಸ್ಥೆಯ ಸಾಲವನ್ನು ಸರ್ಕಾರವು 7 ವರ್ಷಗಳ ಒಳಗಾಗಿ ಹಿಂತಿರುಗಿಸಬೇಕಾಗುತ್ತದೆ.

**2019–20–ನಬಾರ್ಡ್ ಕಾಮಗಾರಿಗಳು:**

2019–20ನೇ ಸಾಲಿನಲ್ಲಿ ನಬಾರ್ಡ್ ಸಹಾಯಾನುದಾನದ ಆರ್.ಐ.ಡಿ.ಎಫ್. ಯೋಜನೆಯಡಿ ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕಾಗಿ ಆಯವ್ಯಯದಲ್ಲಿ ರೂ.100.00 ಲಕ್ಷಗಳನ್ನು ಒದಗಿಸಲಾಗಿರುತ್ತದೆ.

ಈ ಯೋಜನೆಯಡಿ, ಅತೀ ಮಳೆಯಿಂದ ಹಾನಿಗೊಳಗಾದ 842 ಅಂಗನವಾಡಿ ಕಟ್ಟಡಗಳ ಪುನರ್ ನಿರ್ಮಾಣ ಮಾಡಲು ಅನುಮತಿ ಕೋರಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ.

**ಆ) ವಿಶೇಷ ಅಭಿವೃದ್ಧಿ ಯೋಜನೆಯಡಿ ಅಂಗನವಾಡಿ ಕಟ್ಟಡಗಳ ನಿರ್ಮಾಣ:**
**ಲೆಕ್ಕ ಶೀರ್ಷಿಕೆ: 4235–02–102–1–02–386 (ಯೋಜನೆ)**
**ಕೇಂದ್ರದ ಪಾಲು: ರಾಜ್ಯದ ಪಾಲು 0:100**

ಪ್ರಾದೇಶಿಕ ಅಸಮಾನತೆಯ ಬಗ್ಗೆ ನಂಜುಂಡಪ್ಪ ವರದಿಯಲ್ಲಿ 114 ಹಿಂದುಳಿದ/ಅತಿ ಹಿಂದುಳಿದ /ಅತ್ಯಂತ ಹಿಂದುಳಿದ ತಾಲ್ಲೂಕುಗಳನ್ನು ಗುರುತಿಸಲಾಗಿದೆ. ವಿಶೇಷ ಅಭಿವೃದ್ಧಿ ಕಾರ್ಯಕ್ರಮದಡಿಯಲ್ಲಿ ಈ ತಾಲ್ಲೂಕುಗಳ/ಜಿಲ್ಲೆಗಳಲ್ಲಿ ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕಾಗಿ ಆದ್ಯತೆ ನೀಡಲಾಗುತ್ತಿದೆ. ಪ್ರತಿ ಅಂಗನವಾಡಿ ಕಟ್ಟಡದ ನಿರ್ಮಾಣಕ್ಕಾಗಿ ಕಪ್ಪು ಮಣ್ಣಿನ ಜಾಗಕ್ಕೆ ರೂ.18.00 ಲಕ್ಷಗಳು ಹಾಗೂ ಕೆಂಪು ಮಣ್ಣಿನ ಜಾಗಕ್ಕೆ ರೂ.16.00 ಲಕ್ಷಗಳ ಘಟಕ ವೆಚ್ಚವನ್ನು ಲೋಕೋಪಯೋಗಿ ಇಲಾಖೆಯವರು ಅಂದಾಜು ಪಟ್ಟಿ ಸಿದ್ಧಪಡಿಸಿ ನೀಡಿರುತ್ತಾರೆ.

2019-20ನೇ ಸಾಲಿಗೆ ಸದರಿ ಯೋಜನೆಯಡಿ ರೂ.3600.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ. ಈಗಾಗಲೇ ಒಟ್ಟು ರೂ.3597.50 ಲಕ್ಷಗಳನ್ನು ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಲಾಗಿದೆ. ಜನವರಿ-2020ರ ಅಂತ್ಯಕ್ಕೆ ಒಟ್ಟು ರೂ.2176.50 ಲಕ್ಷಗಳ ಅನುದಾನ ಸೆಳೆಯಲಾಗಿದೆ.

**ಇ) ಅಂಗನವಾಡಿ ಕಟ್ಟಡಗಳ ನಿರ್ವಹಣೆ (ಜಿಲ್ಲಾ ವಲಯ ಕಾರ್ಯಕ್ರಮ)**

**ಲೆಕ್ಕ ಶೀರ್ಷಿಕೆ: 2211-00-102-0-61(ಯೋಜನೆ)**

**ಕೇಂದ್ರದ ಪಾಲು: ರಾಜ್ಯದ ಪಾಲು 0:100**

2019-20 ನೇ ಸಾಲಿನಲ್ಲಿ ಜಿಲ್ಲಾ ವಲಯ ತಾಲ್ಲೂಕು ಪಂಚಾಯತ್ ಅಂಗನವಾಡಿ ಕಟ್ಟಡಗಳ ನಿರ್ವಹಣೆ ಯೋಜನೆಯಡಿ ರೂ.2476.00ಲಕ್ಷಗಳ ಅನುದಾನವನ್ನು ನಿಗದಪಡಿಸಲಾಗಿದೆ. 2019-20ನೇ ಸಾಲಿನ ಜನವರಿ-2020ರ ಅಂತ್ಯಕ್ಕೆ ರೂ.1825.29 ಲಕ್ಷಗಳನ್ನು ತಾಲ್ಲೂಕು ಪಂಚಾಯತ್‌ಗಳಿಂದ ಬಿಡುಗಡೆ ಮಾಡಲಾಗಿದೆ. ಈ ಅನುದಾನವನ್ನು ಕಟ್ಟಡಗಳ ದುರಸ್ಥಿಗೆ ಬಳಸಲಾಗುತ್ತದೆ. ಜನವರಿ-2020ರ ಅಂತ್ಯಕ್ಕೆ ರೂ.105.75ಲಕ್ಷಗಳ ವೆಚ್ಚ ಭರಿಸಲಾಗಿದೆ.

**ಈ) ಅಂಗನವಾಡಿಗಳ ನಿರ್ವಹಣೆ: ರಾಜ್ಯ ವಲಯ**

**ಲೆಕ್ಕ ಶೀರ್ಷಿಕೆ: 2235-02-102-0-40**

**ಕೇಂದ್ರದ ಪಾಲು: ರಾಜ್ಯದ ಪಾಲು 60:40**

2019-20ನೇ ಸಾಲಿನ ಆಯವ್ಯಯದಲ್ಲಿ ಅಂಗನವಾಡಿ ನಿರ್ವಹಣೆ(ರಾಜ್ಯ ವಲಯ ಯೋಜನೆ) ಯಡಿ ರೂ.1001.00ಲಕ್ಷಗಳ ಅನುದಾನವನ್ನು ನಿಗದಿಪಡಿಸಲಾಗಿರುತ್ತದೆ. ಆಯವ್ಯಯ ಭಾಷಣದಲ್ಲಿ ಘೋಷಣೆ ಮಾಡಿರುವಂತೆ 1000 ಅಂಗನವಾಡಿ ಕಟ್ಟಡಗಳನ್ನು ದುರಸ್ಥಿ ಮಾಡಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ. ರೂ.750.00 ಲಕ್ಷಗಳನ್ನು ಜಿಲ್ಲಾ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ.

**ಉ) ಅಂಗನವಾಡಿ ಕಟ್ಟಡಗಳ ಉನ್ನತೀಕರಣ(ರಾಜ್ಯ ವಲಯ)**

**ಲೆಕ್ಕ ಶೀರ್ಷಿಕೆ: 4235-02-102-1-03**

**ಕೇಂದ್ರದ ಪಾಲು: ರಾಜ್ಯದ ಪಾಲು 60:40**

2019-20ನೇ ಸಾಲಿನ ಅಂಗನವಾಡಿ ಕಟ್ಟಡಗಳ ಉನ್ನತೀಕರಣ ಯೋಜನೆಯ ಲೆಕ್ಕಶಿರ್ಷಿಕೆ 4235-02-102-1-03-059 ರಡಿಯಲ್ಲಿ ರೂ.3.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿರುತ್ತದೆ. ಹೆಚ್ಚುವರಿ ಅನುದಾನ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

**ಊ) ಅಂಗನವಾಡಿ ಕಟ್ಟಡಗಳ ನಿರ್ಮಾಣ (ನರೇಗಾ )**

**ಲೆಕ್ಕ ಶೀರ್ಷಿಕೆ: 4235-02-102-0-06-386**

**ಕೇಂದ್ರದ ಪಾಲು: ರಾಜ್ಯದ ಪಾಲು 0:100**

2019-20 ನೇ ಸಾಲಿಗೆ ರೂ.500.00 ಲಕ್ಷಗಳ ಅನುದಾನವನ್ನು ಆಯವ್ಯದಲ್ಲಿ ನಿಗದಿಪಡಿಸಲಾಗಿದ್ದು, ರೂ.375.00 ಲಕ್ಷಗಳ ಅನುದಾನವನ್ನು ಪನರ್ ನಿಗದಿಪಡಿಸಲಾಗಿದೆ. ಇದರಲ್ಲಿ ಪ್ರತಿ ಕಟ್ಟಡಕ್ಕೆ ರೂ.10.00 ಲಕ್ಷ ಘಟಕ(ನರೇಗಾದ ಪಾಲು ರೂ.5.00 ಲಕ್ಷ, ರಾಜ್ಯದ ಪಾಲು ರೂ.4.00 ಲಕ್ಷ ಹಾಗೂ ಕೇಂದ್ರದ ಪಾಲು ರೂ.1.00 ಲಕ್ಷ) ವೆಚ್ಚದಂತೆ 75 ಕಟ್ಟಡಗಳಿಗೆ ಇಲಾಖಾ ಅನುದಾನ ಪ್ರತಿ ಕಟ್ಟಡಕ್ಕೆ ರೂ.5.00 ಲಕ್ಷದಂತೆ ಒಟ್ಟು ರೂ.375.00

ಲಕ್ಷಗಳನ್ನು ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಲಾಗಿದೆ. ಜನವರಿ-2020ರ ಅಂತ್ಯಕ್ಕೆ ಒಟ್ಟು ರೂ.130.00ಲಕ್ಷಗಳ ಅನುದಾನವನ್ನು ಸೆಳೆಯಲಾಗಿದೆ.

**12. ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚ ಭರಿಸುವ ಯೋಜನೆ**

**ಲೆಕ್ಕ ಶೀರ್ಷಿಕೆ: 2235-02-102-0-30-059(ಯೋಜನೆ)**

**ಕೇಂದದ ಪಾಲು: ರಾಜ್ಯದ ಪಾಲು 0:100**

2007-08 ನೇ ಸಾಲಿನಲ್ಲಿ ಈ ಹೊಸ ಯೋಜನೆಯನ್ನು ಕರ್ನಾಟಕ ಸರ್ಕಾರದಿಂದ ಪಾರಂಭಿಸಲಾಗಿದ್ದು, ತೀವ್ರ ನ್ಯೂನಪೋಷಣೆಗೊಳಗಾದ ಮಕ್ಕಳ ಪೌಷ್ಠಿಕ ಮಟ್ಟ ಸುಧಾರಿಸಿ ಸಾಮಾನ್ಯ ದರ್ಜೆಗೆ ತರಲು ವೈದ್ಯಾಧಿಕಾರಿಗಳ ಸೂಚನೆಯಂತೆ ಔಷದೋಪಚಾರ ಹಾಗೂ ಚಿಕಿತ್ಸಾ ಆಹಾರಕ್ಕಾಗಿ ಪ್ರತಿ ಮಗುವಿಗೆ ವರ್ಷಕ್ಕೆ ರೂ.2000/-ನ್ನು ನೀಡಲಾಗುತ್ತಿದೆ. 2019-20ನೇ ಸಾಲಿನಲ್ಲಿ ರೂ.200.00 ಲಕ್ಷಗಳನ್ನು ಆಯವ್ಯಯದಲ್ಲಿ ಒದಗಿಸಲಾಗಿದ್ದು, ಜನವರಿ-2020ರ ಅಂತ್ಯಕ್ಕೆ ತೀವ್ರ ನ್ಯೂನಪೋಷಣೆಗೆ ಒಳಗಾದ 4,070 ಮಕ್ಕಳ ಔಷಧೋಪಚಾರದ ವೆಚ್ಚಕ್ಕಾಗಿ ರೂ.81.41 ಲಕ್ಷಗಳ ವೆಚ್ಚ ಮಾಡಲಾಗಿದೆ.

**13. ಪಾಯಪೂರ್ವ ಬಾಲಕಿಯರ ಯೋಜನೆ -(SAG)**

**ಲೆಕ್ಕ ಶೀರ್ಷಿಕೆ: 2235-02-103-0-046(ಯೋಜನೆ)**

**ಕೇಂದದ ಪಾಲು: ರಾಜ್ಯದ ಪಾಲು 60:40**

ಜೀವನದಲ್ಲಿ ಕಿಶೋರಾವಸ್ಥೆಯು ಮಾನಸಿಕ, ಬೌದ್ಧಿಕ, ಭಾವನಾತ್ಮಕ ಬೆಳವಣಿಗೆಗೆ ಸಂಬಂಧಿಸಿದಂತೆ ಒಂದು ಪ್ರಮುಖ ಅವಧಿಯಾಗಿದೆ. ಹೆಚ್ಚಿನ ರೀತಿಯಲ್ಲಿ ಸೌಲಭ್ಯ ಒದಗಿಸುವುದಕ್ಕಾಗಿ ಹೊಸ ಚಿಂತನೆಯ ರೂಪದಲ್ಲಿ ಕಿಶೋರಿ ಶಕ್ತಿ ಯೋಜನೆ (KSY) ಹಾಗೂ **ಸಬಲ** ಯೋಜನೆಗಳನ್ನು ವಿಲೀನಗೊಳಿಸಿ ಕೇಂದ್ರ ಸರ್ಕಾರವು 2018-19 ನೇ ಸಾಲಿಗೆ ಸದರಿ ಯೋಜನೆಯನ್ನು ಪ್ರಾಯಪೂರ್ವ ಬಾಲಕಿಯರ ಯೋಜನೆಯನ್ನಾಗಿ ಹೆಸರಿಸಿ ರಾಜ್ಯದ 30 ಜಿಲ್ಲೆಗಳಲ್ಲಿಯೂ ಅನುಷ್ಠಾನಗೊಳಿಸಲಾಗಿದೆ. ಸದರಿ ಯೋಜನೆಯಡಿ 11-14 ವರ್ಷದ ಶಾಲೆಯಿಂದ ಹೊರಗುಳಿದ ಪ್ರಾಯಪೂರ್ವ ಬಾಲಕಿಯರನ್ನು ಫಲಾನುಭವಿಗಳೆಂದು ಗುರುತಿಸಲಾಗುತ್ತಿದ್ದು, 2019-20ನೇ ಸಾಲಿಗೆ ಜಿಲ್ಲೆಗಳಿಂದ ಪಡೆದ ಮಾಹಿತಿಯಂತೆ 17,106 ಫಲಾನುಭವಿಗಳನ್ನು ಗುರುತಿಸಲಾಗಿದೆ.

2019-20ನೇ ಸಾಲಿಗೆ ರೂ.900.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ. ಈ ಯೋಜನೆಯಡಿ ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮ(SNP) ಹಾಗೂ ಪೌಷ್ಠಿಕೇತರ ಅಂಶ ಕಾರ್ಯಕ್ರಮ (Non-Nutrition Components) ಗಳ ಸೇವೆಯನ್ನು ಪ್ರಾಯಪೂರ್ವ ಬಾಲಕಿಯರಿಗೆ ನೀಡಲಾಗುತ್ತಿದೆ. ಪೂರಕ ಪೌಷ್ಠಿಕ ಆಹಾರ (SNP)ವನ್ನು 11-14 ವರ್ಷದ ಶಾಲೆಯಿಂದ ಹೊರಗೆ ಉಳಿದ ಕಿಶೋರಿಯರಿಗೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಅಂಗನವಾಡಿ ಕೇಂದ್ರಗಳಲ್ಲಿ ರೂ.9.50/-ರ ಘಟಕ ವೆಚ್ಚದಲ್ಲಿ ಒದಗಿಸಲು ಕೇಂದ್ರ ಸರ್ಕಾರದ ನಿರ್ದೇಶನವಿರುತ್ತದೆ. ಸದರಿ ಕಾರ್ಯಕ್ರಮಕ್ಕಾಗಿ ಕೇಂದ್ರ ಸರ್ಕಾರದ ಪಾಲು 50% ಹಾಗೂ ರಾಜ್ಯ ಸರ್ಕಾರದ ಪಾಲು 50% ರ ಅನುಪಾತದಲ್ಲಿ ವೆಚ್ಚ ಭರಿಸಲಾಗುತ್ತಿದೆ. 2019-20ನೇ ಸಾಲಿನ ಜನವರಿ-2020ರ ಅಂತ್ಯಕ್ಕೆ ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮಕ್ಕಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಒಟ್ಟು ರೂ.243.76 ಲಕ್ಷಗಳು ಬಿಡುಗಡೆಯಾಗಿದ್ದು, ರೂ.23.48 ಲಕ್ಷಗಳ ವೆಚ್ಚ ಭರಿಸಲಾಗಿದೆ. 15,652 ಫಲಾನುಭವಿಗಳಿಗೆ ಪೂರಕ ಪೌಷ್ಠಿಕ ಆಹಾರವನ್ನು ಒದಗಿಸಲಾಗಿದೆ.

ಪೌಷ್ಠಿಕೇತರ ಅಂಶದಡಿ (Non-Nutrition Components) ಕಿಶೋರಿಯರಿಗೆ ಆರೋಗ್ಯ ತಪಾಸಣೆ, ಪೌಷ್ಠಕತೆ ಮತ್ತು ಆರೋಗ್ಯ ಶಿಕ್ಷಣ (NHE) ,ಕುಟುಂಬ ಕಲ್ಯಾಣ, ಮಕ್ಕಳ ಪಾಲನೆ, ಗೃಹ ನಿರ್ವಹಣೆ, ಸಂತಾನೋತ್ಪತ್ತಿ ಮತ್ತು ಲೈಂಗಿಕ ಆರೋಗ್ಯ, ಜೀವನ ಕೌಶಲ್ಯ ಶಿಕ್ಷಣ, ವೃತ್ತಿಪರ/ಕೌಶಲ್ಯ ಅಭಿವೃದ್ಧಿ ತರಬೇತಿಯನ್ನು ನೀಡಲಾಗುತ್ತದೆ. ಸದರಿ ಕಾರ್ಯಕ್ರಮಕ್ಕಾಗಿ ಕೇಂದ್ರ ಸರ್ಕಾರದ ಪಾಲು 60% ಹಾಗೂ ರಾಜ್ಯ ಸರ್ಕಾರದ ಪಾಲು 40% ರ ಅನುಪಾತದಲ್ಲಿ ವೆಚ್ಚ ಭರಿಸಲಾಗುತ್ತಿದೆ. 2019-20ನೇ ಸಾಲಿಗೆ ಪೌಷ್ಠಿಕೇತರ ಕಾರ್ಯಕ್ರಮಗಳಿಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಒಟ್ಟು ರೂ.74.80 ಲಕ್ಷಗಳ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ.

**14. ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ವಂತಿಕೆ ಆಧಾರಿತ ಪಿಂಚಣಿ ಯೋಜನೆ**

**ಲೆಕ್ಕ ಶೀರ್ಷಿಕೆ: 2235-60-800-0-08-059(ಯೋಜನೆ)**

**ಕೇಂದ್ರದ ಪಾಲು: ರಾಜ್ಯದ ಪಾಲು 0:100**

ಈ ಯೋಜನೆಯತಿ 18-55 ವರ್ಷದ ಅಂ.ಕಾರ್ಯಕರ್ತೆ/ಅಂ. ಸಹಾಯಕಿಯರಿಂದ ಕ್ರಮವಾಗಿ ರೂ.150 ಹಾಗೂ ರೂ.84 ಮಾಹೆಯಾನ ವಂತಿಗೆಯಲ್ಲಿ ಪಡೆದು ವಸೂಲಿ ಮಾಡಿ ಅಷ್ಟೇ ಮೊತ್ತದ ವಂತಿಗೆಯನ್ನು ಸರ್ಕಾರ ಭರಿಸುತ್ತದೆ. 2019-20ನೇ ಸಾಲಿನಲ್ಲಿ ರೂ.1000.00ಲಕ್ಷ ಆಯವ್ಯಯ ಒದಗಿಸಿದ್ದು, ಜನವರಿ-2020ರ ಅಂತ್ಯಕ್ಕೆ 35,853 ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರಿಗೆ ಇಲಾಖೆಯ ವಂತಿಕೆ ರೂ.500.00 ಲಕ್ಷಗಳನ್ನು ಎನ್.ಪಿ.ಎಸ್ ಖಾತೆಗೆ ಜಮೆ ಮಾಡಲಾಗಿದೆ.

**15. ಪ್ರಧಾನ ಮಂತ್ರ ಮಾತೃವಂದನಾ ಯೋಜನೆ**

**ಲೆಕ್ಕ ಶೀರ್ಷಿಕೆ: 2235-02-103-0-61 (ಯೋಜನೆ)**

**ಕೇಂದ್ರದ ಪಾಲು: ರಾಜ್ಯದ ಪಾಲು 60:40**

2010-11ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗಿದ್ದು ಇಂದಿರಾಗಾಂಧಿ ಮಾತೃತ್ವ ಸಹಯೋಗ ಯೋಜನೆ (ಐಜಿಎಮ್ಎಸ್‌ವೈ)ಯನ್ನು 2018-19 ನೇ ಸಾಲಿನಿಂದ ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ ಎಂಬ ಹೆಸರಿನಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ವಿಸ್ತರಿಸಲಾಗಿದೆ. ಈ ಯೋಜನೆಯು 60:40 ಕೇಂದ:ರಾಜ್ಯ ಸರ್ಕಾರದ ಧನ ಸಹಾಯ ಯೋಜನೆಯಾಗಿದೆ. 0-6 ತಿಂಗಳವರೆಗೆ ಕೇವಲ ತಾಯಿ ಎದೆ ಹಾಲುಣಿಸುವುದು, ಹೆರಿಗೆಯಾದ ಒಂದು ಗಂಟೆಯೊಳಗೆ ಎದೆ ಹಾಲುಣಿಸುವುದು ಹಾಗೂ ಅತಿ ಸಣ್ಣಮಕ್ಕಳಿಗೆ ಎದೆ ಹಾಲುಣಿಸುವ ಅಭ್ಯಾಸಗಳನ್ನು (ಐವೈಸಿಎಫ್)ಬೆಳಸಿಕೊಳ್ಳುವ ಬಗ್ಗೆ ಮಹಿಳೆಯರನ್ನು ಪ್ರೋತ್ಸಾಹಿಸುವುದು ಹಾಗೂ ಗರ್ಭಿಣಿಯರಿಗೆ ಬಾಣಂತಿಯರಿಗೆ ಆರೋಗ್ಯ ಮಟ್ಟವನ್ನು ಸುಧಾರಿಸುವ ನಿಟ್ಟಿನಲ್ಲಿ ಉತ್ತಮ ವಾತಾವರಣವನ್ನು ಸೃಷ್ಟಿಸಲು ನಗದು ರೂಪದಲ್ಲಿ ಪ್ರೋತ್ಸಾಹಧನ ನೀಡಲಾಗುವುದು. ಮೊದಲನೆ ಕಂತು ರೂ.1000/-ಗಳನ್ನು, ಗರ್ಭಿಣಿಯಾಗಿ 6 ತಿಂಗಳಲ್ಲಿ, ಎರಡನೇ ಕಂತು ರೂ.2000/- ಗಳನ್ನು ಗರ್ಭಿಣಿಯಾಗಿ 6 ತಿಂಗಳ ನಂತರ ನೀಡಲಾಗುವುದು. ಮೂರನೇಯ ಕಂತು ರೂ.2000/- ಗಳನ್ನು ಮಗು ಮೊದಲನೇ ಹಂತದ ಚುಚ್ಚುಮದ್ದು ಪಡೆದ ನಂತರ ಒಟ್ಟು 3 ಕಂತುಗಳಲ್ಲಿ ರೂ.5000/- ಗಳ ಹೆರಿಗೆ ಭತ್ಯೆಯನ್ನು ನೇರ ನಗದು ವರ್ಗಾವಣೆ ಮೂಲಕ ಫಲಾನುಭವಿಯ ಖಾತೆಗೆ ಜಮಾ ಮಾಡಲಾಗುವುದು. ಮೇಲ್ಕಂಡ ಫಲಾನುಭವಿಗಳು ಎನ್‌ಆರ್‌ಹೆಚ್‌ಎಮ್ ಅಡಿ ಜನನಿ ಸುರಕ್ಷಾ ಯೋಜನೆಯ ಸೌಲಭ್ಯಕ್ಕೆ ಅರ್ಹರಾಗಿರುತ್ತಾರೆ. 2019-20ನೇ ಸಾಲಿಗೆ ರೂ.1000.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿದ್ದು, ಜನವರಿ-2020ರ ಅಂತ್ಯಕ್ಕೆ 2,65,806 ಫಲಾನುಭವಿಗಳಿಗೆ ಯೋಜನೆಯ ಸೌಲಭ್ಯವನ್ನು ಒದಗಿಸಲಾಗಿದ್ದು, ಇದಕ್ಕಾಗಿ ರೂ.19327.00 ಲಕ್ಷಗಳ ವೆಚ್ಚವನ್ನು ಭರಿಸಲಾಗಿದೆ.

**16. ರಾಷ್ಟ್ರೀಯ ಶಿಶುಪಾಲನಾ ಕೇಂದ್ರ ಯೋಜನೆ**

**ಲೆಕ್ಕ ಶೀರ್ಷಿಕೆ: 2235-02-102-0-13-101**

**ಕೇಂದ್ರದ ಪಾಲು: ರಾಜ್ಯದ ಪಾಲು:ಸ್ವಯಂ ಸೇವಾ ಸಂಸ್ಥೆ -60:30:10**

ರಾಷ್ಟ್ರೀಯ ಶಿಶು ಪಾಲನಾ ಕೇಂದ್ರ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಸದರಿ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಪಾಲು ಅನುಕ್ರಮವಾಗಿ 60:30:10 ಅನುಪಾತದಂತೆ ಅನುದಾನವನ್ನು ಒದಗಿಸಲಾಗಿರುತ್ತದೆ. ನವೀಕೃತಗೊಂಡ ಈ ಯೋಜನೆಯು 6 ತಿಂಗಳಿಂದ 3 ವರ್ಷದ ಮಕ್ಕಳಿಗೆ ಪ್ರಾರಂಭಿಕ ಬಾಲ್ಯಾವಸ್ಥೆಯ ಸೇವೆಗಳನ್ನು ನೀಡುವಲ್ಲಿ ಮಹತ್ವಪೂರ್ಣ ಬದಲಾವಣೆಯನ್ನು ತರುವ ಉದ್ದೇಶ ಹೊಂದಿರುತ್ತದೆ. ಉದ್ಯೋಗಸ್ಥ ತಾಯಂದಿರು ತಮ್ಮ ಕೆಲಸದ ಅವಧಿಯಲ್ಲಿ ಮಕ್ಕಳ ಸಮಗ್ರ ಪೋಷಣೆಗಾಗಿ ಶಿಶು ಪಾಲನಾ ಕೇಂದ್ರದಲ್ಲಿ ತಮ್ಮ ಮಕ್ಕಳನ್ನು ಕಳುಹಿಸಲು ಅನುಕೂಲವಾಗುತ್ತದೆ.

**ಉದ್ದೇಶಗಳು:**

- ಉದ್ಯೋಗಸ್ಥ ತಾಯಂದಿರ 6 ತಿಂಗಳಿಂದ 6 ವರ್ಷದ ಮಕ್ಕಳನ್ನು ದಿನಪೂರ್ತಿ ಸುರಕ್ಷಿತವಾಗಿ ನೋಡಿಕೊಳ್ಳುವುದು.
- ಮಕ್ಕಳ ಪೌಷ್ಠಿಕ ಹಾಗೂ ಆರೋಗ್ಯಮಟ್ಟವನ್ನು ಸುಧಾರಿಸುವುದು.
- ಮಕ್ಕಳ ಭೌತಿಕ, ಸಾಮಾಜಿಕ, ಭಾವನಾತ್ಮಕ ಬೆಳವಣಿಗೆಯನ್ನು ಉತ್ತೇಜಿಸುವುದು
- ಮಕ್ಕಳನ್ನು ಕಾಳಜಿಯಿಂದ ನೋಡಿಕೊಳ್ಳುವಂತೆ ತಾಯಂದಿರಿಗೆ ಹಾಗೂ ಪೋಷಕರಿಗೆ ಶಿಕ್ಷಣ ನೀಡುವುದು

**ಸೇವೆಗಳು:**

- ದಿನದ ಆರೈಕೆ, ವಿಶ್ರಾಂತಿ ಸೌಲಭ್ಯ ಒಳಗೊಂಡಿರುತ್ತದೆ.
- 0–3 ವರ್ಷದ ಮಕ್ಕಳಿಗೆ ಪ್ರಾಥಮಿಕ ಉತ್ತೇಜನ ನೀಡುವುದು ಹಾಗೂ 3–6 ವರ್ಷದ ಮಕ್ಕಳಿಗೆ ಶಾಲಾಪೂರ್ವ ಶಿಕ್ಷಣ ನೀಡುವುದು.
- ಪೂರಕ ಪೌಷ್ಠಿಕ ಆಹಾರ.
- ಬೆಳವಣಿಗೆ ಪರಿಶೀಲನೆ.
- ಆರೋಗ್ಯ ತಪಾಸಣೆ ಮತ್ತು ಚುಚ್ಚುಮದ್ದು

2019–20ನೇ ಸಾಲಿಗೆ ಸದರಿ ಯೋಜನೆಯಡಿ ರೂ.200.00 ಲಕ್ಷಗಳ ಅನುದಾನವನ್ನು ನಿಗದಿಪಡಿಸಲಾಗಿದ್ದು, ಈ ಅನುದಾನಕ್ಕೆ ರೂ.633.65ಲಕ್ಷಗಳ ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡಿ, 2018–19ನೇ ಸಾಲಿನಲ್ಲಿ ಕಾರ್ಯನಿರ್ವಹಿಸಿದ ಶಿಶುಪಾಲನಾ ಕೇಂದ್ರಗಳಿಗೆ ಭರಿಸಲು ಸರ್ಕಾರವು ಸೂಚಿಸಿರುತ್ತದೆ. ಈ ಹಿನ್ನೆಲೆಯಲ್ಲಿ 2018–19ನೇ ಸಾಲಿನ ವೆಚ್ಚವನ್ನು 2019–20ನೇ ಸಾಲಿನಲ್ಲಿ ಒದಗಿಸಿರುವ ಅನುದಾನದಲ್ಲಿ ರೂ.152.75 ಲಕ್ಷಗಳನ್ನು 175 ಸ್ವಯಂಸೇವಾ ಸಂಸ್ಥೆಗಳಿಗೆ ಬಿಡುಗಡೆ ಮಾಡಲಾಗಿದ್ದು, ಜನವರಿ–2020ರ ಅಂತ್ಯಕ್ಕೆ ಪೂರ್ಣ ವೆಚ್ಚ ಭರಿಸಲಾಗಿದೆ. 2019–20ನೇ ಸಾಲಿನ 1 ಹಾಗೂ 2ನೇ ತ್ರೈಮಾಸಿಕಗಳಿಗೆ ಕೇಂದ್ರದ ಪಾಲು ರೂ.272.33 ಲಕ್ಷಗಳು ಬಿಡುಗಡೆಯಾಗಿದ್ದು, ರಾಜ್ಯ ಸರ್ಕಾರದಿಂದ ಅನುದಾನ ಬಿಡುಗಡೆ ನಿರೀಕ್ಷಣೆಯಲ್ಲಿದೆ.

### 17. ರಾಷ್ಟ್ರೀಯ ಪೌಷ್ಟಿಕತೆ ಅಭಿಯಾನ –ಪೋಷಣ್ ಅಭಿಯಾನ

**ಲೆಕ್ಕ ಶೀರ್ಷಿಕೆ:2235–02–102–043**

**ಕೇಂದದ ಪಾಲು: ರಾಜ್ಯದ ಪಾಲು – 60:40**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಫಲಾನುಭವಿಗಳ ಗುರಿಯನ್ನಾಧರಿಸಿ ಎಲ್ಲಾ ಪೌಷ್ಠಿಕತೆಯ ಯೋಜನೆಗಳನ್ನು ಒಗ್ಗೂಡಿಸುವ ಯೋಜನೆ ಇದಾಗಿದೆ. ಮುಖ್ಯವಾಗಿ ಮುಂದಿನ 3 ವರ್ಷಗಳಲ್ಲಿ 0–6 ವರ್ಷದ ಮಕ್ಕಳು, ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರ ಪೌಷ್ಠಿಕತೆಯ ಸ್ಥಿತಿಯನ್ನು ನಿರ್ಧಿಷ್ಟ ಅವಧಿಗೆ ಅನುಗುಣವಾಗಿ ಸುಧಾರಿಸುವುದು ಈ ಯೋಜನೆಯ ಮುಖ್ಯವಾದ ಗುರಿಯಾಗಿದೆ.

8ನೇ ಮಾರ್ಚ್ 2018ಕ್ಕೆ ಪ್ರಾರಂಭವಾಗಿರುವ ಈ ಯೋಜನೆಯನ್ನು ಮುಂದಿನ 3 ವರ್ಷಗಳಿಗೆ ಕರ್ನಾಟಕದ 9 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ. ಈ ಯೋಜನೆಯಡಿ ವಿವಿಧ ಇಲಾಖೆಗಳ ನಡುವೆ ಸಮನ್ವಯತೆ ತರುವ ಮೂಲಕ ಪೌಷ್ಠಿಕತೆ ವಿಷಯದಲ್ಲಿ ಸಮಗ್ರವಾದ ಬದಲಾವಣೆ ದೂರದೃಷ್ಟಿಯನ್ನು ಹೊಂದಲಾಗಿದೆ. ಉಳಿದ 11 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ.

ಉದ್ದೇಶಗಳು:

0–6 ವರ್ಷದ ಮಕ್ಕಳಲ್ಲಿನ ಕುಂಠಿತ ಬೆಳವಣಿಗೆಯನ್ನು ಕಡಿಮೆಗೊಳಿಸುವುದು (ವರ್ಷಕ್ಕೆ ಶೇಕಡಾ 2 ರಂತೆ)

- 0–6 ವರ್ಷದ ಮಕ್ಕಳಲ್ಲಿನ ಅಪೌಷ್ಠಿಕತೆಯ (ಕಡಿಮೆ ತೂಕದ ಸರಾಸರಿ ಪ್ರಮಾಣ) ಕಡಿಮೆಗೊಳಿಸವುದು (ವರ್ಷಕ್ಕೆ ಶೇಕಡಾ 2 ರಂತೆ)
- 6 ತಿಂಗಳಿಂದ 59 ತಿಂಗಳವರೆಗಿನ ಮಕ್ಕಳಲ್ಲಿ ರಕ್ತಹೀನತೆಯ ಪ್ರಮಾಣ ಕಡಿಮೆಗೊಳಿಸುವುದು
- 15 ರಿಂದ 49 ವಯಸ್ಸಿನ ಮಹಿಳೆಯರು ಮತ್ತು ಹದಿಹರೆಯದ ಹೆಣ್ಣು ಮಕ್ಕಳಲ್ಲಿ ರಕ್ತಹೀನತೆಯ ಪ್ರಮಾಣವನ್ನು ಕಡಿಮೆಗೊಳಿಸುವುದು. (ವರ್ಷಕ್ಕೆ ಶೇಕಡಾ 3 ರಂತೆ)
- ಕಡಿಮೆ ತೂಕದ ಜನನಗಳ ಪ್ರಮಾಣವನ್ನು ಕಡಿಮೆಗೊಳಿಸುವುದು (ವರ್ಷಕ್ಕೆ ಶೇಕಡಾ 2 ರಂತೆ)

2019–20ನೇ ಸಾಲಿಗೆ ಸದರಿ ಯೋಜನೆಯಡಿ ರೂ.12972.15 ಲಕ್ಷಗಳ ಅನುದಾನವನ್ನು ಆಯವ್ಯದಲ್ಲಿ ನಿಗದಿಪಡಿಸಲಾಗಿದೆ. ಪ್ರಸಕ್ತ ಸಾಲಿಗೆ ರೂ. 12972.15 ಲಕ್ಷ (ರೂ. 7967.99 ಕೇಂದ್ರ + ರೂ. 5004.16 ಲಕ್ಷಗಳ) ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, ಜನವರಿ–2020ರ ಅಂತ್ಯಕ್ಕೆ ರೂ. 1040.31 ಲಕ್ಷಗಳ ವೆಚ್ಚ ಭರಿಸಲಾಗಿದೆ. ಅಗತ್ಯ ಪರಿಕರಗಳಾದ Smart phones, Weighing Scales, Infantometer, mother and child weighing scales ಗಳನ್ನು ಖರೀದಿಸಲು GEM Portal ನಲ್ಲಿ ಕರೆಯಲು ಟೆಂಡರ್ ಕರೆಯಲಾಗಿದ್ದು 19 ಜಿಲ್ಲೆಗಳ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಉಳಿದ 11 ಜಿಲ್ಲೆಗಳ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿಲ್ಲದ ಕಾರಣ ಬಿಡುಗಡೆ ಮಾಡಲಾದ ಅನುದಾನವನ್ನು ಸೆಳೆದು ಐಸಿಪಿಎಸ್ ಖಾತೆಯಲ್ಲಿರಿಸಲಾಗಿದೆ.

**18. <u>ಮುಖ್ಯಮಂತ್ರಿ ಮಾತೃಶ್ರೀ ಯೋಜನೆ:</u> ಲೆಕ್ಕ ಶೀರ್ಷಿಕೆ: – 2235-02-103-0-58, ಕೇಂದ್ರದ ಪಾಲು: ರಾಜ್ಯದ ಪಾಲು: - 0:100**

ಸದರಿ ಯೋಜನೆಯಡಿ ಬಿ.ಪಿ.ಎಲ್/ಆದ್ಯತಾ ಕುಟುಂಬದ ಗರ್ಭಿಣಿಯರಿಗೆ ಹೆರಿಗೆ ಪೂರ್ವದ 3 ತಿಂಗಳು ಮತ್ತು ಬಾಣಂತಿಯರಿಗೆ ಹೆರಿಗೆ ನಂತರದ 3 ತಿಂಗಳ ಕಾಲ ಮಾಸಿಕ ರೂ.1,000/–ಗಳ ಸಹಾಯಧನವನ್ನು ಅವರ ಆಧಾರ್ ಲಿಂಕ್ಡ್ ಬ್ಯಾಂಕ್ ಖಾತೆಗೆ ನೇರವಾಗಿ ವರ್ಗಾಯಿಸಲಾಗುವುದು. ಸದರಿ ಯೋಜನೆಯು ಮೊದಲ 2 ಮಕ್ಕಳಿಗೆ ಅನ್ವಯವಾಗುತ್ತದೆ.

ಉದ್ದೇಶಗಳು:

- ಈ ಯೋಜನೆಯಡಿ ನೀಡುವ ನಗದು ರೂಪದ ಸಹಾಯ ಧನವು ಪ್ರಸವದ ಮೊದಲು ಹಾಗೂ ಪ್ರಸವದ ನಂತರ ಮಹಿಳೆಯು ಸಾಕಷ್ಟು ವಿಶ್ರಾಂತಿ ಪಡೆಯಲು.
- ಗರ್ಭಿಣಿ ಹಾಗೂ ಬಾಣಂತಿಯರ ಪೌಷ್ಟಿಕತೆ ಮತ್ತು ಆರೋಗ್ಯ ಮಟ್ಟ ಉತ್ತಮಗೊಳ್ಳುವುದರಿಂದ ಕಡಿಮೆ ತೂಕವುಳ್ಳ ಶಿಶುವಿನ ಜನನವನ್ನು ಕಡಿಮೆಗೊಳಿಸಲು.
- ಸುರಕ್ಷಿತ ಹೆರಿಗೆಗೆ ಸಹಾಯಕವಾಗಲು.

ಸದರಿ ಯೋಜನೆಯಡಿ 2019–20ನೇ ಸಾಲಿಗೆ ರೂ.47000.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿದ್ದು, ಜನವರಿ–2020ರ ಅಂತ್ಯಕ್ಕೆ 4,96,128 ಫಲಾನುಭವಿಗಳಿಗೆ ಯೋಜನೆಯ ಸೌಲಭ್ಯವನ್ನು ಒದಗಿಸಲಾಗಿದ್ದು, ಇದಕ್ಕಾಗಿ ರೂ.6936.00 ಲಕ್ಷಗಳ ವೆಚ್ಚವನ್ನು ಭರಿಸಲಾಗಿದೆ.

**<u>ಭಾಗ್ಯಲಕ್ಷ್ಮಿ</u>** :– ಲೆಕ್ಕ ಶೀರ್ಷಿಕೆ: 2235–02–102–0–25, ಯೋಜನೆ ಅಡಿಯಲ್ಲಿ ಇದ್ದಲ್ಲಿ, ಕೇಂದ್ರ ಮತ್ತು ರಾಜ್ಯದ ಪಾಲು: 0:100 : ಹೆಣ್ಣು ಮಗುವಿನ ಸ್ಥಾನವನ್ನು ಮೊದಲು ಕುಟುಂಬದಲ್ಲಿ ನಂತರ ಸಮಾಜದಲ್ಲಿ ಹೆಚ್ಚಿಸಲು ಮತ್ತು ಬಡತನದ ರೇಖೆಗಿಂತ ಕೆಳಗಿರುವ ಕುಟುಂಬಗಳಲ್ಲಿ ಹೆಣ್ಣು ಮಗುವಿನ ಜನನ ಉತ್ತೇಜಿಸಲು 2006–07ನೇ ಸಾಲಿನಲ್ಲಿ ಹೆಣ್ಣು ಮಕ್ಕಳ ರಕ್ಷಣೆಗೆ "ಭಾಗ್ಯಲಕ್ಷ್ಮಿ" ಎಂಬ ಯೋಜನೆಯನ್ನು ಜಾರಿಗೆ ತರಲಾಯಿತು.

ಈ ಯೋಜನೆಯ ಆರ್ಥಿಕ ಸೌಲಭ್ಯವನ್ನು ಹೆಣ್ಣು ಮಗುವಿಗೆ ಅದರ ತಾಯಿ/ತಂದೆ/ಪೋಷಕರ ಮೂಲಕ ಕೆಲವು ನಿಬಂಧನೆಗಳನ್ನು ಪೂರೈಸಿದಲ್ಲಿ ನೀಡಲಾಗುವುದು. ಬಡತನ ರೇಖೆಗಿಂತ ಕೆಳಗೆ ಇರುವ ಕುಟುಂಬಗಳಲ್ಲಿ 31.3.2006ರ ನಂತರ ಜನಿಸಿದ ಹೆಣ್ಣು ಮಕ್ಕಳು ಈ ಯೋಜನೆಯಡಿ ಫಲಾನುಭವಿಗಳಾಗಿ ನೋಂದಾಯಿಸಿಕೊಳ್ಳಲು ಅರ್ಹರಿರುತ್ತಾರೆ. ಮಗು ಜನಿಸಿದ ಒಂದು ವರ್ಷದೊಳಗೆ ಜನನ ಪ್ರಮಾಣ ಪತ್ರವನ್ನು ಒದಗಿಸಿ ನೋಂದಾಯಿಸಲು ಅವಕಾಶವಿದೆ. ಯೋಜನೆಯ ಸೌಲಭ್ಯಗಳನ್ನು ಬಡತನ ರೇಖೆಗಿಂತ ಕೆಳಗೆ ಇರುವ ಕುಟುಂಬದ ಇಬ್ಬರು ಹೆಣ್ಣುಮಕ್ಕಳಿಗೆ ಸೀಮಿತಗೊಳಿಸಲಾಗಿದೆ. ಫಲಾನುಭವಿ ಹೆಣ್ಣುಮಗುವಿನ ತಂದೆ ಅಥವಾ ತಾಯಿ ಶಾಶ್ವತ ಕುಟುಂಬ ಯೋಜನೆಯನ್ನು ಅಳವಡಿಸಿಕೊಂಡಿರತಕ್ಕದ್ದು ಮತ್ತು ಕುಟುಂಬದಲ್ಲಿ ಮಕ್ಕಳ ಸಂಖ್ಯೆ 2ಕ್ಕಿಂತ ಹೆಚ್ಚಿಗೆ ಇರಬಾರದು. ನೋಂದಣಿ ನಂತರ ಹಾಗೂ ಪೂರ್ಣ ಪರಿಶೀಲನೆ ನಂತರ ದಿನಾಂಕ:31.07.2008ರವರೆಗೆ ಜನಿಸಿದ ಪ್ರತಿ ಫಲಾನುಭವಿಗೆ ರೂ.10,000/-ಗಳನ್ನು ಆಯ್ಕೆಯಾದ ಪಾಲುದಾರ ಹಣಕಾಸು ಸಂಸ್ಥೆಯಲ್ಲಿ ನಿಶ್ಚಿತ ಠೇವಣಿಯನ್ನು ಇಡಲಾಗಿದೆ. ಪಾಲುದಾರ ಹಣಕಾಸು ಸಂಸ್ಥೆಯು ಹೆಣ್ಣುಮಗುವಿನ ಹೆಸರಿನಲ್ಲಿ ಇಟ್ಟ ರೂ.10,000/-ಗಳ ಠೇವಣಿಯ ಮೇಲಿನ ಆದಾಯವನ್ನು ಗರಿಷ್ಠಗೊಳಿಸಿ, ಠೇವಣಿ ಹಣವನ್ನು ಬಡ್ಡಿ ಸಮೇತವಾಗಿ ಫಲಾನುಭವಿಗಳಿಗೆ 18 ವರ್ಷಗಳು ಪೂರ್ಣಗೊಂಡನಂತರ ದೊರಕಿಸಿಕೊಡುತ್ತದೆ. ಮೊದಲ ಮಗುವಿಗೆ ಪರಿಪಕ್ವ ಮೊತ್ತ ರೂ.34,751/-ನ್ನು ಮತ್ತು ಎರಡನೇ ಮಗುವಿಗೆ ರೂ.40,918/-ನ್ನು ನೀಡಲಾಗುತ್ತದೆ. ಫಲಾನುಭವಿಗೆ ವಿದ್ಯಾರ್ಥಿ ವೇತನ, ವಿಮೆ ಸೌಲಭ್ಯ ಮುಂತಾದ ಮಧ್ಯಂತರ ಸಂದಾಯಗಳನ್ನು ಯೋಜನೆಯಡಿ ತಿಳಿಸಲಾದ ಅರ್ಹತೆ ಮಾನದಂಡಗಳನ್ನು ಪೂರೈಸುತ್ತಿದ್ದಲ್ಲಿ ನೀಡಲಾಗುವುದು.

ಈ ಯೋಜನೆಯನ್ನು ದಿನಾಂಕ:20.01.2009ರಂದು ಪರಿಷ್ಕರಿಸಲಾಗಿರುತ್ತದೆ. (ದಿನಾಂಕ:01.08.2008 ರಿಂದ ಜನಿಸಿದ ಹೆಣ್ಣು ಮಕ್ಕಳಿಗೆ ಅನ್ವಯಿಸುತ್ತದೆ). ಪರಿಷ್ಕರಿಸಲಾದ ಯೋಜನೆಯ ರೂಪುರೇಷೆಗಳು ಕೆಳಕಂಡಂತಿವೆ. ಯೋಜನೆಯಡಿ ನೋಂದಣಿಯಾದ ಕುಟುಂಬದಲ್ಲಿನ ಮೊದಲನೇ ಹೆಣ್ಣು ಮಗುವಿನ ಹೆಸರಿನಲ್ಲಿ ರೂ.19,300/- ಹಾಗೂ ಅದೇ ಕುಟುಂಬದಲ್ಲಿನ 2ನೇ ಹೆಣ್ಣು ಮಗುವಿನ ಹೆಸರಿನಲ್ಲಿ ರೂ. 18,350/- ಗಳನ್ನು ಪಾಲುದಾರ ಹಣಕಾಸು ಸಂಸ್ಥೆಯಲ್ಲಿ ಪ್ರಾರಂಭಿಕ ಠೇವಣಿ ಇಡಲಾಗುತ್ತದೆ. 18 ವರ್ಷ ಪೂರ್ಣಗೊಂಡ ನಂತರದಲ್ಲಿ ಹೆಣ್ಣು ಮಕ್ಕಳು ರೂ. 1,00,000/- ಪರಿಪಕ್ವ ಮೊತ್ತ ಪಡೆಯಲು ಅರ್ಹರಿರುತ್ತಾರೆ.

**<u>ಯೋಜನೆಯ ಉದ್ದೇಶಗಳು:</u>**

- ಬಡತನ ರೇಖೆಗಿಂತ ಕೆಳಗಿನ ಕುಟುಂಬಗಳಲ್ಲಿ ಹೆಣ್ಣು ಮಗುವಿನ ಜನನವನ್ನು ಉತ್ತೇಜಿಸುವುದು ಮತ್ತು ಆತ್ಮ ಸ್ಥೈರ್ಯ ತುಂಬುವುದು.
- ಬಾಲ ಕಾರ್ಮಿಕತೆ, ಹೆಣ್ಣು ಭ್ರೂಣಹತ್ಯೆ, ಬಾಲ್ಯ ವಿವಾಹ ಮತ್ತು ಹೆಣ್ಣು ಮಕ್ಕಳ ಮಾರಾಟ ಮುಂತಾದ ಸಾಮಾಜಿಕ ಪಿಡುಗುಗಳನ್ನು ತಡೆಗಟ್ಟುವುದು.
- ಆರೋಗ್ಯ, ಶಿಕ್ಷಣ, ಪೋಷಣೆ ಮತ್ತು ಪೌಷ್ಠಿಕ ಮಟ್ಟವನ್ನು ಉತ್ತಮ ಪಡಿಸುವುದರ ಮೂಲಕ ಹೆಣ್ಣು ಮಕ್ಕಳ ಸರ್ವಾಂಗೀಣ ಅಭಿವೃದ್ಧಿಯನ್ನು ಉತ್ತಮಪಡಿಸುದು.
- ಹೆಣ್ಣು ಮಗುವಿಗೆ ಆರ್ಥಿಕ ನೆರವು ನೀಡುವುದರ ಮೂಲಕ ಅವರನ್ನು ಸಮಾಜದಲ್ಲಿ ಸದೃಢರನ್ನಾಗಿ ಮಾಡುವುದು.

**ಪ್ರಸ್ತುತ ಯೋಜನೆಯ ಸೌಲಭ್ಯ ಪಡೆಯಲು ಇರಬೇಕಾದ ಅರ್ಹತೆಯ ಅಂಶಗಳು :**

ಭಾಗ್ಯಲಕ್ಷ್ಮಿ ಯೋಜನೆಯನ್ನು 2006-07ನೇ ಸಾಲಿನಿಂದ ಜಾರಿಗೊಳಿಸಲಾಗಿದೆ. ಈ ಬಗ್ಗೆ ಸರ್ಕಾರದ ಆದೇಶ ದಿನಾಂಕ: 06.03.2015ರ ಸರಳೀಕರಣ ಆದೇಶವನ್ನು ಹೊರಡಿಸಲಾಗಿದೆ. ಅದರಂತೆ,

- ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಗುರುತಿಸಿ ಶಾಶ್ವತ ಬಿಪಿಎಲ್ ಕಾರ್ಡ್/ಆದ್ಯತಾ ಕುಟುಂಬ ಪಡಿತರ ಚೀಟಿ ಹೊಂದಿರುವ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದಲ್ಲಿ ಜನಿಸಿದ ಎರಡು ಹೆಣ್ಣು ಮಕ್ಕಳು ಯೋಜನೆಯಡಿ ನೊಂದಣಿ ಮಾಡಲು ಅರ್ಹರಿರುತ್ತಾರೆ.

- ಕುಟುಂಬದಲ್ಲಿ ಮಕ್ಕಳ ಸಂಖ್ಯೆ ಎರಡನ್ನು ಮೀರಿರಬಾರದು. ಈ ಕುಟುಂಬವು ಮಗುವಿನ ತಂದೆ ಅಥವಾ ತಾಯಿ ಯಾರದಾರೊಬ್ಬರು ಶಾಶ್ವತ ಕುಟುಂಬ ಯೋಜನೆಯ ಪದ್ಧತಿಯನ್ನು ಅಳವಡಿಸಿಕೊಂಡಿರಬೇಕು. ವಿಶೇಷ ಪ್ರಕರಣಗಳಲ್ಲಿ ಅಂದರೆ ಮೊದಲನೇ ಹೆರಿಗೆಯಲ್ಲಿ ಅವಳಿ ತ್ರಿವಳಿ ಹೆಣ್ಣು ಮಕ್ಕಳು ಜನಿಸಿದ್ದಲ್ಲಿ ಹಾಗು ಎರಡನೇ ಹೆರಿಗೆಯಲ್ಲಿ ಅವಳಿ/ತ್ರಿವಳಿ ಹೆಣ್ಣು ಮಕ್ಕಳು ಜನಿಸಿದ್ದಲ್ಲಿ ಈ ಎಲ್ಲಾ ಹೆಣ್ಣು ಮಕ್ಕಳಿಗೂ ಸೌಲಭ್ಯ ನೀಡುವುದು. ಈ ಸೌಲಭ್ಯವನ್ನು ಎರಡು ಹೆರಿಗೆಗೆ ಮಾತ್ರ ಮಿತಿಗೊಳಿಸುವುದು. ಇಂತಹ ಪ್ರಕರಣಗಳಲ್ಲಿ ಮಾತ್ರ ಕುಟುಂಬದ ಮಕ್ಕಳ ಸಂಖ್ಯೆ ಎರಡನ್ನು ಮೀರಿರಬಾರದು ಎಂಬ ನಿಯಮವನ್ನು ಸಡಿಲಿಸಲಾಗಿದೆ.
- ಈ ಯೋಜನೆಯನ್ನು ಗ್ರಾಮಾಂತರ ಮತ್ತು ನಗರ ಪ್ರದೇಶಗಳಲ್ಲೂ ಅನುಷ್ಠಾನಗೊಳಿಸಲಾಗುವುದು. ಅಂಗನವಾಡಿ ಕೇಂದ್ರಗಳು ಇಲ್ಲದೆ ಇರುವ ಪ್ರದೇಶಗಳಲ್ಲಿ ವಾಸಿಸುವ ಪೋಷಕರು ತಮ್ಮ ಸಮೀಪದ ಅಂಗನವಾಡಿ ಕೇಂದ್ರದಲ್ಲಿ ನೊಂದಣಿ ಮಾಡುವುದು. ಮಗುವಿನ ಜನನವನ್ನು ಕಡ್ಡಾಯವಾಗಿ ನೊಂದಾಯಿಸಿರಬೇಕು ಹಾಗೂ ಜನನ ಪ್ರಮಾಣ ಪತ್ರವನ್ನು ಹೊಂದಿರಬೇಕು.

  ಈ ಯೋಜನೆಯ ಸರ್ಕಾರಿ ಆದೇಶ ಸಂಖ್ಯೆ:ಮಮಇ: 67 ಮಮಅ ದಿನಾಂಕ 24-02-2018 ರಲ್ಲಿ ಭಾಗ್ಯಲಕ್ಷ್ಮಿ ಯೋಜನೆಯ ಮಾರ್ಗಸೂಚಿಗಳನ್ನು ಪರಿಷ್ಕರಿಸಲಾಗಿದ್ದು ಸದರಿ ಆದೇಶದಂತೆ

  - ಯೋಜನೆಯಡಿ ನೋಂದಣಿ ಮಾಡಲು ಮಗು ಜನಿಸಿದ ಒಂದು ವರ್ಷದೊಳಗೆ ಇರುವ ಅವಧಿಯನ್ನು ಮಗು ಜನಿಸಿದ 2 ವರ್ಷಗಳವರೆಗೆ ವಿಸ್ತರಿಸಲಾಗಿದೆ ಮತ್ತು
  - ಎರಡನೇ ಮಗುವನ್ನು ನೋಂದಣಿ ಮಾಡುವ ಸಂದರ್ಭದಲ್ಲಿ ಕಡ್ಡಾಯ ಕುಟುಂಬ ಯೋಜನೆ ಶಸ್ತ್ರ ಚಿಕಿತ್ಸೆಗೆ ಒಳಪಡಬೇಕೆಂಬ ಷರತ್ತನ್ನ ಕೈಬಿಡಲಾಗಿದೆ. ಉಳಿದಂತೆ ದಿನಾಂಕ:06.03.2015ರ ಸರಳೀಕರಣದಲ್ಲಿನ ನಿಯಮಗಳು ಯಥಾವತ್ತಾಗಿ ಮುಂದುವರೆಯುತ್ತದೆ.
- ಪರಿಪಕ್ವ ಮೊತ್ತವನ್ನು ಪಡೆಯಲು ಫಲಾನುಭವಿ ಮಗು ಕನಿಷ್ಠ 8ನೇ ತರಗತಿಯವರೆಗೆ ವಿದ್ಯಾಭ್ಯಾಸವನ್ನು ಪಡೆದಿರಬೇಕು. ಆದರೆ ವಿಕಲಚೇತನ ಮಕ್ಕಳಿಗೆ ವಿನಾಯಿತಿ ನೀಡಲಾಗಿದ್ದು, ಸದರಿ ಮಕ್ಕಳು 1 ರಿಂದ 5ನೇ ತರಗತಿವರೆಗೆ ವ್ಯಾಸಂಗ ಮಾಡಿರಬೇಕು, ಒಂದು ವೇಳೆ ವಿಕಲಚೇತನ ಮಕ್ಕಳು ತೀವ್ರತರವಾದ
- ವಿಕಲತೆಯಿಂದ ಬಳಲುತ್ತಿದ್ದಲ್ಲಿ ಸಂಬಂಧಪಟ್ಟ ಜಿಲ್ಲಾ ಉಪ ನಿರ್ದೇಶಕರು ಪ್ರತಿ ಪ್ರಕರಣಗಳ ಸಾಧಕ ಬಾಧಕಗಳನ್ನು ಪರಿಶೀಲಿಸಿ ಈ ಷರತ್ತನ್ನು ಸಹ ಸಡಿಲಿಸಲು ಅಧಿಕಾರ ನೀಡಿ ಆದೇಶಿಸಿದೆ.
- 5ನೇ ಮತ್ತು 8ನೇ ತರಗತಿ ಉತ್ತೀರ್ಣರಾಗಿರುವ ಬಗ್ಗೆ ಶಾಲಾ ಮುಖ್ಯೋಪಾಧ್ಯಾಯರಿಂದ ದೃಢೀಕರಣ ಪಡೆದು ಸಲ್ಲಿಸುವುದು.
- ಬಾಲಕಾರ್ಮಿಕ ನಿಷೇಧ ಕಾಯ್ದೆ 1986ರಂತೆ ಬಾಲ ಕಾರ್ಮಿಕಳಾಗಿರತಕ್ಕದ್ದಲ್ಲ.
- 18 ವರ್ಷ ಪೂರೈಸುವ ಮೊದಲು ವಿವಾಹವಾಗತಕ್ಕದ್ದಲ್ಲ.
- ಆಯ್ಕೆಯಾದ ಫಲಾನುಭವಿಯು ಮೇಲೆ ತಿಳಿಸಿದ ಅರ್ಹತೆಯ ಮಾನದಂಡಗಳಲ್ಲಿನ ಯಾವುದೇ ಒಂದು ಷರತ್ತುನ್ನು ಪೂರೈಸದಿದ್ದಲ್ಲಿಯೂ ಸಹ ಸೌಲಭ್ಯವನ್ನು ಮುಟ್ಟುಗೋಲು ಹಾಕಲಾಗುವುದು.
- ದಿನಾಂಕ:01.04.2006ರಿಂದ 31.07.2008ರವರೆಗೆ ಜನಿಸಿ ಯೋಜನೆಯಡಿ ನೊಂದಣಿಯಾದ ಮಕ್ಕಳು ವಿದ್ಯಾರ್ಥಿ ವೇತನ ಪಡೆಯಲು ಪ್ರತಿ ತರಗತಿಯಲ್ಲಿಯೂ ವರ್ಷದಿಂದ ವರ್ಷಕ್ಕೆ ತೇರ್ಗಡೆ ಹೊಂದಬೇಕು. ಸದರಿ ಯೋಜನೆಯನ್ನು ಎಲ್.ಐ.ಸಿ. ಸಂಸ್ಥೆಯ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ.

**ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ :** 2006-07 : ಲೆಕ್ಕ ಶೀರ್ಷಿಕೆ: 2235-02-102-0-27-117 : ಇದು ರಾಜ್ಯ ವಲಯದ ಕಾರ್ಯಕ್ರಮವಾಗಿರುತ್ತದೆ. 6-18 ವರ್ಷದ ವಯೋಮಿತಿಯೊಳಗಿನ ಮಕ್ಕಳಲ್ಲಿ ಅಪ್ರತಿಮ ಶೌರ್ಯವನ್ನು ಪ್ರದರ್ಶಿಸಿ ಇತರರ ಪ್ರಾಣ ರಕ್ಷಣೆ ಮಾಡಿದ ಮಕ್ಕಳಿಗೆ ಪ್ರಶಸ್ತಿ ನೀಡುವ ಯೋಜನೆಯನ್ನು 2006-07ನೇ ಸಾಲಿನಿಂದ ಜಾರಿಗೆ ತರಲಾಗಿದೆ. ಸದರಿ ಯೋಜನೆಯ ಮಾರ್ಗಸೂಚಿಗಳನ್ನು ಪರಿಷ್ಕರಿಸಿ 2017-18ನೇ ಸಾಲಿನಿಂದ 6-18 ವರ್ಷದ ವಯೋಮಿತಿಯೊಳಗಿನ ಬಾಲಕರನ್ನು ಹೊಯ್ಸಳ ಪ್ರಶಸ್ತಿಗೆ ಮತ್ತು ಬಾಲಕಿಯರನ್ನು ಕೆಳದಿ ಚೆನ್ನಮ್ಮ ಪ್ರಶಸ್ತಿಗೆ ಆಯ್ಕೆ ಮಾಡಲು ಆದೇಶವನ್ನು ಹೊರಡಿಸಲಾಗಿದೆ. ಈ ಪ್ರಶಸ್ತಿಯು ರೂ. 10,000/-ಗಳ ನಗದು ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ. ಈ ಪ್ರಶಸ್ತಿಗಾಗಿ

ಆಯ್ಕೆಯಾದ ಮಕ್ಕಳಿಗೆ ದ್ವಿತೀಯ ಪಿ.ಯು.ಸಿ ಪೂರೈಸುವವರೆಗೂ (18 ವರ್ಷದ ಮಿತಿಯೊಳಗೆ) ವಿದ್ಯಾಭ್ಯಾಸ ಮುಂದುವರೆಸಲು ಪ್ರತಿ ವರ್ಷ ರೂ.2000/-ಗಳ ಶಿಷ್ಯವೇತನವನ್ನು ನೀಡಲಾಗುವುದು. 2019-20ನೇ ಸಾಲಿನಲ್ಲಿ ರಾಜ್ಯ ಮ್ಮಟ್ಟದಲ್ಲಿ 5 ಮಕ್ಕಳಿಗೆ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿಯೊಂದಿಗೆ ರೂ.10,000/-ಗಳ ನಗದು ವ್ರೆತ್ತ ಮತ್ತು ಪ್ರಶಸ್ತಿ ಪತ್ರವನ್ನು ಪ್ರಧಾನ ಮಾಡಲಾಗವುದು.

ಅಲ್ಲದೆ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ ಯೋಜನೆಯಡಿ ಜಿಲ್ಲಾ ಮಟ್ಟದಲ್ಲಿ ಅಸಾಧಾರಣ ಸಾಧನೆ ಮಾಡಿದ ಮಕ್ಕಳನ್ನು ಪ್ರೋತ್ಸಾಹಿಸಲು ಆಯ್ಕೆ ಕ್ಷೇತ್ರಗಳನ್ನು ಕಲೆ, ಸಾಂಸ್ಕೃತಿಕ, ಸಂಗೀತ ಈ ಮೂರು ಕ್ಷೇತ್ರಗಳನ್ನು ವಿಲೀನಗೊಳಿಸಿ ಒಂದು ಕ್ಷೇತ್ರವೆಂದು ಪರಿಗಣಿಸಿ ನಾವೀನ್ಯತೆ, ತಾರ್ಕಿಕ ಮತ್ತು ಕ್ರೀಡೆ ಒಟ್ಟು 4 ಕ್ಷೇತ್ರಗಳನ್ನು ನಿಗಧಿಪಡಿಸಿ ಪರಿಷ್ಕರಿಸಿ ಸರ್ಕಾರದ ಆದೇಶ ಸಂಖ್ಯೆ: ಮಮಇ:16:ಮಮಅ:2017, ದಿನಾಂಕ:06.09.2019ರಲ್ಲಿ ಆದೇಶಿಸಿದೆ. ಇದರಿಂದ ಪ್ರತಿ ಜಿಲ್ಲೆಗಳಿಗೆ 4 ಕ್ಷೇತ್ರಗಳಿಂದ 8 ಮಕ್ಕಳನ್ನು ಆಯ್ಕೆ ಮಾಡಲು ಅವಕಾಶವಿರುತ್ತದೆ. ಸದರಿ ಪ್ರಶಸ್ತಿಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಯ್ಕೆ ಮಾಡಲಾಗುತ್ತದೆ. ಈ ಪ್ರಶಸ್ತಿಯು ರೂ.10,000/- ನಗದು ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ.

**ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ ವ್ಯಕ್ತಿ ಹಾಗೂ ಸಂಸ್ಥೆಗಳಿಗೆ ರಾಷ್ಟ್ರ ಪ್ರಶಸ್ತಿ :**

ಮಕ್ಕಳ ಕಲ್ಯಾಣ/ಅಭಿವೃದ್ಧಿ/ರಕ್ಷಣೆ ಕ್ಷೇತ್ರದಲ್ಲಿ ನಿರತವಾಗಿರುವ ವ್ಯಕ್ತಿ ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಅವಿರತ ಸೇವೆಗಳನ್ನು ಗುರುತಿಸಿ, ಪ್ರಶಸ್ತಿ ನೀಡುವ ಯೋಜನೆಯನ್ನು ಕೇಂದ್ರ ಸರ್ಕಾರವು ಜಾರಿಗೆ ತಂದಿರುತ್ತದೆ. 2018-19ನೇ ಸಾಲಿನಿಂದ ನೇರವಾಗಿ ಆನ್ ಲೈನ್ ಮುಖಾಂತರ ಕೇಂದ್ರ ಸರ್ಕಾರದ ಇಲಾಖಾ ಮಂತ್ರಾಲಯದ ಮುಖಾಂತರ ಅರ್ಜಿಯನ್ನು ಅಹ್ವಾನಿಸಿ ಅವರೇ ಆಯ್ಕೆ ಮಾಡಿ ಸನ್ಮಾನಿಸಿರುತ್ತಾರೆ.

ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಗೆ ರಾಷ್ಟ್ರ ಪ್ರಶಸ್ತಿ : ಕ್ರೀಡೆ, ಕಲೆ, ಸಾಂಸ್ಕೃತಿಕ, ನಾವೀನ್ಯತೆ, ತಾರ್ಕಿಕ, ಸಮಾಜ ಸೇವೆ, ಸಂಗೀತ ಮತ್ತು ಕೇಂದ್ರ ಆಯ್ಕೆ ಸಮಿತಿಯ ನಿರ್ಧಾರದ ಪ್ರಕಾರ ಮಾನ್ಯತೆಗೆ ಯೋಗ್ಯವಾದ ಯಾವುದೇ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದಂತಹ ಮಕ್ಕಳಿಗೆ ರಾಷ್ಟ್ರ ಪ್ರಶಸ್ತಿಯನ್ನು ನೀಡುವ ಯೋಜನೆಯನ್ನು ಭಾರತ ಸರ್ಕಾರವು ಜಾರಿಗೆ ತಂದಿದೆ. ಈ ಪ್ರಶಸ್ತಿಗೆ ಅಸಾಧಾರಣ ಸಾಧನೆಯನ್ನು ಮಾಡಿರುವ 5-18 ವರ್ಷದೊಳಗಿನ ಮಕ್ಕಳನ್ನು ಆಯ್ಕೆ ಮಾಡಲಾಗುವುದು. ರಾಷ್ಟ್ರಮಟ್ಟದಲ್ಲಿ ಒಂದು ಮಗುವಿಗೆ ಚಿನ್ನದ ಪದಕ ಮತ್ತು ಪ್ರತಿ ರಾಜ್ಯದ/ಕೇಂದ್ರಾಡಳಿತ ಪ್ರದೇಶದ ಒಂದು ಮಗುವಿಗೆ ಬೆಳ್ಳಿ ಪದಕ ನೀಡಲಾಗುವುದು. ಚಿನ್ನದ ಪದಕ ಪಡೆದ ಮಗುವಿಗೆ ರೂ. 20,000/- ನಗದು, ರೂ 10,000/- ಮೌಲ್ಯದ ಪುಸ್ತಕ ವೋಚರ್ ಹಾಗೂ ಪ್ರಶಸ್ತಿ ಪತ್ರ ನೀಡಲಾಗುವುದು. ಬೆಳ್ಳಿ ಪದಕ ಪಡೆದ ಮಕ್ಕಳಿಗೆ ರೂ. 10,000/- ನಗದು, ರೂ 3,000/- ಮೌಲ್ಯದ ಪುಸ್ತಕ ವೋಚರ್ ಹಾಗೂ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು. 2018-19ನೇ ಸಾಲಿನಿಂದ ಕೇಂದ್ರ ಸರ್ಕಾರವು ಇಲಾಖಾ ಮಂತ್ರಾಲಯದ ಮುಖಾಂತರ ಆನ್‌ಲೈನ್ ಅರ್ಜಿಯನ್ನು ಸ್ವೀಕರಿಸುವ ಪ್ರಕ್ರಿಯೆ ಪ್ರಾರಂಭಿಸಿದೆ.

**ಮಕ್ಕಳ ದಿನಾಚರಣೆ ಕಾರ್ಯಕ್ರಮ: ಲೆಕ್ಕ ಶೀರ್ಷಿಕೆ:** 2235-02-102-0-99-100. ಇದು ರಾಜ್ಯ ವಲಯದ ಕಾರ್ಯಕ್ರಮವಾಗಿರುತ್ತದೆ. ಅಂತರ ರಾಷ್ಟ್ರೀಯ ಮಕ್ಕಳ ವರ್ಷದ ಅಂಗವಾಗಿ ಭಾರತ ಸರ್ಕಾರವು 1979 ರಲ್ಲಿ ಜಾರಿಗೆ ತಂದ ರಾಷ್ಟ್ರ ಪ್ರಶಸ್ತಿಗೆ ಅನುಗುಣವಾಗಿ ರಾಜ್ಯ ಸರ್ಕಾರವು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ನಿರತವಾಗಿರುವ ಕನಿಷ್ಠ 5 ವರ್ಷಗಳ ಕಾಲ ನಿರಂತರವಾಗಿ ಸೇವೆ ಸಲ್ಲಿಸಿದ 4 ಸಂಸ್ಥೆಗಳನ್ನು ಹಾಗೂ 4 ವ್ಯಕ್ತಿಗಳನ್ನು ಸನ್ಮಾನಿಸಲು ರಾಜ್ಯ ಪ್ರಶಸ್ತಿಯನ್ನು ಜಾರಿಗೆ ತಂದಿರುತ್ತದೆ. ಈ ಪ್ರಶಸ್ತಿಯನ್ನು ಪ್ರತಿ ವರ್ಷ ನವಂಬರ್-14 ರಂದು ಆಚರಿಸಲಾಗುವ ಮಕ್ಕಳ ದಿನಾಚರಣೆಯ ದಿನದಂದು ನೀಡಲಾಗುವುದು. ಪ್ರಸಕ್ತ ಸಾಲಿನಲ್ಲಿ 4 ಸಂಸ್ಥೆಗಳಿಗೆ ತಲಾ ರೂ.1.00 ಲಕ್ಷ ನಗದು ಮತ್ತು ಪ್ರಶಸ್ತಿ ಪತ್ರ ಹಾಗೂ 4 ವ್ಯಕ್ತಿಗಳಿಗೆ ತಲಾ ರೂ.25,000/- ನಗದು ಮತ್ತು ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗಿದೆ.

**ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ ನಿವಾರಣೆ– 2006–07** : ಲೆಕ್ಕ ಶೀರ್ಷಿಕೆ: 2235–02–102–0–99–100. ಇದು ರಾಜ್ಯ ವಲಯದ ಕಾರ್ಯಕ್ರಮವಾಗಿರುತ್ತದೆ. ಮಹಿಳೆಯರ ಮತ್ತು ಮಕ್ಕಳ ಸಾಗಣೆಯು ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ನಡೆಯುತ್ತಿದ್ದು ಇದು ಆತಂಕಕಾರಿಯಾದ ಬೆಳವಣಿಗೆಯಾಗಿರುತ್ತದೆ. ಈ ಪಿಡುಗನ್ನು ಸ್ಥಳೀಯ ಮಟ್ಟದಲ್ಲಿ ತಡೆಯುವುದು ಅನಿವಾರ್ಯವಾಗಿರುತ್ತದೆ. ಮಾನವ ಸಾಗಾಣಿಕೆಯನ್ನು ತಡೆಗಟ್ಟಲು ಮತ್ತು ಸಾಗಾಣಿಕೆಗೆ ಒಳಪಟ್ಟ ಮಹಿಳೆಯರ ಮತ್ತು ಮಕ್ಕಳ ಪುನರ್ವಸತಿ ಮಾಡುವುದು ನಾಗರೀಕ ಸಮಾಜದ ಪ್ರತಿಯೊಬ್ಬರ ಕರ್ತವ್ಯವಾಗಿರುತ್ತದೆ. ಈ ವ್ಯವಸ್ಥಿತ ಪಿಡುಗನ್ನು ನಿಯಂತ್ರಿಸಲು ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಮಟ್ಟದಲ್ಲಿ ಜಾಗೃತಿಯನ್ನು ಮೂಡಿಸುವುದು ಅಗತ್ಯವೆಂದು ಇಲಾಖೆಯು ಭಾವಿಸಿ ಮಹಿಳೆಯರ ಮತ್ತು ಮಕ್ಕಳ ಸಾಗಣೆ ನಿವಾರಣೆ ಯೋಜನೆಯನ್ನು 2006–07ರಲ್ಲಿ ಜಾರಿಗೆ ತರಲಾಗಿದೆ.

2019–20ನೇ ಸಾಲಿನಲ್ಲಿ ರೂ.30.00 ಲಕ್ಷ ಅನುದಾನವನ್ನು ಈ ಯೋಜನೆಗೆ ಒದಗಿಸಿದ್ದು, ಸದರಿ ಅನುದಾನದಲ್ಲಿ ಗ್ರಾಮ ಪಂಚಾಯತ್ ಮಟ್ಟದ ಸುಮಾರು 90 ಸಾವಿರ ಕಾವಲು ಸಮಿತಿ ಸದಸ್ಯರುಗಳಿಗೆ ಉಪಗ್ರಹ ಆಧಾರಿತ ತರಬೇತಿ ನೀಡಲಾಗಿದೆ. ರಾಜ್ಯದ 4 ಕಂದಾಯ ವಿಭಾಗಗಳ ವ್ಯಾಪ್ತಿಯಲ್ಲೊಂದು ಕಾರ್ಯಕ್ರಮದಲ್ಲಿ 3 ಅಥವಾ 4 ಜಿಲ್ಲೆಗಳನ್ನೊಳಗೊಂಡಂತೆ 8 ಜಿಲ್ಲೆಗಳಲ್ಲಿ 3200 ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನೀಡಲಾಗಿದೆ. ಯೋಜನೆ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಮಾಹಿತಿ ಕೈಪಿಡಿ, ಯೋಜನೆಯ ಸ್ಟಿಕ್ಕರ್‌ಗಳು, ದೂರದರ್ಶನ ಮತ್ತು ಆಕಾಶವಾಣಿಯಲ್ಲಿ ಬಿತ್ತರಿಸಲಾಗುತ್ತಿದೆ.

ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವಿಕೆ, ಬಾಲ್ಯ ವಿವಾಹ ನಿಷೇಧ ಹಾಗೂ ಸಮಗ್ರ ಮಕ್ಕಳ ರಕ್ಷಣೆಗಾಗಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ರಚಿಸಲಾಗಿರುವ ಮಕ್ಕಳ ರಕ್ಷಣಾ ಸಮಿತಿಯನ್ನು ವಿಲೀನಗೊಳಿಸಿ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿಯನ್ನು ಸರ್ಕಾರದ ಆದೇಶ ಸಂಖ್ಯೆ:ಮಮಇ:48:ಮಮಅ:2018, ದಿನಾಂಕ:06.08.2019ರಲ್ಲಿ ರಚಿಸಿ ಆದೇಶಿಸಲಾಗಿದೆ.

**ಉಜ್ವಲ** : ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯವು ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆ ತಡೆಗಟ್ಟಲು ಹಾಗೂ ಸಾಗಾಣಿಕೆಗೆ ಹಾಗೂ ವಾಣಿಜ್ಯ ಲೈಂಗಿಕ ದುರುಪಯೋಗಕ್ಕೆ ಒಳಪಟ್ಟವರನ್ನು ರಕ್ಷಿಸಲು, ಇವರಿಗೆ ಪುನರ್‌ವಸತಿ ಕಲ್ಪಿಸಲು ಮತ್ತು ಕುಟುಂಬದವರೊಂದಿಗೆ ಪುನರ್ ವಿಲೀನಗೊಳಿಸಲು ಉಜ್ವಲ ಎಂಬ ಸಮಗ್ರ ಯೋಜನೆಯನ್ನು ರೂಪಿಸಿರುತ್ತದೆ.

**ಯೋಜನೆಯ ಉದ್ದೇಶಗಳು :**

- ✓ ಸಮಾಜವನ್ನು ಸಜ್ಜುಗೊಳಿಸಿ, ಸ್ಥಳೀಯ ಸಮುದಾಯವನ್ನು ತೊಡಗಿಸಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಂಡು, ಸಾರ್ವಜನಿಕ ಸಭೆಗಳನ್ನು ನಡೆಸಿ, ಕಾರ್ಯಗಾರ/ವಿಚಾರ ಗೋಷ್ಠಿಗಳ ಮೂಲಕ ಹಾಗೂ ನವೀನ ಚಟುವಟಿಕೆಗಳ ಮೂಲಕ ಮಹಿಳೆಯರು ಮತ್ತು ಮಕ್ಕಳು ವಾಣಿಜ್ಯ ಲೈಂಗಿಕ ದುರುಪಯೋಗಕ್ಕಾಗಿ ಸಾಗಾಣಿಕೆಯಾಗುವುದನ್ನು ತಡೆಯಲು ಕ್ರಮಕೈಗೊಳ್ಳುವುದು.
- ✓ ಸಾಗಾಣಿಕೆಗೆ ಒಳಗಾದವರನ್ನು ಶೋಷಣೆ ಸ್ಥಳದಿಂದ ರಕ್ಷಿಸಿ ಸುರಕ್ಷಿತ ಸ್ಥಳದಲ್ಲಿ ಇಡಲು ಸಹಾಯ ಮಾಡುವುದು.
- ✓ ಸಾಗಾಣಿಕೆಗೆ ಒಳಗಾದವರಿಗೆ ಮೂಲಭೂತ ಸೌಲಭ್ಯ, ಆಶ್ರಯ, ಆಹಾರ, ವಸ್ತ್ರ, ಸಮಾಲೋಚನೆ ಒಳಗೊಂಡಂತೆ ವೈದ್ಯಕೀಯ ಸೌಲಭ್ಯ, ಕಾನೂನಿನ ನೆರವು ಮತ್ತು ಮಾರ್ಗದರ್ಶನ ಹಾಗೂ ವೃತ್ತಿ ತರಬೇತಿ ಸೇರಿದಂತೆ ತಕ್ಷಣ ಮತ್ತು ದೀರ್ಘಕಾಲಿಕ ಪುನರ್ವಸತಿ ಸೇವೆಯನ್ನು ಒದಗಿಸುವುದು.
- ✓ ಸಾಗಾಣಿಕೆಗೆ ಒಳಗಾದವರನ್ನು ಕುಟುಂಬದೊಂದಿಗೆ ಮತ್ತು ಸಮಾಜದಲ್ಲಿ ವಿಲೀನಗೊಳಿಸಲು ಸಹಾಯ ಮಾಡುವುದು.
- ✓ ಗಡಿಪ್ರದೇಶವನ್ನು ದಾಟಿ ಬಂದಂತಹ ಸಾಗಾಣಿಕೆಗೆ ಒಳಗಾದವರನ್ನು ತನ್ನ ಮೂಲ ರಾಷ್ಟ್ರಕ್ಕೆ ಕಳುಹಿಸಿಕೊಡಲು ಸಹಾಯ ಮಾಡುವುದು.

**ಟಾರ್ಗೆಟ್ ಗುಂಪು:**

- ✓ ವಾಣಿಜ್ಯ ಲೈಂಗಿಕ ದುರುಪಯೋಗಕ್ಕಾಗಿ ತುತ್ತಾಗಬಹುದಾದ ಮಹಿಳೆಯರು ಮತ್ತು ಮಕ್ಕಳು
- ✓ ವಾಣಿಜ್ಯ ಲೈಂಗಿಕ ದುರುಪಯೋಗಕ್ಕೆ ಒಳಪಟ್ಟಿರುವ ಮಹಿಳೆಯರು ಮತ್ತು ಮಕ್ಕಳು ಅನುಷ್ಠಾನಗೊಳಿಸುವ ಏಜೆನ್ಸಿ: ರಾಜ್ಯ ಸರ್ಕಾರದ ಸಮಾಜ ಕಲ್ಯಾಣ ಇಲಾಖೆ/ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಹಿಳಾ ಅಭಿವೃದ್ಧಿ ನಿಗಮ, ಸ್ಥಳೀಯ ನಗರ ಸಂಸ್ಥೆಗಳು, ಪ್ರಖ್ಯಾತ ಸಾರ್ವಜನಿಕ ಅಥವಾ ಖಾಸಗಿ ಟ್ರಸ್ಟ್ ಅಥವಾ ಸ್ವಯಂ ಸೇವಾ ಸಂಸ್ಥೆಗಳು, ಸಾಗಾಣಿಕೆ ಕ್ಷೇತ್ರದಲ್ಲಿ ಹಾಗೂ ಸಾಮಾಜಿಕ ರಕ್ಷಣೆ, ಪಾಲನೆ ಮತ್ತು ಪೋಷಣೆಯ ಅಗತ್ಯವಿರುವ ಮಹಿಳೆಯರ ಮತ್ತು ಮಕ್ಕಳು ಹಾಗೂ ಕಾನೂನಿನೊಡನೆ ಸಂಘರ್ಷಣೆಗೊಳಪಟ್ಟ ಮಕ್ಕಳನ್ನು ನಿರ್ವಹಿಸುವ ಅನುಭವ ಹೊಂದಿರಬೇಕು.

ಅರ್ಹತಾ ನಿಬಂಧನೆಗಳು :-

- ✓ ಸಂಸ್ಥೆಯು ಕಾನೂನು ರೀತ್ಯಾ ನೋಂದಣಿಯಾಗಿರಬೇಕು. ಮ್ಯಾನೇಜಿಂಗ್ ಬಾಡಿ ಸಂವಿಧಾನಾತ್ಮಕವಾಗಿ ರಚನೆಯಾಗಿದ್ದು, ಅದರ ಅಧಿಕಾರ, ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ನಿರ್ದಿಷ್ಟವಾಗಿ ವ್ಯಾಖ್ಯಾನಿಸಿರಬೇಕು.
- ✓ ಸಂಸ್ಥೆಯು ಯಾವುದೇ ವ್ಯಕ್ತಿಯ ಸ್ವಂತ ಲಾಭಕ್ಕಾಗಿ ಅಥವಾ ಸಂಸ್ಥೆಯ ಸ್ವಂತ ಲಾಭಕ್ಕಾಗಿ ಕಾರ್ಯನಿರ್ವಹಿಸಬಾರದು.
- ✓ ಸಾಮಾನ್ಯವಾಗಿ ಸಂಸ್ಥೆಯು ನೋಂದಣಿಯಾದ ನಂತರ 3 ವರ್ಷಗಳ ಅನುಭವ ಹೊಂದಿರಬೇಕು.
- ✓ ಆರ್ಥಿಕ ಮಟ್ಟ ಸುಭದ್ರವಾಗಿರಬೇಕು.
- ✓ ಸಂಸ್ಥೆಯು ಯೋಜನೆಯನ್ನು ಅನುಷ್ಠಾನಗೊಳಿಸಲು ಬೇಕಿರುವ ಸೌಲಭ್ಯ, ಸಂಪನ್ಮೂಲ, ಅನುಭವ ಹಾಗೂ ಸಿಬ್ಬಂದಿಯನ್ನು ಹೊಂದಿರಬೇಕು.
- ✓ ಈ ಯೋಜನೆಯನ್ನು ಅನುಷ್ಠಾನಗೊಳಿಸುವ ಸ್ವಯಂಸೇವಾ ಸಂಸ್ಥೆಗೆ ಶೇಕಡ 60ರಷ್ಟು ಅನುದಾನವನ್ನು ಭಾರತ ಸರ್ಕಾರವು ಶೇಕಡ 30 ರಷ್ಟು ಅನುದಾನವನ್ನು ರಾಜ್ಯ ಸರ್ಕಾರವು ಒದಗಿಸುವುದು ಹಾಗೂ ಉಳಿದ ಶೇಕಡ 10ರಷ್ಟು ಅನುದಾನವನ್ನು ಸ್ವಯಂ ಸೇವಾ ಸಂಸ್ಥೆಗಳು ಭರಿಸುವುದು. ಪ್ರಸ್ತುತ ರಾಜ್ಯದಲ್ಲಿ 20 ಸರ್ಕಾರೇತರ ಸಂಸ್ಥೆಗಳು ಈ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿವೆ.

**ಬೇಟಿ ಬಚಾವೊ ಬೇಟಿ ಪಡಾವೊ ಕಾರ್ಯಕ್ರಮ** : ಸನ್ಮಾನ್ಯ ಪ್ರಧಾನ ಮಂತ್ರಿಗಳು **"ಬೇಟಿ ಬಚಾವೊ ಬೇಟಿ ಪಡಾವೊ ಕಾರ್ಯಕ್ರಮ"** (**Beti Bachao, Beti Padhao**) ಎಂಬ ಹೊಸ ಯೋಜನೆಯನ್ನು 22 ಜನವರಿ 2015ರಂದು ರಾಷ್ಟ್ರೀಯ ಮಟ್ಟದಲ್ಲಿ ಜಾರಿಗೆ ತಂದಿರುತ್ತಾರೆ. ಕುಸಿಯುತ್ತಿರುವ ಮಕ್ಕಳ ಲಿಂಗ ಅನುಪಾತವನ್ನು (Declining CSR) ಉತ್ತಮ ಪಡಿಸುವುದು ಹಾಗೂ ಮಹಿಳೆಯರನ್ನು ಸಬಲೀಕರಣಗೊಳಿಸುವುದು, **"ಬೇಟಿ ಬಚಾವೊ ಬೇಟಿ ಪಡಾವೊ** ಯೋಜನೆಯ ಮುಖ್ಯ ಉದೇಶವಾಗಿರುತ್ತದೆ. ಈ ಯೋಜನೆಯನ್ನು ಅನುಷ್ಠಾನಗೊಳಿಸಲು, ಮಕ್ಕಳ ಲಿಂಗಾನುಪಾತ ಇಳಿಮುಖವಾಗುತ್ತಿರುವ ಭಾರತದ 100 ಜಿಲ್ಲೆಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ಇದರಲ್ಲಿ ಕರ್ನಾಟಕ ರಾಜ್ಯದ ವಿಜಯಪುರ ಜಿಲ್ಲೆಯು ಒಂದಾಗಿದೆ. ಈ ಯೋಜನೆಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಹಾಗೂ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯಗಳ ಸಹಕಾರದಿಂದ ಅನುಷ್ಠಾನಗೊಳಿಸಲಾಗುತ್ತದೆ.

**ಉದ್ದೇಶ :**

- ➢ ಲಿಂಗ ಪಕ್ಷಪಾತ ಮತ್ತು ಲಿಂಗ ಆಯ್ಕೆ ಮಾಡುವುದನ್ನು ತಡೆಗಟ್ಟುವುದು (Prevent Gender Sex Selective Elimination)
- ➢ ಹೆಣ್ಣು ಮಕ್ಕಳ ಉಳಿವು ಮತ್ತು ಅವರ ರಕ್ಷಣೆಯನ್ನು ಖಾತ್ರಿಗೊಳಿಸುವುದು(Ensure Survival and Protection of The Girl Child )
- ➢ ಹೆಣ್ಣು ಮಕ್ಕಳಿಗೆ ಶಿಕ್ಷಣವನ್ನು ಖಾತ್ರಿಗೊಳಿಸುವುದು(Ensure Education of Girl Child)

2018–19 ನೇ ಸಾಲಿನಲ್ಲಿ ಕರ್ನಾಟಕ ರಾಜ್ಯದ 5 ಜಿಲ್ಲೆಗಳಾದ ವಿಜಯಪುರ, ಬಾಗಲಕೋಟೆ, ಹಾವೇರಿ, ಗದಗ, ದಕ್ಷಿಣ ಕನ್ನಡ ಜಿಲ್ಲೆ ಜಿಲ್ಲೆಗಳನ್ನು ಮಲ್ಟಿಸೆಕ್ಟೋರಲ್ ಇಂಟರ್‌ವೆನ್ಶನ್ (Multisectotal Intervention and Media advocacy outreach) ಕಾರ್ಯಕ್ರಮಕ್ಕಾಗಿ ಹಾಗೂ ಉಳಿದ 5 ಜಿಲ್ಲೆಗಳನ್ನು ಮಾಧ್ಯಮ ಮೂಲಕ ಅರಿವು ಮೂಡಿಸುವ ಕಾರ್ಯಕ್ರಮಗಳಿಗಾಗಿ (Only Media advocacy outreach) ಕೇಂದ್ರ ಸರ್ಕಾರದಿಂದ ಆಯ್ಕೆ ಮಾಡಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ.

ಈ ಕಾರ್ಯಕ್ರಮದ ಅನುಷ್ಠಾನವನ್ನು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ.

**ಬಾಲ್ಯ ವಿವಾಹ ನಿಷೇಧ ಕಾಯ್ದೆ– 2006 (ಕೇಂದ್ರ ಕಾಯ್ದೆ – 2006) ಲೆಕ್ಕ ಶೀರ್ಷಿಕೆ:** 2235–02–001–0–01–051 **ಕೇಂದ್ರದ ಪಾಲು:ರಾಜ್ಯದ ಪಾಲು – 0:100**

ಬಾಲ್ಯವಿವಾಹ ನಿಷೇಧ ಕಾಯ್ದೆ–2006ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಸಂಬಂಧ ಕರ್ನಾಟಕ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:11154/2006 ರಲ್ಲಿ ನೀಡಿದ ನಿರ್ದೇಶನದಂತೆ ಕ್ರಿಯಾ ಯೋಜನೆಯನ್ನು ತಯಾರಿಸಲು ಸರ್ಕಾರವು ಭಾರತದ ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳಾದ ಜಸ್ಟೀಸ್ ಶಿವರಾಜ್.ವಿ.ಪಾಟೀಲ್ ಇವರ ಅಧ್ಯಕ್ಷತೆಯಲ್ಲಿ ಕೋರ್ ಕಮಿಟಿಯನ್ನು ರಚಿಸಿದ್ದು, ಸದರಿ ಕೋರ್ ಕಮಿಟಿಯು ದಿನಾಂಕ:30–06–2011 ರಂದು ಅಂತಿಮ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತದೆ. ವರದಿಯಲ್ಲಿ ಮಾಡಲಾಗಿರುವ ಶಿಫಾರಸ್ಸುಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸರ್ಕಾರದ ಆದೇಶ ಸಂಖ್ಯೆ:ಮಮಇ 501 ಎಸ್‌ಜೆಡಿ 2011 ದಿನಾಂಕ:16–11–2011 ರಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ನಿರ್ದೇಶನಾಲಯಲ್ಲಿ 1 ಉಪ ನಿರ್ದೇಶಕರು, 1 ಸಹಾಯಕ ನಿರ್ದೇಶಕರು, 02 ಪ್ರಥಮ ದರ್ಜೆ ಸಹಾಯಕರು, 02 ಗಣಕ ಯಂತ್ರ ಸಹಾಯಕರು ಮತ್ತು 1 ಸೇವಕರನ್ನೊಳಗೊಂಡಂತೆ ಉಸ್ತುವಾರಿ ಕೋಶವನ್ನು ಸ್ಥಾಪಿಸಲಾಗಿದೆ.

**ಸದರಿ ವರದಿಯಲ್ಲಿನ ಶಿಫಾರಸ್ಸುಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಬಾಲ್ಯ ವಿವಾಹ ನಿಷೇಧ ಉಸ್ತುವಾರಿ ಕೋಶವು 2019–20ನೇ ಸಾಲಿನಲ್ಲಿ ಈ ಕೆಳಗಿನ ಕ್ರಮಗಳನ್ನು ಕೈಗೊಂಡಿದೆ.**

1. ಬಾಲ್ಯ ವಿವಾಹ ನಿಷೇಧ ಕಾರ್ಯಕ್ರಮಗಳಿಗಾಗಿ 2019–20ನೇ ಸಾಲಿನಲ್ಲಿ ರೂ.150 ಲಕ್ಷಗಳ ಅನುದಾನ ನಿಗಧಿಪಡಿಸಲಾಗಿದೆ. 2020ನೇ ಜನವರಿ ಅಂತ್ಯಕ್ಕೆ ರೂ.112.50 ಲಕ್ಷ ಬಿಡುಗಡೆಯಾಗಿದ್ದು, ಇದರಲ್ಲಿ ರೂ.111.76 ಲಕ್ಷಗಳನ್ನು ಜಿಲ್ಲೆಗಳಿಗೆ ಮರು ಹಂಚಿಕೆ ಮಾಡಲಾಗಿದೆ. ರೂ.12.55 ಲಕ್ಷ ವೆಚ್ಚ ಮಾಡಲಾಗಿದೆ.
2. 01–04–2019 ರಿಂದ 31.01.2020 ರವರೆಗೆ 1450 ಬಾಲ್ಯ ವಿವಾಹಗಳನ್ನು ತಡೆಗಟ್ಟಲಾಗಿದೆ.
3. ಆಕಾಶವಾಣಿಯಲ್ಲಿ **"ಕನಸು ತೋರಣ ಕಟ್ಟಲಿ"** ಎಂಬ ಕಾರ್ಯಕ್ರಮ ಪ್ರಸಾರ ಮಾಡಲಾಗುತ್ತದೆ. ರೇಡಿಯೋ ಜಿಂಗಲ್‌ಗಳು ಮತ್ತು ಕಿರು ನಾಟಕಗಳ ಪ್ರಸಾರಕ್ಕೆ ಕ್ರಮ ವಹಿಸಲಾಗಿದೆ.
4. ಬಾಲ್ಯವಿವಾಹ ನಿಷೇಧ ಕುರಿತು ವಿಭಾಗೀಯ ಮಟ್ಟದಲ್ಲಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲು 4 ಜಿಲ್ಲೆಗಳಿಗೆ ರೂ.2.00 ಲಕ್ಷ ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, ವಿಭಾಗೀಯ ಮಟ್ಟದಲ್ಲಿ ಕಾರ್ಯಾಗಾರಗಳನ್ನು ನಡೆಸಲಾಗಿದೆ.
5. ಬಾಲ್ಯವಿವಾಹ ನಿಷೇಧ ಕುರಿತಾಗಿ 4,200 ಸ್ಥಳಗಳಲ್ಲಿ ಗೋಡೆ ಬರಹ ಬರೆಯಿಸಲು 21 ಜಿಲ್ಲೆಗಳಿಗೆ ರೂ. 42.00 ಲಕ್ಷ ಅನುದಾನ ಬಿಡುಗಡೆ ಮಾಡಲಾಗಿದೆ.
6. ಬಾಲ್ಯವಿವಾಹ ನಿಷೇಧ ಕುರಿತು ಗ್ರಾಮ ಪಂಚಾಯತಿ ಮಟ್ಟದ ಮಹಿಳೆಯರ ಮತ್ತು ಮಕ್ಕಳ ರಕ್ಷಣೆಯ ಕಾವಲು ಸಮಿತಿ ಸದಸ್ಯರಿಗೆ, 90,345 ಜನರಿಗೆ ಉಪಗ್ರಹ ಆಧಾರಿತ ತರಬೇತಿ ಕಾರ್ಯಕ್ರಮಕ್ಕೆ 90,345 ಜನ ರೂ.67.76 ಲಕ್ಷ ಅನುದಾನ 30 ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗಿದ್ದು, ದಿನಾಂಕ 23.01.2020,

24.01.2020, 31.01.2020 ಮತ್ತು 01.02.2020 ರಂದು ಉಪಗ್ರಹ ಆಧಾರಿತ ತರಬೇತಿ ಕಾರ್ಯಕ್ರಮ ನಡೆಸಲಾಗಿದೆ.

7. ದೂರದರ್ಶನದಲ್ಲಿ ಸಂವಾದ ಕಾರ್ಯಕ್ರಮ ನಡೆಸಲಾಗಿದೆ.. ಸ್ಪಾಟ್‌ಗಳ ಪ್ರಸಾರ, ಪ್ರಾಯೋಜಿತ ಕಾರ್ಯಕ್ರಮ ಮತ್ತು ಫೋನ್‌ಇನ್ ಕಾರ್ಯಕ್ರಮ ನಡೆಸಲು ಕ್ರಮ ವಹಿಸಲಾಗಿದೆ.

**ಸ್ವೀಕಾರ ಕೇಂದ್ರಗಳು:–**

ಅನೈತಿಕ ವ್ಯವಹಾರಗಳ (ತಡೆಗಟ್ಟುವ) ಅಧಿನಿಯಮ 1956 ನಿಯಮ 1989ರ ಅಡಿ ರಾಜ್ಯದಲ್ಲಿ ಮೂರು ಸ್ವೀಕಾರ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಈ ಸಂಸ್ಥೆಯಲ್ಲಿ 18 ವರ್ಷದ ಮೇಲ್ಪಟ್ಟ ಮಹಿಳೆಯರಿಗೆ ತಾತ್ಕಾಲಿಕ ಪುನರ್ವಸತಿ ಕೇಂದ್ರವಾಗಿರುತ್ತದೆ. ಆಶ್ರಯ ಮತ್ತು ಪೋಷಣೆ ಅಗತ್ಯವಿರುವ ಮಹಿಳೆಯರು ಸ್ವ–ಇಚ್ಚೆಯಿಂದ, ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ, ಯಾವುದೇ ವ್ಯಕ್ತಿಗಳ ಮುಖಾಂತರ ಹಾಗೂ ಅನೈತಿಕ ವ್ಯವಹಾರಗಳ (ತಡೆಗಟ್ಟುವ) ಅಧಿನಿಯಮ 1956ರ ಅಡಿಯಲ್ಲಿ ನ್ಯಾಯಾಲಯದಿಂದ ಪ್ರಕರಣವನ್ನು ದಾಖಲಿಸಿ ಕಳುಹಿಸಲ್ಪಟ್ಟ ಮಹಿಳೆಯರನ್ನು ದಾಖಲಿಸಿಕೊಳ್ಳಲಾಗುವುದು. ಸಂಸ್ಥೆಯಲ್ಲಿ ನಿವಾಸಿಯರಿಗೆ ಪಾಲನೆ, ಪೋಷಣೆ, ಊಟ, ವಸತಿ, ಬಟ್ಟೆ, ವೈದ್ಯಕೀಯ ಸೌಲಭ್ಯ, ರಕ್ಷಣೆ ಮತ್ತು ತರಬೇತಿಯನ್ನು ನೀಡಲಾಗುತ್ತಿದೆ.

ಸ್ವಯಂ ಸೇವಾ ಸಂಸ್ಥೆಗಳ ಸಹಕಾರದೊಂದಿಗೆ ನಿವಾಸಿಯರ ಪುನರ್ವಸತಿ ಚಟುವಟಿಕೆಗಳನ್ನು ಹಮ್ಮಿಕೊಂಡು ಸಮಾಜದ ಮುಖ್ಯ ವಾಹಿನಿಗೆ ತರಲಾಗುವುದು. ದೀರ್ಘ ಕಾಲ ಪುನರ್ವಸತಿ ಅಗತ್ಯವಿರುವ ಮಹಿಳೆಯರನ್ನು ರಾಜ್ಯ ಮಹಿಳಾ ನಿಲಯಗಳಿಗೆ ವರ್ಗಾಯಿಸಲಾಗುತ್ತದೆ. ರಾಜ್ಯದಲ್ಲಿ 3 ಸ್ವೀಕಾರ ಕೇಂದ್ರಗಳು (ಬೆಂಗಳೂರು(ನ), ಕಾರವಾರ, ತುಮಕೂರು) ಕಾರ್ಯನಿರ್ವಹಿಸುತ್ತಿವೆ.

**ರಾಜ್ಯ ಮಹಿಳಾ ನಿಲಯ:–**

ದೀರ್ಘಾವಧಿ ಪುನರ್ವಸತಿ ಸಂಸ್ಥೆಗಳಾಗಿ ರಾಜ್ಯದಲ್ಲಿ 08(ಬೆಂಗಳೂರು(ನ), ಬಳ್ಳಾರಿ, ದಾವಣಗೆರೆ, ಹುಬ್ಬಳ್ಳಿ, ಮೈಸೂರು, ಶಿವಮೊಗ್ಗ, ಉಡುಪಿ ಮತ್ತು ಕಲಬುರಗಿ) ರಾಜ್ಯ ಮಹಿಳಾ ನಿಲಯಗಳು ಕಾರ್ಯ ನಿರ್ವಹಿಸುತ್ತಿದೆ. ಪಾಲನೆ ಮತ್ತು ರಕ್ಷಣೆ ಅಗತ್ಯವಿರುವ 18 ವರ್ಷ ಮೇಲ್ಪಟ್ಟ ಮಹಿಳೆಯರನ್ನು ಹಾಗೂ ಅನೈತಿಕ ವ್ಯವಹಾರಗಳ (ತಡೆಗಟ್ಟುವ) ಅಧಿನಿಯಮ 1956ರ ಅಡಿಯಲ್ಲಿ ನ್ಯಾಯಾಲಯದಿಂದ ದಾಖಲಾದ ಪ್ರಕರಣಗಳು ಹಾಗೂ ಬಾಲಕಿಯರ ಬಾಲಮಂದಿರದಲ್ಲಿ 18 ವರ್ಷ ತುಂಬಿದ ನಿವಾಸಿಯರನ್ನು ದೀರ್ಘಾವಧಿ ಪುನರ್ವಸತಿಗಾಗಿ ರಾಜ್ಯ ಮಹಿಳಾ ನಿಲಯಕ್ಕೆ ದಾಖಲು ಮಾಡಿಕೊಳ್ಳಲಾಗುವುದು. ಸಂಸ್ಥೆಯ ನಿವಾಸಿಯರಿಗೆ ರಕ್ಷಣೆ ಪೋಷಣೆ, ಊಟ, ವಸತಿ, ವೈದ್ಯಕೀಯ ಸೌಲಭ್ಯ, ಶಿಕ್ಷಣ ಹಾಗೂ ತರಬೇತಿಯನ್ನು ನೀಡಲಾಗುತ್ತಿದೆ.

**ಕಟ್ಟಡಗಳ ನಿರ್ಮಾಣ (ಸುಧಾರಣಾ ಸಂಸ್ಥೆಗಳು):**

ಸದರಿ ಕಾರ್ಯಕ್ರಮದಡಿ ರಾಜ್ಯ ಮಹಿಳಾ ನಿಲಯ, ಸ್ವೀಕಾರ ಕೇಂದ್ರ ಹಾಗೂ ಜಿಲ್ಲಾ ಉಪ ನಿರ್ದೇಶಕರ ಕಚೇರಿಗಳ ಕಟ್ಟಡದ ನಿರ್ಮಾಣವನ್ನು ಕೈಗೊಳ್ಳಲಾಗುತ್ತಿದೆ.

**ಕಟ್ಟಡಗಳ ದುರಸ್ತಿ ಹಾಗೂ ನಿರ್ವಹಣೆ (ಸುಧಾರಣಾ ಸಂಸ್ಥೆಗಳು):**

ಸದರಿ ಕಾರ್ಯಕ್ರಮದಡಿ ರಾಜ್ಯ ಮಹಿಳಾ ನಿಲಯ ಹಾಗೂ ಸ್ವೀಕಾರ ಕೇಂದ್ರ ಹಾಗೂ ಉಪ ನಿರ್ದೇಶಕರ ಕಛೇರಿ ಕಟ್ಟಡ ದುರಸ್ತಿ ಹಾಗೂ ನಿರ್ವಹಣೆಯನ್ನು ಕೈಗೊಳ್ಳಲಾಗುತ್ತಿದೆ.

**ಪಾಲನೆ ಮತ್ತು ಪೋಷಣೆ ಅಗತ್ಯವಿರುವ ಮಕ್ಕಳಿಗೆ ಯೋಜನೆ (ನಿರ್ಗತಿಕ ಮಕ್ಕಳ ಕುಟೀರ):**

ಅನಾಥ ಮತ್ತು ನಿರ್ಗತಿಕ ಮಕ್ಕಳ ಪಾಲನೆ/ಪೋಷಣೆ ಮಾಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ. ಸದರಿ ಯೋಜನೆಯಡಿ ಕನಿಷ್ಠ 3 ವರ್ಷ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸಿರುವ ನೊಂದಾಯಿತ ಸ್ವಯಂ ಸೇವಾ ಸಂಸ್ಥೆಗಳಿಗೆ 25 ಮಕ್ಕಳ ಒಂದು ಘಟಕದಂತೆ ಪಾಲನೆ ಹಾಗೂ ಪೋಷಣೆಗೆ ನಿರ್ಗತಿಕ ಮಕ್ಕಳ ಕುಟೀರವನ್ನು ತೆರೆಯಲು ಅನುಮತಿಯೊಂದಿಗೆ ಧನ ಸಹಾಯವನ್ನು ನೀಡಲಾಗುವುದು. ಈ ಯೋಜನೆಯ ರೂಪ ರೇಷೆಗಳ ಪ್ರಕಾರ ಅನುಮೋದಿತ ವೆಚ್ಚದ ಶೇಕಡಾ 90 ರಷ್ಟನ್ನು

ರಾಜ್ಯ ಸರ್ಕಾರದಿಂದ ಅನುದಾನದ ರೂಪದಲ್ಲಿ ನೀಡಲಾಗುತ್ತಿದೆ. ಉಳಿದ ಶೇಕಡಾ 10 ರಷ್ಟನ್ನು ಸಂಸ್ಥೆಯು ಭರಿಸಬೇಕಾಗುವುದು. ಈ ಯೋಜನೆಯಡಿ ಪ್ರತಿ ಮಗುವಿನ ನಿರ್ವಹಣೆಗಾಗಿ ಮಾಸಿಕ ರೂ.1000/-ಗಳ ಅನುದಾನವನ್ನು ಕೊಡಲಾಗುತ್ತದೆ. ಕುಟೀರದ ಮಕ್ಕಳಿಗೆ ಊಟ, ವಸತಿ, ಬಟ್ಟೆ, ವೈದ್ಯಕೀಯ ಸೌಲಭ್ಯ, ಮನೋರಂಜನೆ, ಶಿಕ್ಷಣ ನೀಡಿ ಸಮಾಜದ ಮುಖ್ಯ ವಾಹಿನಿಗೆ ತರಲಾಗುವುದು. ರಾಜ್ಯದಲ್ಲಿ 141 ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ 264 ಕುಟೀರಗಳು ಕಾರ್ಯ ನಿರ್ವಹಿಸುತ್ತಿವೆ.

## 2. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ

### 1. ಉದ್ಯೋಗಿನಿ ಯೋಜನೆ :-

ಮಹಿಳೆಯರು ಆದಾಯಉತ್ಪನ್ನಕರ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಸ್ವಯಂ ಉದ್ಯೋಗಿಗಳಾಗಲು ಬ್ಯಾಂಕ್ ಮೂಲಕ ಸಾಲ ಮತ್ತು ನಿಗಮದ ಮೂಲಕ ಸಹಾಯಧನವನ್ನು ನೀಡಲಾಗುತ್ತದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಸಾಲದಘಟಕ ವೆಚ್ಚ ಕನಿಷ್ಟ ರೂ.1.00 ಲಕ್ಷದಿಂದಗರಿಷ್ಟ ರೂ.5.00 ಲಕ್ಷಗಳು, ಸಹಾಯಧನದ ಮೊತ್ತ 70 ರಷ್ಟು, ಗರಿಷ್ಟ ರೂ.3,50,000/-. ಕುಟುಂಬದ ವಾರ್ಷಿಕಆದಾಯದಗರಿಷ್ಟ ಮಿತಿ ರೂ.2.00 ಲಕ್ಷಗಳು.

ಸಾಮಾನ್ಯ ವರ್ಗ ಮತ್ತು ವಿಶೇಷ ವರ್ಗದ ಫಲಾನುಭವಿಗಳಿಗೆ ಸಾಲದಘಟಕ ವೆಚ್ಚ ರೂ.1.00ಲಕ್ಷ ರೂ ಗಳಿಂದ ರೂ. 3.00 ಲಕ್ಷಗಳು, ಸಹಾಯಧನದ ಮೊತ್ತ ಶೇ.30 ರಷ್ಟುಗರಿಷ್ಟ ರೂ.90,000/-. ಕುಟುಂಬದ ವಾರ್ಷಿಕಆದಾಯದಗರಿಷ್ಟ ಮಿತಿ ರೂ.1.50 ಲಕ್ಷಗಳು. ಎಲ್ಲಾ ವರ್ಗದ ಮಹಿಳೆಯರಿಗೆ ವಯೋಮಿತಿ 18 ರಿಂದ 55 ವರ್ಷಗಳು.

### 2. ಕಿರುಸಾಲ ಯೋಜನೆ:-

ಈ ಯೋಜನೆಯಡಿಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿಇಲಾಖೆಯಲ್ಲಿ ಸ್ತ್ರೀಶಕ್ತಿ ಯೋಜನೆಯಡಿರಚನೆಗೊಂಡ ಸ್ತ್ರೀ ಶಕ್ತಿ ಸ್ವ-ಸಹಾಯ ಸಂಘಗಳು ಆರ್ಥಿಕವಾಗಿ ಸಬಲರಾಗಲು ಪ್ರತಿ ಸ್ತ್ರೀ ಶಕ್ತಿ ಸ್ವ-ಸಹಾಯ ಸಂಘಕ್ಕೆ ನಿಗಮದ ವತಿಯಿಂದ ಬಡ್ಡಿರಹಿತ ಸಾಲ ಒದಗಿಸುವುದು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸ್ತ್ರೀ ಶಕ್ತಿ ಸಂಘಕ್ಕೆ ರೂ.1.00 ಲಕ್ಷದಿಂದರೂ. 5.00 ಲಕ್ಷಗಳವರೆಗೆ ಮತ್ತುಇತರೆ ವರ್ಗದ ಸ್ತ್ರೀ ಶಕ್ತಿ ಸ್ವ-ಸಹಾಯ ಸಂಘಗಳಿಗೆ ರೂ.1.00 ಲಕ್ಷದಿಂದರೂ. 2.00 ಲಕ್ಷಗಳವರೆಗೆ ಬಡ್ಡಿರಹಿತ ಸಾಲ ಒದಗಿಸಲಾಗುತ್ತದೆ.

### 3. ಲಿಂಗತ್ವಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ:-

ಲಿಂಗತ್ವಅಲ್ಪಸಂಖ್ಯಾತರನ್ನುಆರ್ಥಿಕವಾಗಿ ಸಬಲೀಕರಣಗೊಳಿಸಲು ಆದಾಯೋತ್ಪನ್ನಕರಚಟುವಟಿಕೆ ಕೈಗೊಳ್ಳುವ ಉದ್ದೇಶಕ್ಕಾಗಿ ರೂ.50,000/-(ರೂ.25,000/-ಸಾಲ, ರೂ.25,000/- ಪ್ರೋತ್ಸಾಹಧನ) ಗಳ ಆರ್ಥಿಕ ಸೌಲಭ್ಯವನ್ನುಉದ್ಯಮ ಶೀಲತಾ ಅಭಿವೃದ್ಧಿತರಬೇತಿಯೊಂದಿಗೆ ನೀಡಲಾಗುತ್ತದೆ.

### 4. ಚೇತನ ಯೋಜನೆ:-

ದಮನಿತ ಮಹಿಳೆಯರು ಆದಾಯೋತ್ಪನ್ನಚಟುವಟಿಕೆ ಕೈಗೊಳ್ಳಲು ಅನುವಾಗುವಂತೆ ನಿಗಮದಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದದಮನಿತ ಮಹಿಳೆಯರಿಗೆ ನೇರವಾಗಿತಲಾ ರೂ.1,00,000/- (ರೂ.50,000/- ಗಳ ನೇರ ಸಾಲ ಹಾಗೂ ರೂ.50,000/- ಗಳ ಪ್ರೋತ್ಸಾಹಧನ)ಗಳನ್ನು ಹಾಗೂ ಇತರೆ ವರ್ಗದದಮನಿತ ಮಹಿಳೆಯರಿಗೆ ತಲಾ ರೂ.50,000/- (ರೂ.25,000/- ಗಳ ನೇರ ಸಾಲ ಹಾಗೂ ರೂ.25,000/- ಗಳ ಪ್ರೋತ್ಸಾಹಧನ) ಗಳನ್ನು ಉದ್ಯಮಶೀಲತಾ ಅಭಿವೃದ್ಧಿ ತರಬೇತಿಯೊಂದಿಗೆ ನೀಡಲಾಗುತ್ತದೆ.

**5. ಮಾರುಕಟ್ಟೆ ನೆರವು ಯೋಜನೆ:–**

ಮಹಿಳಾ ಉದ್ಯಮಿಗಳು ಮತ್ತು ಮಹಿಳಾ ಸ್ವ–ಸಹಾಯ ಸಂಘಗಳು ತಯಾರಿಸಿದ ಉತ್ಪನ್ನಗಳ ಮಾರಾಟ ಮಾಡಲು ಹಾಗೂ ಮಹಿಳಾ ಉದ್ದಿಮೆದಾರರನ್ನುಉತ್ತೇಜಿಸುವ ಸಲುವಾಗಿ ಜಿಲ್ಲಾ ಮತ್ತುತಾಲ್ಲೂಕು ಮಟ್ಟದಲ್ಲಿ ವಸ್ತುಗಳ ಪ್ರದರ್ಶನ ಏರ್ಪಡಿಸಿ, ಉಚಿತ ಮಳಿಗೆಗಳನ್ನು ಹಾಗೂ ಮಾರುಕಟ್ಟೆಅವಕಾಶವನ್ನುಕಲ್ಪಿಸಲಾಗುತ್ತಿದೆ.

**6. ಸಮೃದ್ಧಿ ಯೋಜನೆ:–**

ಬೀದಿ ಬದಿಯಲ್ಲಿ ಸಣ್ಣ ವ್ಯಾಪಾರ ನಡೆಸುತ್ತಿರುವ ಬಡತನರೇಖೆಗಿಂತ ಕೆಳಗಿರುವ ಮಹಿಳೆಯರಿಗೆ ರೂ.10,000/–ಗಳ ಪ್ರೋತ್ಸಾಹಧನವನ್ನುಒದಗಿಸಲಾಗುತ್ತಿದೆ.

**7. ಧನಶ್ರೀ ಯೋಜನೆ:–**

18 ರಿಂದ 60 ವಯೋಮಾನದ ಹೆಚ್.ಐ.ವಿ ಸೋಂಕಿತ ಮಹಿಳೆಯರಿಗೆ ಸ್ವಯಂಉದ್ಯೋಗ ಕೈಗೊಳ್ಳಲು ರೂ.50,000/–(ರೂ.25,000/–ಸಾಲ, ರೂ.25,000/– ಪ್ರೋತ್ಸಾಹಧನ) ಗಳ ಆರ್ಥಿಕ ಸೌಲಭ್ಯವನ್ನು ಉದ್ಯಮಶೀಲತಾ ಅಭಿವೃದ್ಧಿತರಬೇತಿಯೊಂದಿಗೆಒದಗಿಸಲಾಗುತ್ತಿದೆ.

**8. ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆ :–**

ಆರ್ಥಿಕವಾಗಿ ಮಾಜಿ ದೇವದಾಸಿಯರನ್ನು ಸಬಲೀಕರಣಗೊಳಿಸಲು ಆದಾಯೋತ್ಪನ್ನಕರಚಟುವಟಿಕೆ ಕೈಗೊಳ್ಳುವ ಉದ್ದೇಶಕ್ಕಾಗಿ ನಿಗಮದಿಂದ ನೇರವಾಗಿರೂ. 1,00,000/–(ರೂ.50,000/–ಗಳ ಸಾಲ, ರೂ. 50,000ಗಳ ಪ್ರೋತ್ಸಾಹಧನ)ಗಳಆರ್ಥಿಕ ಸೌಲಭ್ಯವನ್ನುಇ.ಡಿ.ಪಿ ತರಬೇತಿಯೊಂದಿಗೆ ನೀಡಲಾಗುತ್ತಿದೆ ಹಾಗೂ ದೇವದಾಸಿ ಪದ್ಧತಿಯ ನಿರ್ಮೂಲನೆಗಾಗಿ ಅರಿವು ಮೂಡಿಸುವ ಕಾರ್ಯಕ್ರಮಗಳು, ಕಾನೂನು ಶಿಬಿರ ಹಾಗೂ ಮಾಜಿ ದೇವದಾಸಿ ಮಹಿಳೆಯರಿಗಾಗಿ ಆರೋಗ್ಯ ಶಿಬಿರಗಳನ್ನು ಕೈಗೊಳ್ಳಲಾಗುತ್ತಿದೆ.

**9. ಮಾಜಿ ದೇವದಾಸಿಯರಿಗೆ ಮಾಸಾಶನ:–**

45 ವರ್ಷ ಮೀರಿದ ಮಾಜಿ ದೇವದಾಸಿಯರಿಗೆ ಕನಿಷ್ಠ ಜೀವನ ನಡೆಸಲು ಸಹಕಾರಿಯಾಗುವಂತೆ, ರೂ. 1500/–ಗಳ ಮಾಸಾಶನವನ್ನು ನೀಡಲಾಗುತ್ತಿದೆ.

**10. ಮಾಜಿ ದೇವದಾಸಿಯರಿಗೆ ವಸತಿ ಯೋಜನೆ :–**

ನಿವೇಶನವುಳ್ಳ ವಸತಿರಹಿತ ಮಾಜಿ ದೇವದಾಸಿ ಮಹಿಳೆಯರಿಗೆ ವಸತಿಯೋಜನೆಯನ್ನು ರಾಜೀವ್‌ಗಾಂಧಿಗ್ರಾಮೀಣ ವಸತಿ ನಿಗಮದ ಮುಖಾಂತರಘಟಕ ವೆಚ್ಚ ಗ್ರಾಮಾಂತರ ಪ್ರದೇಶದಲ್ಲಿ ರೂ.1.75 ಲಕ್ಷ ಹಾಗೂ ನಗರ ಪ್ರದೇಶದಲ್ಲಿ ರೂ.2.00 ಲಕ್ಷಅನುದಾನದಲ್ಲಿ ಅನುಷ್ಠಾನ ಮಾಡಲಾಗುತ್ತಿದೆ.

**11. ಮಹಿಳಾ ತರಬೇತಿ ಯೋಜನೆ:–**

ಆರ್ಥಿಕವಾಗಿ ಹಿಂದುಳಿದ ಮಹಿಳೆಯರು, ದಮನಿತ ಮಹಿಳೆಯರು ಮತ್ತು ವಿಶೇಷ ವರ್ಗದವರಿಗೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಮಹಿಳೆಯರಿಗೆ ಕೌಶಲ್ಯತರಬೇತಿ ನೀಡಿ, ಅವರಲ್ಲಿ ಉದ್ಯಮಶೀಲತೆಯನ್ನು ಬೆಳೆಸುವ ಗುರಿಯನ್ನು ಹೊಂದಲಾಗಿದೆ.

**12.ಬಡ್ಡಿ ಸಹಾಯಧನ ಯೋಜನೆ (ಕರ್ನಾಟಕರಾಜ್ಯಆರ್ಥಿಕ ಹಣಕಾಸು ನಿಗಮ ಮೂಲಕ) :–**

ಕರ್ನಾಟಕರಾಜ್ಯ ಹಣಕಾಸು ನಿಗಮದ ಮೂಲಕ ಕನಿಷ್ಟ ರೂ.5.00 ಲಕ್ಷದಿಂದ ರೂ.200.00 ಲಕ್ಷಗಳ ಸಾಲವನ್ನು ಹಾಗೂ ಕರ್ನಾಟಕರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಶೇ. 10ರಷ್ಟು ಬಡ್ಡಿ ಸಹಾಯಧನವನ್ನು ಸಣ್ಣ/ ಮಧ್ಯಮಕೈಗಾರಿಕೆ ಹಾಗೂ ಸೇವಾ ಘಟಕಗಳನ್ನು ಪ್ರಾರಂಭಿಸಿ ಉದ್ಯೋಗ ಚಟುವಟಿಕೆಗಳಲ್ಲಿ ತೊಡಗುವ ಮಹಿಳಾ ಉದ್ದಿಮೆದಾರರನ್ನು ಪ್ರೋತ್ಸಾಹಿಸುವ ಸಲುವಾಗಿ ನೀಡಲಾಗುತ್ತಿದೆ.

**13.ಮಹಿಳಾ ಅಭಿವೃದ್ಧಿ ನಿಗಮದ ಮೂಲಕ ಮಹಿಳೆಯರಿಗೆ ಬಡ್ಡಿ ಸಹಾಯಧನ (ಇಂದಿರಾ ಯೋಜನೆ):–**

ಈ ಯೋಜನೆಯಡಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿಇಲಾಖೆಯಲ್ಲಿಕಾರ್ಯ ನಿರ್ವಹಿಸುತ್ತಿರುವ ಮೇಲ್ವಿಚಾರಕಿಯರಿಗೆಕಾರ್ಯದಕ್ಷತೆಯನ್ನು ಹೆಚ್ಚಿಸಲು ದ್ವಿಚಕ್ರ ವಾಹನ ಖರೀದಿಗಾಗಿ ರೂ.50,000 ಗಳ ಬಡ್ಡಿರಹಿತ ಸಾಲವನ್ನು ನೀಡಲಾಗುತ್ತಿದೆ.

*****

## ಅನುಬಂಧ–2

## ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಸಂಬಂಧಿಸಿದಂತೆ ಗರ್ಭಿಣಿಯರಿಗೆ ಮತ್ತು ಬಾಣಂತಿಯರಿಗೆ ರೂಪಿಸಿರುವ ಯೋಜನೆಗಳ ಬಗ್ಗೆ ಸಮಗ್ರ ಮಾಹಿತಿ

**ಮಾತೃಪೂರ್ಣ ಯೋಜನೆ:** ಗರ್ಭಿಣಿ ಮತ್ತು ಬಾಣಂತಿಯರಿಗೆ ಪೌಷ್ಠಿಕಾಂಶಯುಕ್ತ ಮಧ್ಯಾಹ್ನದ ಬಿಸಿಯೂಟವನ್ನು ಅಂಗನವಾಡಿ ಕೇಂದ್ರದಲ್ಲಿಯೇ ನೀಡುವ "ಮಾತೃಪೂರ್ಣ" ಯೋಜನೆಯನ್ನು 2017 ಅಕ್ಟೋಬರ್ 2ನೇ ತಾರೀಖಿನಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗುತ್ತಿದೆ. ಮಹಿಳೆಯರಿಗೆ ಆಹಾರ ಭದ್ರತೆಯನ್ನು ಒದಗಿಸುವ ಜೊತೆಗೆ ಹೆರಿಗೆ ಸಮಯದಲ್ಲಿನ ಗರ್ಭಿಣಿ ಹಾಗೂ ಶಿಶುಗಳ ಮರಣ ಪ್ರಮಾಣ ಮತ್ತು ಕಡಿಮೆ ತೂಕದ ಮಕ್ಕಳ ಜನನ ನಿಯಂತ್ರಣ ಯೋಜನೆಯ ಉದ್ದೇಶವಾಗಿರುತ್ತದೆ.

ಈ ಪೂರ್ಣ ಊಟದಲ್ಲಿ ಅನ್ನ, ಸಾಂಬಾರ್, ಪಲ್ಯದ ಜೊತೆಗೆ ಬೇಯಿಸಿದ ಮೊಟ್ಟೆ, 200 ಮಿ.ಲೀ ಹಾಲು ಮತ್ತು ಚಿಕ್ಕಿಯನ್ನು ತಿಂಗಳಿಗೆ ಕನಿಷ್ಠ 25 ದಿನಗಳು ನೀಡಲಾಗುತ್ತಿದೆ. ಈ ಒಂದು ಪೂರ್ಣ ಊಟದಿಂದ ಗರ್ಭಿಣಿ ಮತ್ತು ಬಾಣಂತಿಯರಿಗೆ ಪ್ರತಿದಿನಕ್ಕೆ ಬೇಕಾಗುವ ಪ್ರೋಟೀನ್ ಮತ್ತು ಕ್ಯಾಲ್ಷಿಯಂ ಕ್ಯಾಲೋರಿ ಅಂಶಗಳಲ್ಲಿ ಶೇ.40–45 (RDA -1342 ಕ್ಯಾಲೋರಿ, 41 ಗ್ರಾಂಪ್ರೋಟೀನ್, 578 ಗ್ರಾಂ ಕ್ಯಾಲ್ಷಿಯಂ) ಗಳಷ್ಟು ಒದಗಿಸಿದಂತಾಗುತ್ತದೆ. ಪ್ರತಿ ಫಲಾನುಭವಿಗೆ ಪ್ರತಿ ದಿನಕ್ಕೆ ರೂ.21/–ರ (ರೂ.9.50/– ಸೇರಿದಂತೆ) ಘಟಕ ವೆಚ್ಚವನ್ನು ನಿಗದಿಪಡಿಸಲಾಗಿದೆ. ಕಬ್ಬಿಣಾಂಶ ಹಾಗೂ ಕ್ಯಾಲ್ಷಿಯಂ ಮಾತ್ರೆ ಸೇವನೆಗೆ ಬೆಂಬಲ ಹಾಗೂ ಪ್ರತಿ ತಿಂಗಳು ಗರ್ಭಿಣಿಯರು ತೂಕವನ್ನು ಪರಿಶೀಲಿಸಲಾಗುತ್ತಿದೆ.

**ಪ್ರಧಾನ ಮಂತ್ರ ಮಾತೃವಂದನಾ ಯೋಜನೆ:** 2010–11ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗಿದ್ದು ಇಂದಿರಾಗಾಂಧಿ ಮಾತೃತ್ವ ಸಹಯೋಗ ಯೋಜನೆ (ಐಜಿಎಮ್‌ಎಸ್‌ವೈ)ಯನ್ನು 2018–19 ನೇ ಸಾಲಿನಿಂದ ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ ಎಂಬ ಹೆಸರಿನಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ವಿಸ್ತರಿಸಲಾಗಿದೆ. ಈ ಯೋಜನೆಯು 60:40 ಕೇಂದ್ರ:ರಾಜ್ಯ ಸರ್ಕಾರದ ಧನ ಸಹಾಯ ಯೋಜನೆಯಾಗಿದೆ. 0–6 ತಿಂಗಳವರೆಗೆ ಕೇವಲ ತಾಯಿ ಎದೆ ಹಾಲುಣಿಸುವುದು, ಹೆರಿಗೆಯಾದ ಒಂದು ಗಂಟೆಯೊಳಗೆ ಎದೆ ಹಾಲುಣಿಸುವುದು ಹಾಗೂ ಅತಿ ಸಣ್ಣಮಕ್ಕಳಿಗೆ ಎದೆ ಹಾಲುಣಿಸುವ ಅಭ್ಯಾಸಗಳನ್ನು (ಐವೈಸಿಎಫ್)ಬೆಳಸಿಕೊಳ್ಳುವ ಬಗ್ಗೆ ಮಹಿಳೆಯರನ್ನು ಪ್ರೋತ್ಸಾಹಿಸುವುದು ಹಾಗೂ ಗರ್ಭಿಣಿಯರಿಗೆ ಬಾಣಂತಿಯರಿಗೆ ಆರೋಗ್ಯ ಮಟ್ಟವನ್ನು ಸುಧಾರಿಸುವ ನಿಟ್ಟಿನಲ್ಲಿ ಉತ್ತಮ ವಾತಾವರಣವನ್ನು ಸೃಷ್ಟಿಸಲು ನಗದು ರೂಪದಲ್ಲಿ ಪ್ರೋತ್ಸಾಹಧನ ನೀಡಲಾಗುವುದು. ಮೊದಲನೆ ಕಂತು ರೂ.1000/–ಗಳನ್ನು, ಗರ್ಭಿಣಿಯಾಗಿ 6 ತಿಂಗಳಲ್ಲಿ, ಎರಡನೇ ಕಂತು ರೂ.2000/– ಗಳನ್ನು ಗರ್ಭಿಣಿಯಾಗಿ 6 ತಿಂಗಳ ನಂತರ ನೀಡಲಾಗುವುದು. ಮೂರನೇಯ ಕಂತು ರೂ.2000/– ಗಳನ್ನು ಮಗು ಮೊದಲನೇ ಹಂತದ ಚುಚ್ಚುಮದ್ದು ಪಡೆದ ನಂತರ ಒಟ್ಟು 3 ಕಂತುಗಳಲ್ಲಿ ರೂ.5000/– ಗಳ ಹೆರಿಗೆ ಭತ್ಯೆಯನ್ನು ನೇರ ನಗದು ವರ್ಗಾವಣೆ ಮೂಲಕ ಫಲಾನುಭವಿಯ ಖಾತೆಗೆ ಜಮಾ ಮಾಡಲಾಗುವುದು. ಮೇಲ್ಕಂಡ ಫಲಾನುಭವಿಗಳು ಎನ್‌ಆರ್‌ಹೆಚ್‌ಎಮ್ ಅಡಿ ಜನನಿ ಸುರಕ್ಷಾ ಯೋಜನೆಯ ಸೌಲಭ್ಯಕ್ಕೆ ಅರ್ಹರಾಗಿರುತ್ತಾರೆ. 2019–20ನೇ ಸಾಲಿಗೆ ರೂ.1000.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿದ್ದು, ಜನವರಿ–2020ರ ಅಂತ್ಯಕ್ಕೆ 2,65,806 ಫಲಾನುಭವಿಗಳಿಗೆ ಯೋಜನೆಯ ಸೌಲಭ್ಯವನ್ನು ಒದಗಿಸಲಾಗಿದ್ದು, ಇದಕ್ಕಾಗಿ ರೂ.19327.00 ಲಕ್ಷಗಳ ವೆಚ್ಚವನ್ನು ಭರಿಸಲಾಗಿದೆ.

**ಮುಖ್ಯಮಂತ್ರಿ ಮಾತೃಶ್ರೀ ಯೋಜನೆ:** ಸದರಿ ಯೋಜನೆಯಡಿ ಬಿ.ಪಿ.ಎಲ್/ಆದ್ಯತಾ ಕುಟುಂಬದ ಗರ್ಭಿಣಿಯರಿಗೆ ಹೆರಿಗೆ ಪೂರ್ವದ 3 ತಿಂಗಳು ಮತ್ತು ಬಾಣಂತಿಯರಿಗೆ ಹೆರಿಗೆ ನಂತರದ 3 ತಿಂಗಳ ಕಾಲ ಮಾಸಿಕ ರೂ.1,000/–ಗಳ ಸಹಾಯಧನವನ್ನು ಅವರ ಆಧಾರ್ ಲಿಂಕ್ಡ್ ಬ್ಯಾಂಕ್ ಖಾತೆಗೆ ನೇರವಾಗಿ ವರ್ಗಾಯಿಸಲಾಗುವುದು. ಸದರಿ ಯೋಜನೆಯು ಮೊದಲ 2 ಮಕ್ಕಳಿಗೆ ಅನ್ವಯವಾಗುತ್ತದೆ.

ಉದ್ದೇಶಗಳು:

- ಈ ಯೋಜನೆಯಡಿ ನೀಡುವ ನಗದು ರೂಪದ ಸಹಾಯ ಧನವು ಪ್ರಸವದ ಮೊದಲು ಹಾಗೂ ಪ್ರಸವದ ನಂತರ ಮಹಿಳೆಯು ಸಾಕಷ್ಟು ವಿಶ್ರಾಂತಿ ಪಡೆಯಲು.
- ಗರ್ಭಿಣಿ ಹಾಗೂ ಬಾಣಂತಿಯರ ಪೌಷ್ಟಿಕತೆ ಮತ್ತು ಆರೋಗ್ಯ ಮಟ್ಟ ಉತ್ತಮಗೊಳ್ಳುವುದರಿಂದ ಕಡಿಮೆ ತೂಕವುಳ್ಳ ಶಿಶುವಿನ ಜನನವನ್ನು ಕಡಿಮೆಗೊಳಿಸಲು.
- ಸುರಕ್ಷಿತ ಹೆರಿಗೆಗೆ ಸಹಾಯಕವಾಗಲು.

ಸದರಿ ಯೋಜನೆಯಡಿ 2019–20ನೇ ಸಾಲಿಗೆ ರೂ.47000.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿದ್ದು, ಜನವರಿ–2020ರ ಅಂತ್ಯಕ್ಕೆ 4,96,128 ಫಲಾನುಭವಿಗಳಿಗೆ ಯೋಜನೆಯ ಸೌಲಭ್ಯವನ್ನು ಒದಗಿಸಲಾಗಿದ್ದು, ಇದಕ್ಕಾಗಿ ರೂ.6936.00 ಲಕ್ಷಗಳ ವೆಚ್ಚವನ್ನು ಭರಿಸಲಾಗಿದೆ.

******

# ಅನುಬಂಧ-3

## ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಹಿರಿಯ ನಾಗರಿಕರಿಗಾಗಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ಮಾಹಿತಿ

2011ರ ಜನಗಣತಿಯ ಪ್ರಕಾರ ಕರ್ನಾಟಕದಲ್ಲಿನ ಒಟ್ಟು ಜನಸಂಖ್ಯೆಯ ಶೇ 7.72ರಷ್ಟು ಜನ 60 ವರ್ಷ ಮೀರಿದವರಾಗಿರುತ್ತಾರೆ. ಜನ ಸಾಮಾನ್ಯರಿಗೆ ಸರ್ಕಾರವು ಆರೋಗ್ಯ ಪಾಲನೆ ಹಾಗೂ ಇನ್ನಿತರ ಸಂಬಂಧಿತ ಸೌಲಭ್ಯಗಳನ್ನು ವಿಸ್ತರಿಸಿರುವುದರಿಂದ ಜೀವಿತಾವಧಿಯು ಉತ್ತಮಗೊಂಡಿರುತ್ತದೆ. ಈಗಿನ ಸುಧಾರಿತ ಜೀವಿತಾವಧಿಯ ಆರೋಗ್ಯ ಪಾಲನೆ ಮತ್ತು ಸಾಮಾನ್ಯ ಜನತೆಗಾಗಿ ಭಾರತ ಸಂವಿಧಾನದ ಅನುಚ್ಛೇದ 41ರ ಅಡಿಯಲ್ಲಿ ಪ್ರಕಟಪಡಿಸಿದಂತೆ ತನ್ನ ಹಿರಿಯ ನಾಗರಿಕರಿಗೆ ಉತ್ತಮ ಗುಣಮಟ್ಟದ ಜೀವನವನ್ನು ಒದಗಿಸಿ ಕೊಡುವುದನ್ನು ಖಚಿತಪಡಿಸಿಕೊಳ್ಳುವ ಧ್ಯೇಯದಿಂದ ಕರ್ನಾಟಕ ರಾಜ್ಯವು ಹಿರಿಯ ನಾಗರಿಕರಿಗಾಗಿ ಸರ್ಕಾರಿ ಆದೇಶ ಸಂಖ್ಯೆ:ಮಮಇ/314/ಎಸ್.ಜಿ.ಡಿ/2003 ದಿನಾಂಕ:05-09-2003ರನ್ವಯ ಕಾರ್ಯನೀತಿಯನ್ನು ರೂಪಿಸಿದೆ.

**ರಾಜ್ಯ ನೀತಿಯ ಉದ್ದೇಶ:**

- ಹಿರಿಯ ನಾಗರಿಕರ ಹಕ್ಕುಗಳ ಸಂರಕ್ಷಣೆ.
- ಹಿರಿಯ ನಾಗರಿಕರಿಗೆ ಆರ್ಥಿಕ ಭದ್ರತೆ, ಆರೋಗ್ಯ ಸೌಲಭ್ಯಗಳು ಹಾಗೂ ಆಶ್ರವನ್ನು ಒದಗಿಸುವುದು.
- ಹಿರಿಯ ನಾಗರಿಕರನ್ನು ನಿಂದಿಸುವ ಮತ್ತು ಅವರನ್ನು ಅನುಚಿತವಾಗಿ ಉಪಯೋಗಿಸಿಕೊಳ್ಳುವುದರ ವಿರುದ್ಧ ರಕ್ಷಣೆ ಒದಗಿಸುವುದು.
- ಗ್ರಾಮಾಂತರ ಪ್ರದೇಶಗಳಲ್ಲಿ ವಾಸಿಸುತ್ತಿರುವ ವೃದ್ಧರಿಗೆ ನಗರ ಪ್ರದೇಶಗಳಲ್ಲಿರುವಂತೆ ಸಮಾನ ಅವಕಾಶಗಳನ್ನು ಒದಗಿಸಲು ಕಾರ್ಯಕ್ರಮಗಳನ್ನು ರೂಪಿಸುವುದು.
- ಹಿರಿಯ ನಾಗರಿಕರು ರಚನಾತ್ಮಕ, ಸುಭಿಕ್ಷ ಮತ್ತು ತೃಪ್ತಿಕರ ಜೀವನವನ್ನು ನಡೆಸಲು ಅವಕಾಶಗಳನ್ನು ನೀಡುವುದು.
- ಹಿರಿಯ ನಾಗರಿಕರೂ ಸಹ ಸಂಪನ್ಮೂಲ ವ್ಯಕ್ತಿಗಳಾಗಿದ್ದು ಕುಟುಂಬಕ್ಕೆ ಮತ್ತು ಸಮಾಜಕ್ಕೆ ಉಪಯುಕ್ತ ಸೇವೆಯನ್ನು ಸಲ್ಲಿಸಿರುತ್ತಾರೆ ಎಂಬುದನ್ನು ರಾಜ್ಯವು ಗುರುತಿಸುತ್ತದೆ.
- ಈ ನೀತಿಯು ವಯಸ್ಸಾದ ಹಿರಿಯರ ಕಲ್ಯಾಣಕ್ಕಾಗಿ ಆಯವ್ಯಯ ಹಂಚಿಕೆಯನ್ನು ಮಾಡುವ ಪ್ರಾಮುಖ್ಯತೆಯನ್ನು ಮನಗಂಡಿದೆ.
- ರಾಜ್ಯ ವೃದ್ಧಾಪ್ಯ ನೀತಿಯು ಹಿರಿಯರ ಆರೋಗ್ಯ ಕ್ಷೇಮಾಭಿವೃದ್ಧಿ, ಆರ್ಥಿಕ ಭದ್ರತೆ, ವಸತಿ ಮತ್ತು ಆಶ್ರಯ, ಆಸ್ತಿ ಮತ್ತು ಜೀವದ ರಕ್ಷಣೆ ತೆಗೆದುಕೊಳ್ಳಬೇಕಾದ ಇತರೆ ಕ್ಷೇತ್ರಗಳು ಮತ್ತು ಅನುಷ್ಠಾನ ಎಂಬ ಅನುಚ್ಛೇದಗಳನ್ನು ಹೊಂದಿದೆ. ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಕಾರ್ಯಪಡೆಯನ್ನು (ಟಾಸ್ಕ್ ಫೋರ್ಸ್‌ಅನ್ನು) ರಚಿಸಿದ್ದು, ಕಾರ್ಯಪಡೆಯು ರಾಜ್ಯ ನೀತಿಯ ಅನುಷ್ಠಾನದ ಮೇಲ್ವಿಚಾರಣೆಯನ್ನು ನಡೆಸುತ್ತಿದೆ.

### ರಾಜ್ಯ ಸರ್ಕಾರವು ಹಿರಿಯ ನಾಗರಿಕರ ಶ್ರೇಯೋಭಿವೃದ್ಧಿಗಾಗಿ ಹಮ್ಮಿಕೊಂಡಿರುವ ಯೋಜನೆಗಳು

1. **ವೃದ್ಧಾಶ್ರಮಗಳು:**

ರಾಜ್ಯದ 30 ಜಿಲ್ಲೆಗಳಲ್ಲಿ 27 ವೃದ್ಧಾಶ್ರಮಗಳನ್ನು ನಡೆಸಲು ಸ್ವಯಂ ಸೇವಾ ಸಂಸ್ಥೆಗಳಿಗೆ ಅನುದಾನವನ್ನು ನೀಡಲಾಗುತ್ತಿದೆ ಹಾಗೂ 2018-19ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಣೆಯಾಗಿರುವಂತೆ 52 ಕಂದಾಯ ಉಪ ವಿಭಾಗಗಳಿಗೆ ವೃದ್ಧಾಶ್ರಮಗಳನ್ನು ಹೆಚ್ಚಿಸಿ ಘೋಷಿಸಲಾಗಿರುತ್ತದೆ. ಈ ಯೋಜನೆಯಡಿಯಲ್ಲಿ 25 ವೃದ್ಧರು ಇರುವ ಒಂದು ಘಟಕಕ್ಕೆ ಸಿಬ್ಬಂದಿ ವೆಚ್ಚ, ನಿರ್ವಹಣಾ ವೆಚ್ಚ, ಔಷಧಿ, ಕಟ್ಟಡ ಬಾಡಿಗೆ, ವೃತ್ತ ಪತ್ರಿಕೆ ಹಾಗೂ ಇತರೆ ವೆಚ್ಚಗಳಿಗಾಗಿ ಒಟ್ಟು ವಾರ್ಷಿಕ ರೂ.8.00ಲಕ್ಷಗಳ ಅನುದಾನವನ್ನು ಜಿಲ್ಲಾ ಪಂಚಾಯತ್, ಮೂಲಕ ನೀಡಲಾಗುತ್ತದೆ. ಯೋಜನಾ ವೆಚ್ಚದ ಶೇ.90ರಷ್ಟು ಅನುದಾನವನ್ನು ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡಲಾಗುತ್ತಿದ್ದು ಉಳಿದ ಶೇ.10ರಷ್ಟನ್ನು ಸಂಸ್ಥೆಯು ಭರಿಸಬೇಕಾಗುತ್ತದೆ. ಅನಾಥ ನಿರ್ಗತಿಕ ಹಾಗೂ ಬಡತನ ರೇಖೆಗಿಂತ ಕೆಳಗಿರುವ ವೃದ್ಧರು ಈ ಸೌಲಭ್ಯವನ್ನು ಪಡೆಯಬಹುದಾಗಿರುತ್ತದೆ.

2. **ಹಿರಿಯ ನಾಗರಿಕರಿಗೆ ಸಹಾಯವಾಣಿ ಕೇಂದ್ರಗಳು:** (ಶುಲ್ಕ ರಹಿತ ದೂರವಾಣಿ ಸಂಖ್ಯೆ:1090)

ಹಿರಿಯ ನಾಗರಿಕರು ಕಿರುಕುಳ, ಹಣಕಾಸಿನ ಶೋಷಣೆ, ಮಾನಸಿಕ ತುಮುಲ ಮತ್ತು ದುರ್ಬಲರಾಗಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇಂತಹ ಸಮಸ್ಯೆಗಳ ನಿವಾರಣೆಗಾಗಿ ಹಾಗೂ ತುರ್ತು ಸಹಾಯಕ್ಕಾಗಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ, ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಿಂದ ದಿನದ 24 ಗಂಟೆ ನಡೆಸಲಾಗುತ್ತಿದೆ. ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ನಡೆಸುವ ಸ್ವಯಂ ಸೇವಾ ಸಂಸ್ಥೆಗಳಿಗೆ ಆವರ್ತಕ ಹಾಗೂ ಅನಾವರ್ತಕ ವೆಚ್ಚಗಳು ಸೇರಿ ವಾರ್ಷಿಕ ರೂ.7.15ಲಕ್ಷಗಳ ಅನುದಾನವನ್ನು ನೀಡಲಾಗುತ್ತಿದೆ. 2016-17ನೇ ಸಾಲಿನಿಂದ ಆನ್‌ಲೈನ್ ಮೂಲಕ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮ ವಹಿಸಲಾಗಿದೆ.

3. **ಹಗಲು ಯೋಗಕ್ಷೇಮ ಕೇಂದ್ರಗಳು:**

ರಾಜ್ಯದ ಉಡುಪಿ, ರಾಮನಗರ, ಬೀದರ್, ತುಮಕೂರು, ಕೋಲಾರ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ 24 ಜಿಲ್ಲೆಗಳಲ್ಲಿ ಪ್ರತಿ ಜಿಲ್ಲೆಗೆ ಒಂದರಂತೆ 25 ಹಗಲು ಯೋಗಕ್ಷೇಮ ಕೇಂದ್ರಗಳನ್ನು (ಬೆಂಗಳೂರಿನಲ್ಲಿ 2) ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದೆ. ಪ್ರತಿ ಕೇಂದ್ರದಲ್ಲಿ 50 ರಿಂದ 150 ವಯೋವೃದ್ಧರಿಗೆ ಅವಕಾಶ ಕಲ್ಪಿಸಿಕೊಡಲಾಗಿದೆ. ಸದರಿ ಯೋಜನೆಗೆ ವಾರ್ಷಿಕ ರೂ.11.20 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗುತ್ತಿದೆ. ಈ ಹಗಲು ಯೋಗಕ್ಷೇಮ ಕೇಂದ್ರಗಳ ಮಂಜೂರಾತಿಗೆ 2016-17ನೇ ಸಾಲಿನಿಂದ ಆನ್‌ಲೈನ್ ಮೂಲಕ ಪ್ರಸ್ತಾವನೆ ಸಲ್ಲಿಸಲು ಕ್ರಮವಹಿಸಲಾಗಿದೆ.

4. **ಹಿರಿಯ ನಾಗರಿಕರಿಗೆ ಸಾಧನ ಸಲಕರಣೆ ವಿತರಣೆ ಯೋಜನೆ:**

2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಬಡತನ ರೇಖೆಗಿಂತ ಕೆಳಗಿರುವ 20000 ಹಿರಿಯ ನಾಗರಿಕರಿಗೆ ಸಾಧನ ಸಲಕರಣೆ ವಿತರಣೆ ಯೋಜನೆಯನ್ನು ಘೋಷಣೆ ಮಾಡಲಾಗಿರುತ್ತದೆ. ಈ ಯೋಜನೆಯಡಿ ಹಿರಿಯ ನಾಗರಿಕರಿಗೆ ಅವಶ್ಯಕತೆಗನುಸಾರವಾಗಿ ಕನ್ನಡಕ, ಬೇಕಾದ ಅಳತೆಗೆ ತಕ್ಕಂತೆ ಮಾರ್ಪಾಡು ಮಾಡಬಹುದಾದ ಊರುಗೋಲು, ಟ್ರೈಪಾಡ್, ಶ್ರವಣ ಸಾಧನ, ವಾಕರ್ ಮತ್ತು ಕಮೋಡ್‌ಗಳನ್ನು ಇ-ಟೆಂಡರ್ ಮೂಲಕ ಆಯ್ಕೆಯಾದ ಅಥವಾ ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರಕ್ಕೆ ಒಳಪಟ್ಟ ಸಂಸ್ಥೆಗಳಿಂದ ಖರೀದಿಸಿ ವಿತರಿಸುವ ಯೋಜನೆಯಾಗಿರುತ್ತದೆ.

**(ಸಂಪರ್ಕಿಸಬೇಕಾದವರು:** ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು)

5. **ಹಿರಿಯ ನಾಗರಿಕರಿಗೆ ಗುರುತಿನ ಚೀಟಿಗಳು :**

60 ವರ್ಷ ಮೇಲ್ಪಟ್ಟ ವಯೋಮಾನದ ಎಲ್ಲಾ ಹಿರಿಯ ನಾಗರಿಕರಿಗೆ ವಿದ್ಯುನ್ಮಾನ ನಾಗರಿಕ ಸೇವಾ ವಿತರಣಾ ನಿರ್ದೇಶನಾಲಯ, ಇ-ಆಡಳಿತ ಇಲಾಖೆಯ ಸೇವಾ ಸಿಂಧು ಯೋಜನೆಯಡಿ ಆನ್-ಲೈನ್ ತಂತ್ರಾಂಶವನ್ನು ಅಭಿವೃದ್ಧಿಪಡಿಸಿದ್ದು, ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಗುರುತಿನ ಚೀಟಿಗಳನ್ನು ಆನ್-ಲೈನ್ ವಿತರಿಸಲಾಗುತ್ತಿದೆ.

6. **ವೃದ್ಧಾಪ್ಯ ವೇತನ:**

- **ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ:**

ಈ ಯೋಜನೆಯಡಿ 60 ರಿಂದ 79 ವರ್ಷದೊಳಗಿನ ವೃದ್ಧರಿಗೆ ಮಾಹೆಯಾನ ಕೇಂದ್ರ ಸರ್ಕಾರದಿಂದ ರೂ.200/- (ರೂ.ಎರಡು ನೂರು ಮಾತ್ರ)ಗಳನ್ನು ನೀಡುತ್ತಿದೆ. ಇದರ ಜೊತೆಗೆ ರಾಜ್ಯ ಸರ್ಕಾರವು ತನ್ನ ವಂತಿಗೆ ರೂ.300/-(ರೂ. ಮುನ್ನೂರು ಮಾತ್ರ) ಸೇರಿಸಿ, ಒಟ್ಟು ರೂ. 500/-(ರೂ. ಐನೂರುಗಳು ಮಾತ್ರ)ಗಳ ಪಿಂಚಣಿಯನ್ನು ನೀಡಲಾಗುತ್ತಿದೆ.

80 ವರ್ಷ ಮೇಲ್ಪಟ್ಟ ವೃದ್ಧರಿಗೆ ಕೇಂದ್ರ ಸರ್ಕಾರವು ರೂ.500/- (ರೂ.ಐನೂರು ಮಾತ್ರ) ಮತ್ತು ರಾಜ್ಯ ಸರ್ಕಾರದ ಪಾಲು ರೂ.250/- (ರೂ. ಇನ್ನೂರ ಐವತ್ತು ಮಾತ್ರ) ಒಟ್ಟು ರೂ.750/- (ರೂ.ಏಳುನೂರ ಐವತ್ತುಗಳು ಮಾತ್ರ)ಗಳ ಪಿಂಚಣಿಯನ್ನು ಆಯಾ ತಾಲ್ಲೂಕಿನ ಕಂದಾಯ ಇಲಾಖೆಯ ತಹಶೀಲ್ದಾರರ ಕಛೇರಿ ವತಿಯಿಂದ ನೀಡಲಾಗುತ್ತಿದೆ.

- **ಸಂಧ್ಯಾ ಸುರಕ್ಷ ಯೋಜನೆ:**

ಈ ಯೋಜನೆಯಡಿ ಸಾಮಾಜಿಕ ಭದ್ರತಾ ರೂಪದಲ್ಲಿ 65 ವರ್ಷ ಮೇಲ್ಪಟ್ಟ ವೃದ್ಧರಿಗೆ ರಾಜ್ಯ ಸರ್ಕಾರದಿಂದ ಮಾಹೆಯಾನ ರೂ.500/-(ರೂ. ಐನೂರು ಮಾತ್ರ)ಗಳ ಪಿಂಚಣಿಯನ್ನು ನೀಡಲಾಗುತ್ತಿದೆ.

**ಅರ್ಹತೆಗಳು:**

1. 65 ವರ್ಷಕ್ಕಿಂತ ಮೇಲ್ಪಟ್ಟಿರಬೇಕು.
2. ಸ್ಥಳೀಯ ಕಂದಾಯ ಅಧಿಕಾರಿಗಳ ದೃಢೀಕರಣದಂತೆ ಮನವಿದಾರರ ಮತ್ತು ಅವರ ಪತಿ ಅಥವಾ ಪತ್ನಿಯರ ವಾರ್ಷಿಕ ಆದಾಯವು ರೂ.20,000/-ಕ್ಕಿಂತ ಹೆಚ್ಚಾಗಿರಬಾರದು.
3. ಮಕ್ಕಳ ಆದಾಯವು ತಂದೆ ತಾಯಿಯರ ವಾರ್ಷಿಕ ಆದಾಯಕ್ಕೆ ಪರಿಗಣಿಸಲ್ಪಡುವುದಿಲ್ಲ.
4. ಪತಿ ಅಥವಾ ಪತ್ನಿಯ ಜಂಟಿ ಖಾತೆಯಲ್ಲಿ ರೂ.10,000/-ಕ್ಕಿಂತ ಹೆಚ್ಚಿನ ಠೇವಣಿ ಇರಬಾರದು.
5. ಯಾವುದೇ ರೀತಿಯ ಇತರ ಮಾಸಾಶನ/ಪಿಂಚಣಿಯನ್ನು ಪಡೆಯುತ್ತಿರುವವರು ಈ ವೇತನಕ್ಕೆ ಅರ್ಹರಾಗಿರುವುದಿಲ್ಲ.
6. ಈ ಕೆಳಗಿನ ವಲಯಗಳಲ್ಲಿ ಇರುವ ಅಭ್ಯರ್ಥಿಗಳು ಈ ಯೋಜನೆಯಡಿ ಸೌಲಭ್ಯ ಪಡೆಯಬಹುದಾಗಿದೆ.

ಅತಿ ಸಣ್ಣ ರೈತರು, ಸಣ್ಣ ರೈತರು, ಕೃಷಿ ಕಾರ್ಮಿಕರು, ಮೀನುಗಾರರು, ಅಸಂಘಟಿತ ವಲಯಗಳಲ್ಲಿ ಕೆಲಸ ಮಾಡುವ ಕೂಲಿ ಕಾರ್ಮಿಕರು ಆದರೆ ಕಟ್ಟಡ ಕಾಮಗಾರಿಗಳಲ್ಲಿ ಕೆಲಸ ಮಾಡುವ ಕಾರ್ಮಿಕರೆಂದರೆ Regulation of Employment and conditions of services Act 1996 ಇದರ ಪ್ರಕಾರ ಅರ್ಹರಿರುವುದಿಲ್ಲ. ಈ ಯೋಜನೆಯಡಿಯಲ್ಲಿ ಸೌಲಭ್ಯ ಪಡೆಯಲು ಸಂಬಂಧಪಟ್ಟ ತಾಲ್ಲೂಕಿನ ತಹಶೀಲ್ದಾರರನ್ನು ಸಂಪರ್ಕಿಸಬಹುದು.

7. **ಹಿರಿಯ ನಾಗರಿಕರಿಗೆ ಬಸ್ ಪ್ರಯಾಣ ದರದಲ್ಲಿ ರಿಯಾಯಿತಿ ಯೋಜನೆ:**

ರಾಜ್ಯ ಸಾರಿಗೆ ಹಾಗೂ ನಗರ ಸಾರಿಗೆ ಬಸ್‌ಗಳಲ್ಲಿ 60 ವರ್ಷ ಹಾಗೂ ಅದಕ್ಕಿಂತ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರಿಗೆ ಬಸ್ ಪ್ರಯಾಣ ದರದಲ್ಲಿ ಶೇ.25ರಷ್ಟು ರಿಯಾಯಿತಿಯನ್ನು ನೀಡಲಾಗುತ್ತಿದೆ. ಈ ಯೋಜನೆಯ ಪ್ರಯೋಜನ ಪಡೆಯಲು ಹಿರಿಯ ನಾಗರಿಕರು ಇಲಾಖೆ ವತಿಯಿಂದ ನೀಡಲಾಗುವ ಗುರುತಿನ ಚೀಟಿ, ಚುನಾವಣಾ ಗುರುತಿನ ಚೀಟಿ, ಚಾಲನಾ ಪರವಾನಗಿ ಇವುಗಳಲ್ಲಿ ಯಾವುದಾದರೊಂದನ್ನು ಇಲ್ಲವೆ ಕೆ.ಎಸ್.ಆರ್.ಟಿ.ಸಿ.ಯಿಂದ ವಿತರಿಸಲಾದ ಗುರುತಿನ ಚೀಟಿ ಇವುಗಳನ್ನು ತೋರಿಸಬೇಕಾಗುತ್ತದೆ.

8. **ಜೇರಿಯಾಟ್ರಿಕ್ ಕೇಂದ್ರಗಳು:**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮೂಲಕ ರಾಜ್ಯ ಯೋಜನೆಯಡಿ ಕೋಲಾರ, ತುಮಕೂರು, ಬಿಜಾಪುರ, ಕೊಡಗು, ಚಿಕ್ಕಮಗಳೂರು ಮತ್ತು ಧಾರವಾಡ ಜಿಲ್ಲೆಗಳ ಸರ್ಕಾರಿ ಆಸ್ಪತ್ರೆಗಳಲ್ಲಿ ಹಿರಿಯ ನಾಗರಿಕರಿಗಾಗಿ ಪ್ರತ್ಯೇಕ ಜೇರಿಯಾಟ್ರಿಕ್ ವಾರ್ಡ್‌ಗಳನ್ನು ಸ್ಥಾಪಿಸಲಾಗಿದೆ. ಈ ಕೇಂದ್ರಗಳಲ್ಲಿ ಉಚಿತವಾಗಿ ಆರೋಗ್ಯ ಸೌಲಭ್ಯಗಳನ್ನು ನೀಡಲಾಗುತ್ತಿದೆ.

## ಕೇಂದ್ರ ಸರ್ಕಾರದ ಯೋಜನೆಗಳು

1. **ವೃದ್ಧಾಶ್ರಮಗಳು:**

ಕೇಂದ್ರ ಅನುದಾನ ಯೋಜನೆಯಡಿ ರಾಜ್ಯದಲ್ಲಿ 41 ವೃದ್ಧಾಶ್ರಮಗಳಿಗೆ ಅನುದಾನವನ್ನು ಮಂಜೂರು ಮಾಡುತ್ತಿದ್ದು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಈ ವೃದ್ಧಾಶ್ರಮಗಳನ್ನು ನಡೆಸಲಾಗುತ್ತಿದೆ.

2. **ಸಂಚಾರಿ ಆರೋಗ್ಯ ಘಟಕಗಳು:**

ಸ್ವಯಂ ಸೇವಾ ಸಂಸ್ಥೆಗಳು ಸಂಚಾರಿ ಆರೋಗ್ಯ ಘಟಕಗಳನ್ನು ನಡೆಸಲು ಮುಂದೆ ಬಂದಲ್ಲಿ ಕೇಂದ್ರ ಸರ್ಕಾರವು ಅನುದಾನ ನೀಡುವುದು. ರಾಜ್ಯದ ಕೋಲಾರ ಜಿಲ್ಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಯ ಮೂಲಕ ಸಂಚಾರಿ ಆರೋಗ್ಯ ಘಟಕ ನಡೆಸಲಾಗುತ್ತಿದೆ.

3. **ಡಿಮೆನ್ಷಿಯಾ ಹಗಲು ಯೋಗಕ್ಷೇಮ ಕೇಂದ್ರ:**

ಮರೆಗುಳಿತನದಿಂದ ಬಳಲುತ್ತಿರುವ ಹಿರಿಯ ನಾಗರಿಕರಿಗೆ ಚಿಕಿತ್ಸಾ ಸೌಲಭ್ಯ ನೀಡಲು ಕೇಂದ್ರ ಸರ್ಕಾರದ ವತಿಯಿಮದ ಡಿಮೆನ್ಷಿಯಾ ಹಗಲು ಯೋಗಕ್ಷೇಮ ಕೇಂದ್ರವನ್ನು ನಡೆಸುತ್ತಿದ್ದು, ದಾವಣಗೆರೆಯಲ್ಲಿ ಸ್ವಯಂ ಸೇವಾ ಸಂಸ್ಥೆಯ ಮೂಲಕ ಒಂದು ಕೇಂದ್ರ ನಡೆಯುತ್ತಿದೆ.

4. **ಪ್ರಾಂತೀಯ ಸಂಪನ್ಮೂಲ ಮತ್ತು ತರಬೇತಿ ಕೇಂದ್ರ:**

ನೈಟಿಂಗೇಲ್ ಮೆಟಿಕಲ್ ಟ್ರಸ್ಟ್ (ರಿ), ಬೆಂಗಳೂರು ಸಂಸ್ಥೆಯ ವತಿಯಿಂದ ದಕ್ಷಿಣ ಭಾರತದ ರಾಜ್ಯಗಳಾದ ಕರ್ನಾಟಕ, ತಮಿಳುನಾಡು, ಆಂಧ್ರಪ್ರದೇಶ, ಕೇರಳ ರಾಜ್ಯಗಳಲ್ಲಿ ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಸಿಬ್ಬಂದಿಗಳಿಗೆ ತರಬೇತಿಯನ್ನು ಆಯೋಜಿಸಲಾಗುತ್ತಿದೆ.

5. **ರಾಷ್ಟ್ರೀಯ ವಯೋಶ್ರೀ ಯೋಜನೆ:**

ಕೇಂದ್ರ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಮೂಲಕ ಈ ಯೋಜನೆಯು 2017ರಲ್ಲಿ ಅನುಷ್ಠಾನಗೊಳಿಸಲಾಗಿದೆ. ಈ ಯೋಜನೆಯಡಿ ಬಡತನ ರೇಖೆಗಿಂತ ಕೆಳಗಿರುವ ಹಿರಿಯ ನಾಗರಿಕರಿಗೆ ಹಾಗೂ ವೃದ್ಧಾಪ್ಯಕ್ಕೆ ಸಂಬಂಧಿಸಿದ ಅಂಗವಿಕಲತೆ, ದೃಷ್ಟಿಮಾಂದ್ಯ, ಶ್ರವಣದೋಷ, ದಂತಗಳ ಉದುರುವಿಕೆ ಮತ್ತು ಚಲನ ವೈಕಲ್ಯತೆ ಹೊಂದಿರುವವರಿಗೆ ಸದ್ಯದಲ್ಲಿ ಬೆಂಗಳೂರು ಹಾಗೂ ಧಾರವಾಡ ಜಿಲ್ಲೆಗಳಲ್ಲಿ ಶಿಬಿರಗಳನ್ನು ಏರ್ಪಡಿಸಿ ವೃದ್ಧರಿಗೆ ಅವಶ್ಯವಿರುವ ಸಾಧನ ಸಲಕರಣಗಳನ್ನು ಅಂದಾಜು ಮಾಡಿ ಕೇಂದ್ರ ಸರ್ಕಾರದಡಿ ಸಾರ್ವಜನಿಕ ಉದ್ದಿಮೆಯಾಗಿ ಕಾರ್ಯನಿರ್ವಹಿಸುತ್ತಿರುವ ಭಾರತೀಯ ಕೃತಕ ಅಂಗಾಂಗಳ ಉತ್ಪಾದನಾ ನಿಗಮ(ಅಲಿಂಕೋ) ಸಂಸ್ಥೆಯ ವತಿಯಿಂದ ಉಚಿತವಾಗಿ ವಿತರಿಸಲಾಗುವುದು.

6. **ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯ್ದೆ 2007**

ಕೇಂದ್ರ ಸರ್ಕಾರವು ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯ್ದೆ 2007ನ್ನು ಜಾರಿಗೊಳಿಸಿದ್ದು, ಇದನ್ನು ದಿನಾಂಕ:01-04-2008ರಿಂದ ರಾಜ್ಯ ಸರ್ಕಾರದಲ್ಲಿ ಜಾರಿಗೊಳಿಸಿ ಅಧಿಸೂಚನೆಯನ್ನು ಹೊರಡಿಸಲಾಗಿದೆ. ಸದರಿ ಕಾಯ್ದೆಯ ಪರಿಚ್ಛೇದ 7ರ ಉಪನಿಯಮ (1)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಪ್ರತಿ ಕಂದಾಯ ಉಪವಿಭಾಗದಲ್ಲಿ ಒಂದು ನ್ಯಾಯಮಂಡಳಿಯನ್ನು ಸ್ಥಾಪಿಸಲಾಗಿದೆ ಹಾಗೂ ಸದರಿ ಕಾಯ್ದೆಯ ಪರಿಚ್ಛೇದ 7ರ ಉಪನಿಯಮ (2)ರನ್ವಯ ನಿರ್ವಹಣಾ ಮಂಡಳಿಯ ಅಧ್ಯಕ್ಷರನ್ನಾಗಿ ಆಯಾ ಕಂದಾಯ ಉಪವಿಭಾಗದ ಸಹಾಯಕ ಆಯುಕ್ತರನ್ನು (ಉಪ ವಿಭಾಗಾಧಿಕಾರಿರವರನ್ನು) ನೇಮಕ ಮಾಡಲಾಗಿದೆ.

ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯಿದೆ 2007(ಕೇಂದ್ರ ಶಾಸನ 2007ರ ನಿಯಮ-56) ಪರಿಚ್ಛೇದ 7ರನ್ವಯ ಸ್ಥಾಪಿಸಿರುವ ನಿರ್ವಹಣಾ ನ್ಯಾಯಮಂಡಳಿಯ ತೀರ್ಪಿನ ವಿರುದ್ಧ ಮೇಲ್ಮನವಿಯನ್ನು ಅಂಗೀಕರಿಸಲು ನಿಯಮ 15ರ ಉಪನಿಯಮ(1)ರ ಮೇರೆಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಪ್ರತಿ ಜಿಲ್ಲೆಗೆ ಒಂದರಂತೆ "ಮೇಲ್ಮನವಿ ನ್ಯಾಯಮಂಡಳಿ"ಯನ್ನು ಹಾಗೂ ಸದರಿ ಕಾಯ್ದೆಯ ಸೆಕ್ಷನ್ 15 ಉಪನಿಯಮ 2ರನ್ವಯ ಮೇಲ್ಮನವಿ ನ್ಯಾಯಮಂಡಳಿಯ" ಅಧ್ಯಕ್ಷರನ್ನಾಗಿ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳನ್ನು ನೇಮಕ ಮಾಡಲಾಗಿದೆ.

ಪಾಲಕರ ಪೋಷಣೆ, ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣೆ ಕಾಯ್ದೆ 2007(ಕೇಂದ್ರ ಶಾಸನ 2007ರ ನಿಯಮ-56)ರ ಕಾಯ್ದೆಯ ಪರಿಚ್ಛೇದ 18(1)ರನ್ವಯ ಆಯಾ ಜಿಲ್ಲೆಯ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರನ್ನು ನಿರ್ವಹಣಾಧಿಕಾರಿಗಳೆಂದು ಪದನಾಮಗೊಳಿಸಿ ಸರ್ಕಾರವು ದಿ: 13-09-2010ರಂದು ಆದೇಶಿಸಿದೆ.

ಸದರಿ ಕಾಯ್ದೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ರಾಜ್ಯ ಪರಿಷತ್ ಹಾಗೂ ಜಿಲ್ಲಾ ಮಟ್ಟದ ಸಮಿತಿಯನ್ನು ರಚಿಸಿ ದಿ:22-08-2011ರಂದು ಅಧಿಸೂಚನೆ ಹೊರಡಿಸಲಾಗಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ:ಮಮಇ/11/ಪಿಹೆಚ್‌ಪಿ/2012 ದಿನಾಂಕ:23-09-2013ರಲ್ಲಿ ಸರ್ಕಾರೇತರ ಸದಸ್ಯರನ್ನು ಸೇರಿದಂತೆ ರಾಜ್ಯ ಪರಿಷತ್‌ನ ಸದಸ್ಯರನ್ನು ನೇಮಕ ಮಾಡಲಾಗಿರುತ್ತದೆ. ಮಾನ್ಯ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ಸಭೆಗಳನ್ನು ನಡೆಸಲಾಗಿರುತ್ತದೆ.

*****